ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

KB 12 YEARS 2013

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 5

12–6–2025 ಗುರುವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 5

## ಗಾಲಿ ಜನಾರ್ಧನ ರೆಡ್ಡಿಗೆ ಬಿಗ್ ರಿಲೀಫ್

### ತೆಲಂಗಾಣ ಹೈಕೋರ್ಟ್‌ನಿಂದ ಜಾಮೀನು

**ಬೆಂಗಳೂರು:** ಓಬಳಾಪುರಂ ಅಕ್ರಮ ಗಣಿಗಾರಿಕೆ ಪ್ರಕರಣದಲ್ಲಿ ಶಾಸಕ ಗಾಲಿ ಜನಾರ್ದನ ರೆಡ್ಡಿ ಅವರಿಗೆ ತೆಲಂಗಾಣ ಹೈಕೋರ್ಟ್‌ನಿಂದ ತಾತ್ಕಾಲಿಕ ರಿಲೀಫ್ ಸಿಕ್ಕಿದ್ದು, ವಿಶೇಷ ಸಿಬಿಐ ನ್ಯಾಯಾಲಯ ಇತ್ತೀಚೆಗೆ ವಿಧಿಸಿದ್ದ ಏಳು ವರ್ಷಗಳ ಜೈಲು ಶಿಕ್ಷೆಯನ್ನು ಈ ಹಂತದಲ್ಲಿ ಜಾರಿಗೊಳಿಸುವ ಅಗತ್ಯವಿಲ್ಲ ಎಂದು ಹೈಕೋರ್ಟ್ ತೀರ್ಪು ನೀಡಿ ಜನಾರ್ದನ ರೆಡ್ಡಿಗೆ ಷರತ್ತುಬದ್ಧ ಜಾಮೀನು ನೀಡಿದೆ.



ರೆಡ್ಡಿಗೆ ಷರತ್ತುಬದ್ಧ ಜಾಮೀನು ನೀಡಿರುವ ಕೋರ್ಟ್, ತಲಾ 10 ಲಕ್ಷ ಮೌಲ್ಯದ ಇಬ್ಬರು ಶ್ಯೂರಿಟಿಗಳನ್ನು ಸಲ್ಲಿಸುವಂತೆ ಸೂಚನೆ ನೀಡಿದೆ. ಅಲ್ಲದೇ, ಭಾರತ ಬಿಟ್ಟು ಹೋಗಲು ಅನುಮತಿ ಇರುವುದಿಲ್ಲ. ಗಾಲಿ ಜನಾರ್ದನ ರೆಡ್ಡಿ ಅವರ ಪಾಸ್‌ಪೋರ್ಟ್ ಅನ್ನು ಒಪ್ಪಿಸುವಂತೆಯೂ ಆದೇಶಿಸಿದೆ.

ಕಳೆದ ತಿಂಗಳು (ಮೇ 6) ಓಬಳಾಪುರಂ ಮೈನಿಂಗ್ ಕಂಪನಿಗೆ ಸಂಬಂಧಿಸಿದ ಅಕ್ರಮ ಗಣಿಗಾರಿಕೆ ಪ್ರಕರಣದಲ್ಲಿ ಸಿಬಿಐ ನ್ಯಾಯಾಲಯವು ಅಂತಿಮ ತೀರ್ಪು ನೀಡಿ ಏಳು ವರ್ಷಗಳ ಶಿಕ್ಷೆ ವಿಧಿಸಿತ್ತು.ಜನಾರ್ದನ ರೆಡ್ಡಿ ಜತೆಗೆ, ಶ್ರೀನಿವಾಸ್ ರೆಡ್ಡಿ, ವಿ.ಡಿ. ರಾಜಗೋಪಾಲ್ ಮತ್ತು ಅಲಿ ಖಾನ್ ಕೂಡ ತಪ್ಪಿತಸ್ಥರೆಂದು ಸಾಬೀತಾಗಿತ್ತು. ತೀರ್ಪು ಪ್ರಶ್ನಿಸಿ ರೆಡ್ಡಿ ಹೈಕೋರ್ಟ್ ಮೊರೆ ಹೋಗಿದ್ದರು.


ಈ ಅರ್ಜಿಯ ವಾದಗಳನ್ನು ಮಂಗಳವಾರ ಆಲಿಸಿದ್ದ ಕೋರ್ಟ್ ತೀರ್ಪನ್ನು ಇಂದಿಗೆ ಕಾಯ್ದಿರಿಸಿತ್ತು. ನ್ಯಾಯಮೂರ್ತಿ ಕೆ. ಲಕ್ಷ್ಮಣ್ ಅವರು ಸಿಬಿಐ ನ್ಯಾಯಾಲಯದ ತೀರ್ಪನ್ನು ತಾತ್ಕಾಲಿಕವಾಗಿ ತಡೆಹಿಡಿದು ಗಾಲಿ ಜನಾರ್ದನ ರೆಡ್ಡಿಗೆ ಜಾಮೀನು ನೀಡಿ ತೀರ್ಪು ನೀಡಿದ್ದಾರೆ.

## ರಾಜ್ಯದಲ್ಲಿ ಸದ್ಯಕ್ಕೆ 'ಸಚಿವ ಸಂಪುಟ ಪುನಾರಚನೆ' ಇಲ್ಲ: ಮಲ್ಲಿಕಾರ್ಜುನ ಖರ್ಗೆ

**ಕಲಬುರಗಿ:** ರಾಜ್ಯದಲ್ಲಿ ಸದ್ಯಕ್ಕೆ ಸಚಿವ ಸಂಪುಟ ಪುನಾರಚನೆ ಅಥವಾ ಕೆಪಿಸಿಸಿ ಅಧ್ಯಕ್ಷರ ಬದಲಾವಣೆಗೆ ಎಐಸಿಸಿ ಮುಂದೆ ಯಾವುದೇ ಪ್ರಸ್ತಾವನೆ ಇಲ್ಲ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಬುಧವಾರ ಹೇಳಿದರು.

ತಮ್ಮ ನಿವಾಸದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಖರ್ಗೆ, ಸಚಿವ ಸಂಪುಟ ಪುನಾರಚನೆ ಅಥವಾ ಕೆಪಿಸಿಸಿ ಅಧ್ಯಕ್ಷರ ಬದಲಾವಣೆಗೆ ನಿರ್ಧರಿಸಿದಾಗ ತಿಳಿಸುತ್ತೇವೆ ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಂಗಳವಾರ ನವದೆಹಲಿಯಲ್ಲಿ ತಮ್ಮನ್ನು ಹಾಗೂ ಎಐಸಿಸಿ ಮಾಜಿ ಅಧ್ಯಕ್ಷ ರಾಹುಲ್ ಗಾಂಧಿ ಅವರನ್ನು ಭೇಟಿಯಾದಾಗ ಕರ್ನಾಟಕದಲ್ಲಿನ ಸಚಿವ ಸಂಪುಟ ಪುನಾರಚನೆ ಅಥವಾ ಕೆಪಿಸಿಸಿ ಅಧ್ಯಕ್ಷ ಸ್ಥಾನ ಬದಲಾವಣೆ ಕುರಿತು ಯಾವುದೇ ಮಾತುಕತೆ ನಡೆಸಿಲ್ಲ ಎಂದು ಸ್ಪಷ್ಟಪಡಿಸಿದರು.



**ಬೆಂಗಳೂರು ಕಾಲ್ತುಳಿತ, ಜಾತಿ ಸಮೀಕ್ಷೆ ಬಗ್ಗೆ ಚರ್ಚೆ:** ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಕಾಲ್ತುಳಿತ ಹಾಗೂ ಜಾತಿ ಸಮೀಕ್ಷೆ ಕುರಿತು ಸಭೆಯಲ್ಲಿ ಚರ್ಚಿಸಿದೆವು. ಕಾಲ್ತುಳಿತದ ಘಟನೆ ಕಾಂಗ್ರೆಸ್ ಸೇರಿದಂತೆ ಎಲ್ಲರನ್ನೂ ಆಘಾತಕ್ಕೀಡುಮಾಡಿದೆ. ಹೀಗಾಗಬಾರದಿತ್ತು. ಇಂತಹ ಘಟನೆಗಳು ನಡೆಯದಂತೆ ಮುಂದಿನ ದಿನಗಳಲ್ಲಿ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಮುಖ್ಯಮಂತ್ರಿ ಮತ್ತು ಉಪ ಮುಖ್ಯಮಂತ್ರಿ ಸೂಚಿಸಿದ್ದೇವೆ. ಪೊಲೀಸ್ ಅಧಿಕಾರಿಗಳ ಅಮಾನತು, ಮ್ಯಾಜಿಸ್ಟ್ರೇಟ್ ತನಿಖೆ ಮತ್ತು ನ್ಯಾಯಾಂಗ ತನಿಖೆಗೆ ಆದೇಶ ಮತ್ತು ನೊಂದವರಿಗೆ ಪರಿಹಾರ ಮತ್ತಿತರ ಕ್ರಮಗಳ ಬಗ್ಗೆ ಸಿಎಂ ಮತ್ತು ಉಪ ಮುಖ್ಯಮಂತ್ರಿ ವಿವರಿಸಿದ್ದಾರೆ ಎಂದು ಹೇಳಿದರು.

ಯೋಗಿ ಆದಿತ್ಯನಾಥ್ ರಾಜೀನಾಮೆ ನೀಡಿದ್ರಾ? ಕಾಲ್ತುಳಿತದ ನೈತಿಕ ಹೊಣೆ ಹೊತ್ತು ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿ.ಕೆ.ಶಿವಕುಮಾರ್ ರಾಜೀನಾಮೆ ನೀಡಬೇಕು ಎಂಬ ಬಿಜೆಪಿಯ ಬೇಡಿ–ಕೆಗೆ ಪ್ರತಿಕ್ರಿಯಿಸಿದ ಖರ್ಗೆ, ಪ್ರಯಾಗ್‌ರಾಜ್ ಕುಂಭಮೇಳದ ವೇಳೆ ಕಾಲ್ತುಳಿತ ಸಂಭವಿಸಿದಾಗ ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ರಾಜೀನಾಮೆ ನೀಡಿದ್ರಾ? ಎಂದು ಪ್ರಶ್ನಿಸಿದರು. ಕುಂಭಮೇಳದಲ್ಲಿ ಕಾಲ್ತುಳಿತದ ಬಗ್ಗೆ ಪ್ರಶ್ನೆಗಳನ್ನು ಎತ್ತಿದಾಗ ಅವರು ನನ್ನ ಮೇಲೆ ಆಕ್ರೋಶ ವ್ಯಕ್ತಪಡಿಸಿದ್ದರು ಎಂದು ಖರ್ಗೆ ಹೇಳಿದರು.

ಜಾತಿ ಗಣತಿ ಮರು ಸಮೀಕ್ಷೆ: ಜಾತಿ ಗಣತಿ ಮರು ಸಮೀಕ್ಷೆ ಕುರಿತು ಮಾತನಾಡಿದ ಮಲ್ಲಿಕಾರ್ಜುನ ಖರ್ಗೆ, 10 ವರ್ಷಗಳ ಹಿಂದೆ ಜಾತಿ ಸಮೀಕ್ಷೆ ನಡೆಸಲಾಗಿತ್ತು. ವಿವಿಧ ಸಮುದಾಯಗಳ ಅನೇಕ ಮುಖಂಡರು, ಪ್ರತಿನಿಧಿಗಳು ಮರು ಸಮೀಕ್ಷೆ ನಡೆಸಲು ಸರ್ಕಾರಕ್ಕೆ ಬೇಡಿಕೆ ಇಟ್ಟಿದ್ದರು. ಕಾಂತರಾಜ್ ಆಯೋಗ ನೀಡಿರುವ ಸಮೀಕ್ಷಾ ವರದಿಯನ್ನು ತಿರಸ್ಕರಿಸದೆ ಮರು ಸಮೀಕ್ಷೆ ನಡೆಸುವಂತೆ ಸಿಎಂ ಹಾಗೂ ಡಿಸಿಎಂಗೆ ಸೂಚಿಸಿದ್ದೇವೆ ಎಂದರು.

ಒಬಿಸಿ ಸೇರಿದಂತೆ ಹಿಂದಿನ ಸಮೀಕ್ಷೆಯಲ್ಲಿ ಸೇರಿಸದ ಜಾತಿಗಳು ಮತ್ತು ಉಪ–ಜಾತಿಗಳನ್ನು ಸೇರಿಸಲು ಮರು ಸಮೀಕ್ಷೆ ಮಾಡಲಾಗುತ್ತದೆ. ಸಮೀಕ್ಷೆ ನಡೆಸುವ ಜನರು ಮನೆ ಮನೆಗೆ ಭೇಟಿ ನೀಡುತ್ತಾರೆ. ಹೊಸ ಮಾಹಿತಿಯನ್ನು ಸೇರಿಸಲಾಗುವುದು ಎಂದು ಎಐಸಿಸಿ ಅಧ್ಯಕ್ಷರು ಹೇಳಿದರು.

## ಚುರುಕಾದ ಮುಂಗಾರು

### ರಾಜ್ಯದಲ್ಲಿ ಮತ್ತಷ್ಟು ಹೆಚ್ಚಾಗಲಿದೆ ಮಳೆ

**ಬೆಂಗಳೂರು :** ರಾಜ್ಯದಲ್ಲಿ ಮತ್ತೆ ಮುಂಗಾರು ಚುರುಕುಗೊಂಡಿದ್ದು, ಚದುರಿದಂತೆ ಮಳೆ ಮಳೆಯಾಗಿದೆ. ಭಾನುವಾರದವರೆಗೂ ಮಳೆ ಮುಂದುವರೆಯುವ ಮುನ್ಸೂಚನೆಗಳಿದ್ದು, ದಕ್ಷಿಣ ಒಳನಾಡಿನ ಜಿಲ್ಲೆಗಳಲ್ಲಿ ವ್ಯಾಪಕ ಪ್ರಮಾಣದ ಮಳೆಯಾಗುವ ಸಾಧ್ಯತೆಗಳಿವೆ. ಕಳೆದ ಮೂರು–ನಾಲ್ಕು ದಿನಗಳಿಂದ ಮಳೆ ರಾಜ್ಯದಲ್ಲಿ ಆರಂಭವಾಗಿದ್ದು, ದಿನದಿಂದ ದಿನಕ್ಕೆ ಮಳೆ ಪ್ರಮಾಣ ಹೆಚ್ಚಾಗಲಿದೆ. ಬಂಗಾಳಕೊಲ್ಲಿಯಲ್ಲಿ ಉಂಟಾಗಿರುವ ಮೇಲ್ಮೈ ಸುಳಿಗಾಳಿ ಹಾಗೂ ಒಳನಾಡಿನಲ್ಲಿರುವ ಟ್ರಫ್‌ನ ಪ್ರಭಾವದಿಂದ ಭಾಗಶಃ ಮೋಡ ಕವಿದ ವಾತಾವರಣವಿದ್ದು, ಸಂಜೆ ಹಾಗೂ ರಾತ್ರಿ ವೇಳೆ ಮಳೆಯಾಗುತ್ತಿದೆ. ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ಮಾಹಿತಿ ಪ್ರಕಾರ ನಿನ್ನೆ ಉಡುಪಿ ಜಿಲ್ಲೆಯಲ್ಲಿ ವ್ಯಾಪಕ ಪ್ರಮಾಣದ ಮಳೆಯಾಗಿದೆ.

## ವಿದ್ಯಾರ್ಥಿಗಳ ಶಿಕ್ಷಣಕ್ಕೂ ಸಾಲದ ನೆರವು ಸಿಗಲಿ–ದಾವಿವಿಯಲ್ಲಿ ಪ್ರೊ.ಕುಂಬಾರ

**ದಾವಣಗೆರೆ:** ಕೃಷಿ, ಉದ್ಯಮ, ವ್ಯಾಪಾರ ವಹಿವಾಟುಗಳಿಗೆ ಸಾಲ ಸೌಲಭ್ಯ ನೀಡುವ ಸಹಕಾರ ಸಂಘಗಳು ವಿದ್ಯಾರ್ಥಿಗಳ ಶೈಕ್ಷಣಿಕ ಅಧ್ಯಯನಕ್ಕೂ ವಿಸ್ತರಿಸಲು ಆದ್ಯತೆ ನೀಡಬೇಕು ಎಂದು ದಾವಣಗೆರೆ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಬಿ.ಡಿ.ಕುಂಬಾರ ಸಲಹೆ ನೀಡಿದರು.

ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ಹಾಗೂ ದಾವಣಗೆರೆ ವಿಶ್ವವಿದ್ಯಾನಿಲಯ ಅರ್ಥಶಾಸ್ತ್ರ ಅಧ್ಯಯನ ವಿಭಾಗದ ವತಿಯಿಂದ ಮಂಗಳವಾರ ಏರ್ಪಡಿಸಿದ್ದ ಯುವಜನ ಹಾಗೂ ಸಹಕಾರ ಕುರಿತ ಸಂವಾದ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಹಲವಾರು ಆರ್ಥಿಕ ಸಮಸ್ಯೆಗಳ ಕಾರಣದಿಂದಾಗಿ ವಿದ್ಯಾರ್ಥಿಗಳು ಶಿಕ್ಷಣ ಪಡೆಯಲು ಸಾಧ್ಯವಾಗುತ್ತಿಲ್ಲ. ಅಂತ ವಿದ್ಯಾರ್ಥಿಗಳಿಗೆ ಸಾಲ ನೀಡಿ, ಅವರ ಭವಿಷ್ಯಕ್ಕೆ ದಾರಿಯಾಗಬೇಕು. ಶೈಕ್ಷಣಿಕ ಸಾಲಕ್ಕೆ ಸಹಕಾರ ಸಂಘಗಳಲ್ಲಿ ಅವಕಾಶ ಒದಗಿಸಿ ಕೊಡಲು ಸಂಘಟಿತ ಪ್ರಯತ್ನ ಮಾಡಬೇಕು. ನಿಯಮಾವಳಿ ತಿದ್ದುಪಡಿ ಮಾಡಿಕೊಳ್ಳಬೇಕು ಎಂದು ಮನವಿ ಮಾಡಿದರು.



ವಿದ್ಯಾರ್ಥಿಗಳು ಪದವಿ ನಂತರ ಉದ್ಯೋಗಕ್ಕೆ ಅಲೆದಾಡುವ ಬದಲಾಗಿ, ನಾಲ್ಕೈದು ಜನರು ಒಗ್ಗೂಡಿ ಸಹಕಾರ ಸಂಘ ಸ್ಥಾಪಿಸಿ ಸ್ವಂತ ವಹಿವಾಟು ನಡೆಸಬಹುದಾಗಿದೆ. ವಿದ್ಯಾರ್ಥಿಗಳಲ್ಲಿ ಸಂಘಟನೆ, ಇಚ್ಛಾಶಕ್ತಿ ಹಾಗೂ ದುಡಿಯುವ ಛಲ ಇದ್ದರೆಎಲ್ಲವೂ ಸಾಧ್ಯವಾಗಲಿದೆ. ವಿಭಿನ್ನ ರೀತಿಯಲ್ಲಿ ಆಲೋಚನೆ ಮಾಡುವತ್ತ ಗಮನ ನೀಡಬೇಕು ಎಂದು ಸಲಹೆ ನೀಡಿದರು.

ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ಅಧ್ಯಕ್ಷ ಜಿ. ನಂಜನಗೌಡ ಮಾತನಾಡಿ, ಲಾಭದ ದೃಷ್ಟಿಯ ವ್ಯವಹಾರಕ್ಕಿಂತ ಸಾಮಾಜಿಕ ಬದ್ಧತೆ, ಸೇವಾ ಮನೋಭಾವ ಮತ್ತು ಜನಪರ ಕಾಳಜಿಯು ಸಹಕಾರ ಸಂಘಗಳ ಮೂಲ ಉದ್ದೇಶವಾಗಿದೆ ಎಂದು ತಿಳಿಸಿದರು.

ಸ್ಥಳೀಯತೆಯ ಅನುಭವ, ಆತ್ಮೀಯತೆಯಿಂದ ಸಂಬಂಧದ ವ್ಯವಹಾರ ನಿರ್ವಹಣೆಯನ್ನು ಸಹಕಾರ ಸಂಘಗಳಲ್ಲಿ ಪಡೆಯುವಂತೆ ವಾಣಿಜ್ಯ ಬ್ಯಾಂಕ್‌ಗಳಲ್ಲಿ ಆತ್ಮೀಯತೆಯ ವ್ಯವಹಾರ ನಿರೀಕ್ಷಿಸಲು ಸಾಧ್ಯವಿಲ್ಲ. ಸಹಕಾರಕ್ಷೇತ್ರವು ವೈಯಕ್ತಿಕ ಲಾಭಕ್ಕಿಂತ ಸರ್ವರ ಹಿತವನ್ನು ಬಯಸುತ್ತದೆಎಂದರು.

ಸಹಕಾರ ಕುರಿತು ವಿದ್ಯಾರ್ಥಿಗಳಿಗೆ ಮಾಹಿತಿ ಕೊರತೆ ಕಾಡುತ್ತಿದೆ. ಪಠ್ಯಕ್ರಮದಲ್ಲಿ ಸಹಕಾರ ಕುರಿತು ಅಧ್ಯಯನ ಮಾಡಲು ಶಾಲೆ, ಕಾಲೇಜು ಮತ್ತು ವಿಶ್ವವಿದ್ಯಾನಿಲಯಗಳಲ್ಲಿ ಅವಕಾಶ ನೀಡಬೇಕು. ಇದರಿಂದ ಸಹಕಾರ ಕ್ಷೇತ್ರದ ಮಹತ್ವ ವಿದ್ಯಾರ್ಥಿ ಗಳಿಗೆ ತಿಳಿಯಲಿದೆ. ಅಲ್ಲದೆ ಸಹಕಾರ ವ್ಯಾಪ್ತಿ ವಿಸ್ತಾರಗೊಳ್ಳಲಿದೆ. ಅಲ್ಲದೆ ಯುವಜನರು ಆಸಕ್ತಿಯಿಂದ ಸಹಕಾರ ಕ್ಷೇತ್ರದಲ್ಲಿ ತಮ್ಮನ್ನು ತೊಡಗಿಸಿಕೊಳ್ಳಲು ಸಾಧ್ಯವಾಗಲಿದೆ ಎಂದು ಹೇಳಿದರು.

## ಅಣಬೇರು ಭದ್ರಾ ನಾಲೆ ಸೇತುವೆ ನಿರ್ಮಾಣಕ್ಕೆ ಭೂಮಿಪೂಜೆ



**ದಾವಣಗೆರೆ:** ಮಾಡಿದ ಕೆಲಸ ಶಾಶ್ವತವಾಗಿ ಉಳಿದರೆ ಮಾತ್ರ ನಾವು ಮಾಡಿದ ಕೆಲಸಗಳು ಜನಮಾನಸದಲ್ಲಿ ಉಳಿಯುತ್ತವೆ. ಈ ನಿಟ್ಟಿನಲ್ಲಿ ಅಧಿಕಾರಿಗಳು ಮತ್ತು ಗುತ್ತಿಗೆದಾರರು ಗುಣಮಟ್ಟದ ಕೆಲಸ ಮಾಡಬೇಕು ಎಂದು ಶಾಸಕ ಕೆ.ಎಸ್. ಬಸವಂತಪ್ಪ ಸೂಚನೆ ನೀಡಿದರು.

ಮಾಯಕೊಂಡ ಕ್ಷೇತ್ರದ ವ್ಯಾಪ್ತಿಯ ಅಣಬೇರು ಸಮೀಪ ಹಾದು ಹೋಗಿರುವ ಭದ್ರಾ ಎಡದಂಡೆ ಮುಖ್ಯ ನಾಲೆ, ಸಂತೇಬೆನ್ನೂರು ಸಂಪರ್ಕಿಸುವ 1.50 ಕೋಟಿ ರೂ. ವೆಚ್ಚದ ನೂತನ ಸೇತುವೆ ನಿರ್ಮಾಣಕ್ಕೆ ಸೋಮವಾರ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.

ಮಾಯಕೊಂಡ ಕ್ಷೇತ್ರದ ಹಲವಾರು ಗ್ರಾಮಗಳ ಮೂಲಕ ಹಾದು ಹೋಗಿರುವ ಭದ್ರಾ ಎಡದಂಡೆ ನಾಲೆಯು ನಮ್ಮ ರೈತರ ಜೀವನಾಡಿಯಾಗಿದೆ. ನಾಲೆಯ ಶಿಥಿಲಾವಸ್ಥೆಯ ಸೇತುವೆಗಳ ನಿರ್ಮಾಣ ನಾಲೆ ಒಳಗಿನ ಕಾಂಕ್ರೀಟ್ ಗೋಡೆಗಳ ಅಭಿವೃದ್ಧಿ ಸೇರಿ ಇತರೆ ಕಾರ್ಯಗಳಿಗೆ ಸರ್ಕಾರ ಈಗಾಗಲೇ 20 ಕೋಟಿ ರೂ. ಬಿಡುಗಡೆ ಮಾಡಿದೆ. ಹಂತ ಹಂತವಾಗಿ ನಾಲೆ ದುರಸ್ತಿ ಮತ್ತು ಸೇತುವೆ ನಿರ್ಮಾಣ ಮಾಡಲಾಗುವುದು ಎಂದರು.

ನಾಲೆಗಳು ಮತ್ತು ಸೇತುವೆಗಳನ್ನು ನಿರ್ಮಾಣ ಮಾಡಿ ಸುಮಾರು 50 ವರ್ಷ ಕಳೆದಿದೆ. ಹೀಗಾಗಿ ನಾಲೆಗಳು ಮತ್ತು ಸೇತುವೆಗಳು ಶಿಥಿಲಗೊಂಡು ಕೊನೆ ಭಾಗದ ರೈತರಿಗೆ ನೀರು ತಲುಪುತ್ತಿಲ್ಲ. ಮುಖ್ಯಮಂತ್ರಿಗಳ ಮೇಲೆ ಒತ್ತಡ ತಂದು ನಾಲೆಗಳು ಮತ್ತು ಸೇತುವೆಗಳ ಅಭಿವೃದ್ಧಿಗೆ ಮುಂದಿನ ದಿನಗಳಲ್ಲಿ ಹೆಚ್ಚಿನ ಅನುದಾನ ತರಲಾಗುವುದು ಎಂದು ಭರವಸೆ ನೀಡಿದರು.

ಅಣಬೇರು ಸಮೀಪದ ಸಂತೇಬೆನ್ನೂರು ಸಂಪರ್ಕಿಸುವ ಹಾಗೂ ರೈತರ ಜಮೀನುಗಳಿಗೆ ನಿತ್ಯ ಸಂಚರಿಸುವ ಈ ಸೇತುವೆ ಸಂಪೂರ್ಣ ಶಿಥಿಲಾವಸ್ಥೆ ತಲುಪಿತ್ತು. ಆದ್ದರಿಂದ ನೂತನ ಸೇತುವೆ ನಿರ್ಮಾಣಕ್ಕೆ 1.50 ಕೋಟಿ ರೂ. ಅನುದಾನ ನೀಡಲಾಗಿದೆ ಎಂದು ತಿಳಿಸಿದರು.

ಬಹು ವರ್ಷಗಳ ಕಾಲ ಶಿಥಿಲಗೊಂಡು ವಾಹನಗಳ ಸಂಚಾರಕ್ಕೆ ತೊಡಕಾಗಿದ್ದ ನಾಲೆಯ ಸೇತುವೆಯನ್ನು ಶಾಸಕರು ಅನುದಾನ ತಂದು ನಿರ್ಮಾಣ ಮಾಡುತ್ತಿರುವುದಕ್ಕೆ ಸುತ್ತಮುತ್ತಲ ಗ್ರಾಮಗಳ ರೈತರು, ವಾಹನಗಳ ಸವಾರರು ಶಾಸಕರಿಗೆ ಅಭಿನಂದನೆ ಸಲ್ಲಿಸಿದ್ದಾರೆ.

ಈ ವೇಳೆ ನೀರಾವರಿ ಇಲಾಖೆಯ ಸಹಾಯಕ ಅಭಿಯಂತರರಾದ ವಿಕಾಸ್, ಮನೋಜ್ ಮುಖಂಡರಾದ ಬುಡೆನ್ ಸಾಬ್, ಗ್ರಾಪಂ ಸದಸ್ಯ ರುದ್ರಪ್ಪ, ರಾಜಪ್ಪ, ಶಿವಕುಮಾರ್, ಮಹದೇವಣ್ಣ, ಪಾಲಾಕ್ಷಣ್ಣ, ಜಾಫರ್, ಶೌಕತ್ ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

## ಕಾಲ್ತುಳಿತ : ಕಳಪೆ ನಿರ್ವಹಣೆಯೇ ದುರಂತಕ್ಕೆ ಕಾರಣ

### ಬೆಂಗಳೂರು ನಗರ ಜಿಲ್ಲಾಧಿಕಾರಿ ಮುಂದೆ ಹಾಜರಾದ ಸಂತ್ರಸ್ತರು

**ಬೆಂಗಳೂರು:** ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡದ ವಿಜಯೋತ್ಸವ ವೇಳೆ ಚಿನ್ನಸ್ವಾಮಿ ಕ್ರೀಡಾಂಗಣದ ಹೊರಗೆ ಸಂಭವಿಸಿದ ಕಾಲ್ತುಳಿತದಲ್ಲಿ ಗಾಯಗೊಂಡ ಸಂತ್ರಸ್ತರು ಮತ್ತು ಮೃತರ ಕುಟುಂಬಗಳು ಸೇರಿದಂತೆ ಡಜನ್ಗಟ್ಟಲೆ ಸಾರ್ವಜನಿಕರು ಪ್ರಕರಣದ ಬಗ್ಗೆ ತನಿಖೆ ನಡೆಸುತ್ತಿರುವ ಬೆಂಗಳೂರು ನಗರ ಜಿಲ್ಲಾಧಿಕಾರಿ(ಡಿಸಿ) ಜಗದೀಶ್ ಜಿ ಅವರ ಮುಂದೆ ಬುಧವಾರ ಹಾಜರಾದರು.

ಇಂದು ಜಿಲ್ಲಾಧಿಕಾರಿ ಮುಂದೆ ವಿಚಾರಣೆಗೆ ಹಾಜರಾಗಿ ತಮ್ಮ ಹೇಳಿಕೆಗಳನ್ನು ದಾಖಲಿಸಿದ ಕೆಲವು ಸಂತ್ರಸ್ತರ ಪ್ರಕಾರ, ದುರಂತಕ್ಕೆ ಕಳಪೆ ನಿರ್ವಹಣೆಯೇ ಕಾರಣ ಎಂದು ಹೇಳಿದ್ದಾರೆ.

ಕುತ್ತಿಗೆ ಮತ್ತು ಕಾಲಿಗೆ ಗಾಯಗಳಾಗಿರುವ ಆಸ್ಟಿನ್ ಪಟ್ಟಣದ ನಿವಾಸಿ ಸೈಯದ್ ಅಬು ಜಾಫರ್ ಹೇಳುವಂತೆ, ಕೆಲವು ಖಾಸಗಿ ವ್ಯಕ್ತಿಗಳು ಸಾರ್ವಜನಿಕರ ಮೇಲೆ ಲಾಠಿ ಪ್ರಹಾರ ನಡೆಸಿದರು ಮತ್ತು ಪೊಲೀಸರು ಅವರನ್ನು ಸಮರ್ಥಿಸಿಕೊಂಡರು ಎಂದು ಹೇಳಿದ್ದಾರೆ.



ಅವರೂ ಮನುಷ್ಯರೇ. ಅವರು ಅಷ್ಟು ದೊಡ್ಡ ಜನಸಂದಣಿಯನ್ನು ನಿರ್ವಹಿಸಲು ಸಾಧ್ಯವಿಲ್ಲ. ತಳ್ಳಾಟದ ನಡುವೆ ಕೆಲವರಿಗೆ ಟಿಕೆಟ್‌ಗಳನ್ನು ನೀಡಿ ಒಳಗೆ ಪ್ರವೇಶಿಸಲು ಅನುಮತಿ ನೀಡಿದರೆ, ಇನ್ನೂ ಕೆಲವು ಖಾಸಗಿ ವ್ಯಕ್ತಿಗಳು ಲಾಠಿ ಪ್ರಹಾರ ಮಾಡುತ್ತಿದ್ದರು" ಎಂದು ಅವರು ತಿಳಿಸಿದ್ದಾರೆ.

ಕ್ರೀಡಾಂಗಣದಲ್ಲಿ ಸಂಬಂಧಪಟ್ಟವರಿಂದ ಸಹಾಯಕ್ಕಾಗಿ ಅವರು ಸಂಪರ್ಕಿಸಿದಾಗ ಯಾರೂ ಸಹಾಯ ಮಾಡಲಿಲ್ಲ ಎಂದು ಸಂತ್ರಸ್ತರು ಹೇಳಿದ್ದಾರೆ.

"ನಾನು ಗೇಟ್ ಸಂಖ್ಯೆ 21 ರಲ್ಲಿ ಬಿದ್ದೆ ಮತ್ತು ಜನರು ನನ್ನ ಕುತ್ತಿಗೆ ಮತ್ತು ಕಾಲಿನ ಮೇಲೆ ಕಾಲು ಇಟ್ಟು ತುಳಿದಾಡಿದರು. ಆದರೂ ನಾನು ಹೊರಬಂದು ಸಹಾಯ ಕೇಳುವಲ್ಲಿ ಯಶಸ್ವಿಯಾದೆ. ಆದರೆ ಯಾರೂ ಸಹಾಯ ಮಾಡಲಿಲ್ಲ. ಎರಡೂವರೆ ಗಂಟೆಗಳ ಕಾಲ, ನಾನು ನೋವಿನಿಂದ ಬಳಲುತ್ತಿದ್ದೆ. ನಾನು ಕಬ್ಬನ್ ಪಾರ್ಕ್ ಸರ್ಕಲ್ ವರೆಗೆ ನಡೆದು ಆಟೋ ತೆಗೆದು–ಕೊಂಡು ವಿಟ್ಟಲ್ ಮಲ್ಯ ರಸ್ತೆಯಲ್ಲಿರುವ ಖಾಸಗಿ ಆಸ್ಪತ್ರೆಗೆ ದಾಖಲಾದೆ" ಎಂದು ಜಾಫರ್ ತಿಳಿಸಿದ್ದಾರೆ.

ಜೂನ್ 3 ರಂದು ಕಾಲ್ತುಳಿತದಲ್ಲಿ ಮೃತಪಟ್ಟ ತಮಿಳುನಾಡಿನ ತಿರುಪ್ಪೂರು ಮೂಲದ ಕಾಮಚ್ಚಿ ಎಂಆರ್ ಅವರ ಸೋದರಸಂಬಂಧಿ ವೀರಬಾಹು ಅವರೊಂದಿಗೆ ಜಿಲ್ಲಾಧಿಕಾರಿ ಸಂವಾದ ನಡೆಸಿದರು. ಕರ್ನಾಟಕ ಸರ್ಕಾರದಿಂದ ನೀಡಲಾದ ಪರಿಹಾರವನ್ನು ಅವರು ಪಡೆದಿರುವುದಾಗಿ

## ಜೆಜೆಎಂ ಕಾಮಗಾರಿ ಕಳಪೆಯಾಗಿದ್ದರೆ ಕ್ರಮ:ಸಂಸದ ಪೂಜಾರಿ

**ಚಿಕ್ಕಮಗಳೂರು, ಜೂ.11:** ಮನೆ ಮನೆಗೆ ನೀರು ಪೂರೈಸುವ ಜಲಜೀವನ ಮಿಷನ್ (ಜೆಜೆಎಂ) ಯೋಜನೆ ಕಾಮಗಾರಿ ಬಗ್ಗೆ ಸಾಕಷ್ಟು ಆರೋಪಗಳಿದ್ದು, ಕಾಮಗಾರಿ ಕಳಪೆಯಾಗಿದ್ದರೆ ತನಿಖೆಗೆ ಶಿಫಾರಸು ಮಾಡಲಾಗುವುದು ಎಂದು ಸಂಸದ ಕೋಟ ಶ್ರೀನಿವಾಸ ಪೂಜಾರಿ ಹೇಳಿದರು.

ಇಂದು ನಗರದ ಜಿಲ್ಲಾ ಪಂಚಾಯಿತಿ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ನಡೆದ ದಿಶಾ(ಕೇಂದ್ರ ಪ್ರಾಯೋಜಿತ ಕಾರ್ಯಕ್ರಮಗಳ ಪ್ರಗತಿ ಪರಿಶೀಲನಾ) ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಾದ್ಯಂತ ಜಲಜೀವನ ಮಿಷನ್ ಕಾಮಗಾರಿಯಲ್ಲಿ ಟ್ಯಾಂಕ್ ನಿರ್ಮಾಣ, ಪೈಪ್‌ಲೈನ್ ಅಳವಡಿಕೆ ಸೇರಿ ಹಲವು ಕಾಮಗಾರಿ ಕೈಗೊಳ್ಳಲಾಗಿದೆ. ಕಾಮಗಾರಿ ಕಳಪೆಯಾಗಿದೆ ಎಂದು ಸಾರ್ವಜನಿಕರು ಎಲ್ಲೆಡೆ ದೂರುತ್ತಿದ್ದಾರೆ. ಆದ್ದರಿಂದ ಎಲ್ಲಾ ಮಾಹಿತಿಯನ್ನೂ ಗ್ರಾಮೀಣ ಕುಡಿಯುವ ನೀರು ವಿಭಾಗದ ಅಧಿಕಾರಿಗಳು ತರಬೇಕು ಎಂದರು.

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆಯ ಯೋಜನೆ ಇದಾಗಿದ್ದು. ಗ್ರಾಮ ಪಂಚಾಯಿತಿಗೆ ಹಸ್ತಾಂತರ ಮಾಡಿಕೊಳ್ಳುವ ಮುನ್ನ ಅಭಿವೃದ್ಧಿ ಅಧಿಕಾರಿಗಳು ಗುಣಮಟ್ಟ ಪರಿಶೀಲನೆ ಮಾಡಿಕೊಳ್ಳಬೇಕು. ಇಲ್ಲದಿದ್ದರೆ ಪಂಚಾಯತ್ ರಾಜ್ ಇಲಾಖೆ ಅಧಿಕಾರಿಗಳನ್ನೇ ನೇರ ಹೊಣೆಗಾರನ್ನಾಗಿ ಮಾಡಲಾಗುತ್ತದೆ ಎಂದು ಎಚ್ಚರಿಸಿದರು.

ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಮಾತನಾಡಿ, 'ಈ ಯೋಜನೆ ಅನುಷ್ಠಾನದಲ್ಲಿ ಸಾಕಷ್ಟು ಲೋಪಗಳಾಗಿವೆ. ಕಾಮಗಾರಿ ಮುಗಿದಿದ್ದರೂ ನೀರಿನ ಸಂಪರ್ಕ ಕಲ್ಪಿಸಿಲ್ಲ. ನೀರಿನ ಮೂಲವನ್ನೇ ಗುರುತಿಸದೆ ಪೈಪ್‌ಲೈನ್ ಅಳವಡಿಕೆ ಮಾಡಲಾಗಿದೆ. ಎಂದರು.

ಈ ಬಗ್ಗೆ ಅಧಿಕಾರಿಗಳು ಪರಿಶೀಲನೆ ನಡೆಸಬೇಕು. ಜನರ ಕೆಲಸ ಮಾಡುವತ್ತ ಗಮನ ಹರಿಸಬೇಕು. ಯಾವುದನ್ನೂ ಪರಿಶೀಲನೆ ನಡೆಸದೆ ಬಿಲ್‌ಗಳಿಗೆ ಸಹಿ ಹಾಕಿದರೆ ಮುಂದೆ ತೊಂದರೆ ಅನುಭವಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ರಸ್ತೆ ಅಗಲೀಕರಣದಿಂದ ಹೆಚ್ಚು ಮರಗಳು ಹಾನಿಯಾಗಿದ್ದು, ಇದರಿಂದ ಪಕ್ಷಿಗಳಿಗೆ ಆಹಾರ ಸಿಗದಂತಾಗಿದೆ. ಹಣ್ಣು ಬಿಡುವ ಮರಗಳಾದ ನೇರಳೆ, ಮಾವು, ಅತ್ತಿ ಮುಂತಾದ ಮರಗಳನ್ನು ಬೆಳಸುವಂತೆ



ಸೂಚಿಸಿದರು.

ಶಿಕ್ಷಣ ಮೂಲಭೂತ ಹಕ್ಕಾಗಿರುವುದರಿಂದ ಶಾಲೆಯಿಂದ ಹೊರಗುಳಿದಿರುವ ಮಕ್ಕಳನ್ನು ಶಾಲೆಗೆ ಕಡ್ಡಾಯವಾಗಿ ಕರೆತರುವುದು ನಮ್ಮ ಕರ್ತವ್ಯವಾಗಿದ್ದು 195 ಮಕ್ಕಳು ಶಾಲೆಯಿಂದ ಹೊರಗುಳಿದಿರುವ ಬಗ್ಗೆ ಹಿಂದಿನ ಸಭೆಯಲ್ಲಿ ಮಾಹಿತಿ ನೀಡಲಾಗಿತ್ತು. ಇದರ ಬಗ್ಗೆ ಪ್ರಶ್ನಿಸಿದಾಗ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಶಾಲೆಯಿಂದ ಹೊರಗುಳಿದಿರುವ ಮಕ್ಕಳನ್ನು ಕರೆತಂದು ಶಿಕ್ಷಣ ನೀಡಲು ಮುಂದಾಗುತ್ತೇವೆ ಎಂದು ಹೇಳಿದರು.

ಸಾಮಾಜಿಕ ಭದ್ರತಾ ಯೋಜನೆಯಡಿ ಫಲಾನುಭವಿಗಳಿಗೆ ಮಾಸಾಶನ ಸಿಗದೆ ಸಮಸ್ಯೆಯಾಗುತ್ತಿದ್ದು ಅದರ ಬಗ್ಗೆ ಅಧಿಕಾರಿಗಳು ಗಮನಹರಿಸಬೇಕು ಎಂದು ಅಧ್ಯಕ್ಷರು ತಿಳಿಸಿದರು.

ಕೃಷಿ ಇಲಾಖೆಯಿಂದ ನೀಡುವ ಯಾವುದೇ ಯೋಜನೆಗಳು ರೈತರಿಗೆ ತಲುಪದೇ ಇದ್ದಲ್ಲಿ ಅಥವಾ ಅದರ ಬಗ್ಗೆ ಯಾವುದೇ ಮಾಹಿತಿ ಇಲ್ಲದಿದ್ದಲ್ಲಿ ಅಧಿಕಾರಿಗಳು ಈ ಕುರಿತು ರೈತರಿಗೆ ಮಾಹಿತಿ ನೀಡಿ ಜಾಗೃತಿಗೊಳಿಸಿ ಅವರ ಅಗತ್ಯತೆಗಳನ್ನು ಪೂರೈಸಬೇಕೆಂದು ತಿಳಿಸಿದರು

ವಿಧಾನ ಪರಿಷತ್ ಉಪಸಭಾಪತಿ ಎಂ.ಕೆ.ಪ್ರಾಣೇಶ್, ವಿಧಾನ ಪರಿಷತ್ ಸದಸ್ಯ ಎಸ್.ಎಲ್.ಭೋಜೇಗೌಡ, ಶಾಸಕರುಗಳಾದ ಹೆಚ್.ಡಿ.ತಮ್ಮಯ್ಯ, ನಯನ ಮೋಟಮ್ಮ, ದಿಶಾ ಸಮಿತಿ ನಾಮ ನಿರ್ದೇಶಿತ ಸದಸ್ಯರು, ಜಿಲ್ಲಾಧಿಕಾರಿ ಮೀನಾ ನಾಗರಾಜ್, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಚ್.ಎಸ್.ಕೀರ್ತನಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಕ್ರಮ್ ಅಮಟೆ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಹಾಜರಿದ್ದರು.

11ಸಿಕೆಎಂ2: ನಗರದ ಇಂದು ಜಿಲ್ಲಾ ಪಂಚಾಯಿತಿ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಸಂಸದ ಕೋಟ ಶ್ರೀನಿವಾಸ ಪೂಜಾರಿ ಅವರ ಅಧ್ಯಕ್ಷತೆಯಲ್ಲಿ ದಿಶಾ ಸಭೆ ನಡೆಯಿತು.

## ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ನಿಮ್ಮ ಅತ್ಯಂತ ಪ್ರೀತಿಯ ಕನಸು ನನಸಾಗುತ್ತದೆ. ಆದರೆ ತುಂಬಾ ಸಂತೋಷ ಸ್ವಲ್ಪ ಸಮಸ್ಯೆಗಳನ್ನು ಉಂಟುಮಾಡಬಹುದಾದ್ದರಿಂದ ನಿಮ್ಮ ಉತ್ಸಾಹವನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ. ಈ ರಾಶಿಚಕ್ರದ ದೊಡ್ಡ ಉದ್ಯಮಿಗಳು ಇಂದು ತುಂಬಾ ಯೋಚಿಸಿ ಅರ್ಥಮಾಡಿಕೊಂಡು ಹಣದ ಹೂಡಿಕೆ ಮಾಡುವ ಅಗತ್ಯವಿದೆ. ಸಂಬಂಧಿಕರು ಮತ್ತು ಸ್ನೇಹಿತರಿಂದ ಅನಿರೀಕ್ಷಿತ ಉಡುಗೊರೆಗಳು. ಚಿಂತಿಸಬೇಡಿ, ನಿಮ್ಮ ದುಃಖ ಇಂದು ಮಂಜುಗಡ್ಡೆಯ ಹಾಗೆ ಕರಗುತ್ತದೆ.

### ವೃಷಭ ರಾಶಿ

ಆರೋಗ್ಯ ಪರಿಪೂರ್ಣವಾಗಿರುತ್ತದೆ. ಪ್ರಮುಖ ಜನರು ವಿಶೇಷ ವರ್ಗ ಹೊಂದಿರುವ ಯಾವುದಕ್ಕಾದರೂ ಹಣಕಾಸು ನೀಡಲು ಸಿದ್ಧವಾಗಿರುತ್ತಾರೆ. ಮಕ್ಕಳು ಅಭ್ಯಾಸಗಳ ಮೇಲೆ ಗಮನ ಹರಿಸಬೇಕು ಹಾಗೂ ಭವಿಷ್ಯದ ಬಗ್ಗೆ ಯೋಜನೆ ರೂಪಿಸಬೇಕು. ನಿಮ್ಮ ಶಕ್ತಿ ಮತ್ತು ಉತ್ಸಾಹವನ್ನು ಮರಳಿ ತರುವ ಒಂದು ಆನಂದಮಯ ಪ್ರವಾಸಕ್ಕೆ ಹೋಗುವ ಸಾಧ್ಯತೆಯಿದೆ. ಒಂದು ಕಠಿಣ ಸಮಯದ ನಂತರ, ಕೆಲಸದಲ್ಲಿ ಏನಾದರೂ ಸುಂದರವಾದ್ದರಿಂದ ಈ ದಿನ ನಿಮಗೆ ಆಶ್ಚರ್ಯವನ್ನುಂಟು ಮಾಡುತ್ತದೆ. ಜೀವನದ ಪ್ರಕ್ಷುಬ್ಧತೆಯ ಮಧ್ಯೆ, ಇಂದು ನೀವು ನಿಮ್ಮ ಮಕ್ಕಳಿಗಾಗಿ ಸಮಯವನ್ನು ತೆಗೆದುಕೊಳ್ಳುತ್ತೀರಿ.

### ಮಿಥುನ ರಾಶಿ

ನಿಮ್ಮ ಜಗಳಗಂಟ ನಡವಳಿಕೆ ನಿಮ್ಮ ಸಂಬಂಧವನ್ನು ಶಾಶ್ವತವಾಗಿ ಹಾಳು ಮಾಡಬಹುದಾದ್ದರಿಂದ ಅದನ್ನು ನಿಯಂತ್ರಣದಲ್ಲಿಡಿ.ನೀವು ತೆರೆದ ಮನಸ್ಸನ್ನು ಹೊಂದುವ ಮೂಲಕ ಮತ್ತು ಯಾರಾದರ ವಿರುದ್ಧ ಪೂರ್ವಾಗ್ರಹವನ್ನು ಕೈಬಿಡುವ ಮೂಲಕ ಇದರಿಂದ ಹೊರಬರಬಹುದು. ವಿದೇಶದಲ್ಲಿ ಮಲಗಿರುವ ನಿಮ್ಮ ಭೂಮಿಯನ್ನು ಇಂದು ಉತ್ತಮ ಬೆಲೆಗೆ ಮಾರಾಟ ಮಾಡಬಹುದು, ಅದು ನಿಮಗೆ ಲಾಭದಾಯಕವಾಗಲಿದೆ.

### ಕರ್ಕ ರಾಶಿ

ಧ್ಯಾನ ಪರಿಹಾರ ತರುತ್ತದೆ. ಇಂದು ಯಾವುದೇ ಸಹಾಯವಿಲ್ಲದೆ, ನೀವು ಹಣವನ್ನು ಗಳಿಸುವಲ್ಲಿ ಸಾಮರ್ಥ್ಯರಾಗಿರುತ್ತೀರಿ. ನಿಮ್ಮ ಸ್ನೇಹಿತರು ನಿಮ್ಮ ಉದಾರ ವರ್ತನೆಯ ದುರುಪಯೋಗ ಮಾಡಲು ಬಿಡಬೇಡಿ. ಪ್ರಣಯ ಉಂಟಾಗುವ ಸಾಧ್ಯತೆಯಿದ್ದರೂ ಇಂದ್ರಿಯದ ಭಾವನೆಗಳು ನಿಮ್ಮ ಸಂಬಂಧವನ್ನು ಹಾಳು ಮಾಡಬಹುದು. ನೀವು ಕೆಲಸದಲ್ಲಿನ ಸಮಸ್ಯೆಗಳನ್ನು ಬಗೆಹರಿಸಲು ನಿಮ್ಮ ಬುದ್ಧಿವಂತಿಕೆ ಮತ್ತು ಪ್ರಭಾವವನ್ನು ಬಳಸಬೇಕಾಗುತ್ತದೆ.

### ಸಿಂಹ ರಾಶಿ

ನಿಮ್ಮ ಕುಂದಿದ ಜೀವಂತಿಕೆ ವ್ಯವಸ್ಥೆಯಲ್ಲಿ ದೀರ್ಘಕಾಲೀನ ವಿಷದಂತ ವರ್ತಿಸುತ್ತದೆ. ನಿಮ್ಮನ್ನು ಸೃಜನಶೀಲ ಕೆಲಸದಲ್ಲಿ ತೊಡಗಿಸಿಕೊಳ್ಳುವುದು ಮತ್ತುರೋಗದ ವಿರುದ್ಧ ಹೋರಾಡಲು ಪ್ರೇರೇಪಿಸುವುದು ಒಳ್ಳೆಯದು. ನಿಮ್ಮ ಸ್ನೇಹಿತರ ಸಹಾಯದಿಂದ ಹಣಕಾಸು ಸಮಸ್ಯೆಗಳು ನಿವಾರಣೆಯಾಗುತ್ತವೆ. ಮನೆಯಲ್ಲಿನ ಕೆಲವು ಬದಲಾವಣೆಗಳು ನಿಮ್ಮನ್ನು ಭಾವುಕರನ್ನಾಗಿಸಬಹುದು– ಆದರೆ ನಿಮಗೆ ಮುಖ್ಯವಾದವರಿಗೆ ನೀವು ನಿಮ್ಮ ಭಾವನೆಗಳನ್ನು ಪರಿಣಾಮಕಾರಿಯಾಗಿ ಹೇಳಲು ಸಾಧ್ಯವಾಗುತ್ತದೆ.

### ಕನ್ಯಾ ರಾಶಿ

ಯಾರಾದರೂ ನಿಮ್ಮನ್ನು ಬಲಿಪಶುವನ್ನಾಗಿ ಮಾಡಲು ಪ್ರಯತ್ನಿಸಬಹುದಾದ್ದರಿಂದ ಎಚ್ಚರಿಕೆಯಿಂದಿರಿ. ಒತ್ತಡ ಹೆಚ್ಚಾಗಬಹುದು. ಇಂದು ವ್ಯಾಪಾರದಲ್ಲಿ ಉತ್ತಮ ಲಾಭವನ್ನು ಗಳಿಸುವ ಸಾಧ್ಯತೆ ಇದೆ. ಇಂದಿನ ದಿನ ನೀವು ನಿಮ್ಮ ವ್ಯಾಪಾರಕ್ಕೆ ಹೊಸ ಎತ್ತರವನ್ನು ನೀಡಬಹುದು. ಮೊಮ್ಮಕ್ಕಳು ಅಪಾರ ಸಂತೋಷದ ಮೂಲವಾಗುತ್ತಾರೆ. ಪ್ರಣಯದ ನಡತೆಗಳು ಫಲ ನೀಡುವುದಿಲ್ಲ.

### ತುಲಾ ರಾಶಿ

ಅತಿಯಾಗಿ ತಿನ್ನುವುದನ್ನು ತಪ್ಪಿಸಿ ಮತ್ತು ಫಿಟ್ ಆಗಿ ಉಳಿಯಲು ನಿಯಮಿತವಾಗಿ ಹೆಲ್ತ್ ಕ್ಲಬ್‌ಗೆ ಭೇಟಿ ನೀಡಿ. ತರಾತುರಿಯಲ್ಲಿ ಹೂಡಿಕೆಗಳನ್ನು ಮಾಡಬೇಡಿ – ನೀವು ಎಲ್ಲಾ ಸಾಧ್ಯವಿರುವ ಕೋನಗಳಿಂದ ಹೂಡಿಕೆಯನ್ನು ಪರಿಶೀಲಿಸದೇ ಹೋದರೆ ನಷ್ಟ ಖಚಿತ. ಒಟ್ಟಾರೆ ಒಂದು ಲಾಭದಾಯಕ ದಿನವಾದರೂ ನೀವು ನಿರಾಸೆ ಭರವಸೆಯಿಡಬಹುದಾದ ಯಾರಾದರೂ ನಿಮ್ಮನ್ನು ನಿರಾಸೆಗೊಳಿಸುತ್ತಾರೆ. ನಿಮ್ಮ ಸಂಗಾತಿಯು ಇಂದು ಇಡೀ ದಿನ ನಿಮ್ಮ ಬಗ್ಗೆ ಚಿಂತಿಸುತ್ತೀರಿ.

### ವೃಶ್ಚಿಕ ರಾಶಿ

ಇಂದು ನೀವು ಆರಾಮವಾಗಿರಬೇಕು ಹಾಗೂ ನಿಕಟ ಸ್ನೇಹಿತರು ಮತ್ತು ಕುಟುಂಬದ ಎಲ್ಲಾ ಸದಸ್ಯರನ್ನು ಸಂತೋಷವಾಗಿರಿಸಲು ಪ್ರಯತ್ನಿಸಬೇಕು. ಈ ರಾಶಿಚಕ್ರದ ದೊಡ್ಡ ಉದ್ಯಮಿಗಳು ಇಂದು ತುಂಬಾ ಯೋಚಿಸಿ ಅರ್ಥಮಾಡಿಕೊಂಡು ಹಣದ ಹೂಡಿಕೆ ಮಾಡುವ ಅಗತ್ಯವಿದೆ. ನಿಮ್ಮ ಸ್ನೇಹಿತರು ನಿಮ್ಮ ಉದಾರ ವರ್ತನೆಯ ದುರುಪಯೋಗ ಮಾಡಲು ಬಿಡಬೇಡಿ.

### ಧನು ರಾಶಿ

ಇತರರನ್ನು ಟೀಕಿಸುವ ನಿಮ್ಮ ಅಭ್ಯಾಸದಂದಾಗಿ ಇಂದು ನೀವೇ ಕೆಲವು ಟೀಕೆಗಳನ್ನು ಎದುರಿಸುವ ಸಾಧ್ಯತೆಗಳಿವೆ. ನಿಮ್ಮ ಹಾಸ್ಯಪ್ರಜ್ಞೆ ಜಾಗೃತವಾಗಿರಲಿ ಮತ್ತು ನಿಮ್ಮ ಸ್ವರಕ್ಷಣೆ ಕಡಿಮೆಯಿರಲಿ. ಹೀಗಿದ್ದಲ್ಲಿ ಟೀಕೆಯನ್ನು ಎದುರಿಸುವ ಸಾಮರ್ಥ್ಯ ನಿಮ್ಮಲ್ಲಿ ಹೆಚ್ಚಿರುತ್ತದೆ. ಕುಟುಂಬದ ಯಾವುದೇ ಸದಸ್ಯರ ಕಾಯಿಲೆ ಬೀಳುವ ಕಾರಣದಿಂದಾಗಿ ನೀವು ಆರ್ಥಿಕ ತೊಂದರೆಗೊಳಗಾಗಬಹುದು.

### ಮಕರ ರಾಶಿ

ಆಹಾರದ ಸ್ವಾದ ಉಪ್ಪಿನಿಂದ ಬರುವಂತೆ ಅತೃಪ್ತಿಯಿದ್ದಾಗಲೇ ನೀವು ಸಂತೋಷದ ಮೌಲ್ಯವನ್ನು ಅರ್ಥ ಮಾಡಿಕೊಳ್ಳುತ್ತೀರಿ. ಹಣದ ಪ್ರಾಮುಖ್ಯತೆ ನಿಮಗೆ ಚೆನ್ನಾಗಿ ಗೊತ್ತಿದೆ, ಆದ್ದರಿಂದ ಇಂದು ನಿಮ್ಮ ಮೂಲಕ ಉಳಿಸಲಾಗಿರುವ ಹಣ ನಿಮ್ಮ ತುಂಬಾ ಕೆಲಸಕ್ಕೆ ಬರಬಹುದು ಮತ್ತು ನೀವು ಯಾವುದೇ ದೊಡ್ಡ ಸಮಸ್ಯೆಯಿಂದ ಹೊರಬರಬಹುದು. ನೀವು ಇಂದು ಹಾಜರಾದ ಸಾಮಾಜಿಕ ಸಂತೋಷಕೂಟದಲ್ಲಿ ನೀವೇ ಕೇಂದ್ರಬಿಂದುವಾಗಿರುತ್ತೀರಿ.

### ಕುಂಭ ರಾಶಿ

ಮಕ್ಕಳೊಂದಿಗೆ ಆಟವಾಡುವುದು ನಿಮಗೆ ಯಾವತ್ತೂ ಅದ್ಭುತ ಚಿಕಿತ್ಸೆಯ ಅನುಭವ ನೀಡುತ್ತದೆ. ಯಾವುದೇ ಅಪರಿಚಿತ ವ್ಯಕ್ತಿಯ ಸಲಹೆಯಿಂದ ಎಲ್ಲಾದರೂ ಹೂಡಿಕೆ ಮಾಡಿರುವ ಜನರಿಗೆ, ಇಂದು ಆ ಹೂಡಿಕೆಯಿಂದ ಪ್ರಯೋಜನವನ್ನು ಪಡೆಯುವ ಪೂರ್ತಿಸಾಧ್ಯತೆ ಇದೆ. ನಿಮ್ಮ ಕುಟುಂಬದ ಸದಸ್ಯರ ಅಗತ್ಯಗಳ ಮೇಲೆ ಗಮನ ಹರಿಸುವುದು ಇಂದು ನಿಮ್ಮ ಆದ್ಯತೆಯಾಗಿರಬೇಕು.

### ಮೀನ ರಾಶಿ

ಸಂತೋಷದಿಂದ ತುಂಬಿದ ಒಳ್ಳೆಯ ದಿನ. ಯಾವುದೇ ವ್ಯಕ್ತಿಯ ಸಹಾಯವಿಲ್ಲದೆ ನೀವು ಹಣವನ್ನು ಗಳಿಸಲು ಸಾಧ್ಯವಾಗುತ್ತದೆ. ನೀವು ನಿಮ್ಮ ಮೇಲೆ ನಂಬಿಕೆಯನ್ನಿಡುವ ಅಗತ್ಯವಿದೆ. ಸಮುದ್ರದಾಚೆಯ ಸಂಬಂಧಿಯಿಂದ ಒಂದು ಉಡುಗೊರೆ ನಿಮ್ಮನ್ನು ಸಂತೋಷಪಡಿಸುತ್ತದೆ. ನಿಮ್ಮ ಶಕ್ತಿ ಮತ್ತು ಉತ್ಸಾಹವನ್ನು ಮರಳಿ ತರುವ ಒಂದು ಆನಂದಮಯ ಪ್ರವಾಸಕ್ಕೆ ಹೋಗುವ ಸಾಧ್ಯತೆಯಿದೆ. ನೀವು ನಿರಾಸೆ ಅನುಭವಿಸುತ್ತೀರಿ ಅದೇಕೆಂದರೆ ನೀವು ಬಯಸುತ್ತಿದ್ದ ಗುರುತಿಸುವಿಕೆ ಮತ್ತು ಪ್ರತಿಫಲಗಳು ಮುಂದೂಡಲ್ಪಡುತ್ತವೆ.

# ಹೊರಗುತ್ತಿಗೆ ಪೌರ ನೌಕರರ ಖಾಯಂಗೊಳಿಸಲು ಪ್ರಾಮಾಣಿಕ ಪ್ರಯತ್ನ – ಶಾಸಕ ತಮ್ಮಯ್ಯ

**ಚಿಕ್ಕಮಗಳೂರು:** ಆಸ್ಪತ್ರೆ, ಪುರಸಭೆ ಸೇರಿದಂತೆ ವಿವಿಧ ಇಲಾಖೆಗಳಲ್ಲಿ ಹ್ೂರ್ಗ್ುತ್ತಿಗ್ ಆಧಾರ್ದ್ಲ್ಲಿ ಪೌರಕಾರ್ಮಿಕರಾಗಿ ಬದುಕಿಗಾಗಿ ವೃತ್ತಿ ಮಾಡುತ್ತಿರುವ ಪೌರ ನೌಕರರಿಗೆ ಸರ್ಕಾರದಿಂದ ನ್ಯಾಯಒದಗಿಸಲು ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಶಾಸಕ ಹೆಚ್.ಡಿತಮ್ಮಯ್ಯ ಭರವಸೆ ನೀಡಿದರು.

ಅವರುಇಂದು ನಗರದಅಂಬೇಡ್ಕರ್ ಭವನದಲ್ಲಿಕರ್ನಾಟಕದಲಿತ ಸಂಘರ್ಷ ಸಮಿತಿ ಏರ್ಪಡಿಸಿದ್ದ ದಲಿತ ಚಳುವಳಿಯ ಪಿತಾಮಹ ಪ್ರೋ.ಬಿ.ಕೃಷ್ಣಪ್ಪರವರ 87ನೇ ಜಯಂತಿ ಅಂಗವಾಗಿ ದ.ಸಂ.ಸ ಸದಸ್ಯತ್ವ ನೋಂದಣಿಆಂದೋಲನಾ ಸಮಾರಂಭದಲ್ಲಿಕೃಷ್ಣಪ್ಪನವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದರು.

ಪುರಸಭೆಗಳಲ್ಲಿ ಪೌರಕಾರ್ಮಿಕರಾಗಿ ಸೇವೆ ಸಲ್ಲಿಸುತ್ತಿರುವ ಹೊರಗುತ್ತಿಗೆ ನೌಕರರನ್ನುಖಾಯಂ ಮಾಡಬೇಕೆಂಬ ಬೇಡಿಕೆಯಜೊತೆಗೆ ಸರ್ಕಾರಿ ನೌಕರರಎಲ್ಲಾ ಸೌಲಭ್ಯಗಳು ಸಿಗಬೇಕು ಎಂಬ ಮನವಿಯನ್ನು ಸ್ವೀಕರಿಸಿ ಉತ್ತರಿಸಿದರು.

ಈ ಸಮಸ್ಯೆ ಕೇವಲ 3 ಜಿಲ್ಲೆಗಳಿಗೆ ಮಾತ್ರ ಸೀಮಿತವಾಗಿಲ್ಲ ಇಡೀರಾಜ್ಯದ ಸಮಸ್ಯೆಯಾಗಿದ್ದು,




ಮಹಾನಗರ ಪಾಲಿಕೆಯಲ್ಲಿ ಸೇವೆ ಸಲ್ಲಿಸುತ್ತಿರುವಕಾರ್ಮಿಕರನ್ನು ಈಗಾಗಲೇ ರಾಜ್ಯ ಸರ್ಕಾರಖಾಯಂ ನೌಕರರೆಂದು ಘೋಷಿಸಿದೆ ಎಂದು ಹೇಳಿದರು.

ಇದೇ ಮಾದರಿಯಲ್ಲಿ ನಗರಸಭೆ, ಪುರಸಭೆ ಮತ್ತು ಪಟ್ಟಣ ಪಂಚಾಯಿತಿಗಳಲ್ಲಿ ಹ್ೂರ್ಗ್ುತ್ತಿಗ್ ಆಧಾರ್ದ್ಲ್ಲಿ ಪೌರಕಾರ್ಮಿಕರುತಮ್ಮಜೀವದ ಅಂಗು ತೋರೆದು ಕೆಲಸ ಮಾಡುತ್ತಿರುವವರಿಗೆ ಸರ್ಕಾರ ಸ್ಪಂದಿಸಬೇಕೆಂದು ತಿಳಿಸಿದರು.

ಬಡವರು, ಶೋಷಿತರು ಸಮಾಜದ ಮುನ್ನೆಲೆಗೆ ಬರಬೇಕೆಂದು ಹೋರಾಟ ಮಾಡಿದ ಬಿ.ಕೃಷ್ಣಪ್ಪ ನವರಿಗೆ ನ್ಯಾಯುಒದಗಿಸುವಕಾಯುಕವಾದಾಗ ಮಾತ್ರಅವರ ಹೆಸರುಚಿರಸ್ಥಾಯಿಯಾಗಿಜನಮಾನಸಲ್ಲಿ ಉಳಿಯುತ್ತದೆ, ಬುದ್ಧ, ಬಸವ, ವಾಲ್ಮೀಕಿ, ಕನಕದಾಸ, ಅಂಬೇಡ್ಕರ್, ನಾರಾಯಣಗುರುಇವರತತ್ವ ಆದರ್ಶಗಳು ಜನಮಾಸದಲ್ಲಿ ಉಳಿದಿದೆ ಎಂದರು.ದ.ಸಂ.ಸ ಸದಸ್ಯತ್ವ

ಪುಸ್ತಕ ಬಿಡುಗಡೆ ಮಾಡಿ ಮಾತನಾಡಿದ ವಿಧಾನ ಪರಿಷತ್ ಸದಸ್ಯ ಸಿ.ಟಿ ರವಿ ಸಾಮಾಜಿಕವಾಗಿ, ಆರ್ಥಿಕವಾಗಿಉನ್ನತ ಸ್ಥಾನಕ್ಕೇರಿದ ಸಮುದಾಯದಜನತನ್ನ ಮೂಲ ಬೇರನ್ನು ಮರೆಯಬಾರದು, ಮರೆತರೆ ಸಂವಿಧಾನ ಶಿಲ್ಪಿ ಡಾ.ಬಿ.ಆರ್‌ಅಂಬೇಡ್ಕರ್ ವಿಚಾರ ಧಾರೆಗಳಿಗೆ ಅಪಮಾನ ಮಾಡಿದಂತೆಯೇಎಂದು ಹೇಳಿದರು.

ವೈಚಾರಿಕ ಚಳುವಳಿಯನ್ನು ಎಲ್ಲರೂ ಸೇರಿ ಮುನ್ನಡೆಸುವಜೊತೆಗೆ ಈ ಸದಸ್ಯತ್ವಅಭಿಯಾನ ಯಶಸ್ವಿಯಾಗಲಿ ಎಂದು ಶುಭ ಹಾರೈಸಿದ ಅವರು ವೈಚಾರಿಕ ವಿಚಾರವನ್ನು ಅಳವಡಿಸಿಕೊಂಡು ಸದಸ್ಯತ್ವ ಪಡೆದುಕೊಂಡಾಗ ಮಾತ್ರ ಸದಸ್ಯತ್ವಕ್ಕೆ ಶಕ್ತಿ ಬರುತ್ತದೆಎಂದರು.

ದ.ಸಂ.ಸ ರಾಜ್ಯ ಸಂಚಾಲಕ ತರೀಕೆರೆಎನ್. ವೆಂಕಟೇಶ್‌ಅಧ್ಯಕ್ಷತೆ ವಹಿಸಿ ಮಾತನಾಡಿದೇಶದಲ್ಲಿದಲಿತರ ಮೇಲಿನ ದೌರ್ಜನ್ಯ, ದಬ್ಬಾಳಿಕೆಯನ್ನು ಮನಗಂಡು ಪ್ರಗತಿಪರಚಿಂತಕರಾದ ಬಿ.ಕೃಷ್ಣಪ್ಪನವರು ಸಂಘಟಿತರಾಗಿ ಹೋರಾಟ ಮಾಡಿದ ಪರಿಣಾಮಇಂದುದಲಿತರುನ್ಯಾಯಯುತ 'ಜೀವನ ನಡೆಸಲು ಸಾದ್ಯವಾಗಿದೆಎಂದು ಹೇಳಿದರು.

ಕೃಷ್ಣಪ್ಪನವರಜನ್ಮ ದಿನೋತ್ಸವದ ಅಂಗವಾಗಿ ದ.ಸಂ.ಸ ಸದಸ್ಯತ್ವಅಭಿಯಾನ ನೆಡೆಸುತ್ತಿದ್ದು, ರಾಜ್ಯಾದ್ಯಂತಕೃಷ್ಣಪ್ಪನವರಜಯಂತಿಯನ್ನು ವಿಜೃಂಭಣೆಯಿಂದಆಚರಿಸಲಾಗುತ್ತಿದೆ, 1970 ರಕಾಲಘಟ್ಟದಲ್ಲಿದೇಶದಲ್ಲಿ ನೆಡೆಯುತ್ತಿದ್ದಅಸಮಾನತೆ, ಜಾತಿ ಪದ್ಧತಿ ವಿರುದ್ಧ ಹೋರಾಟ ಮಾಡಿದವರಿಗೆ ಈ ಜಯಂತಿಅರ್ಥಪೂರ್ಣಎಂದು ತಿಳಿಸಿದರು.ರಾಜ್ಯಾದ್ಯಂತದಲಿತ ಸಮುದಾಯದ ಮುಖಂಡರುಗಳನ್ನು ದೆಹಲಿಗೆ ಆಹ್ವಾನಿಸಿದಾಗ ದೇವನೂರು ಮಹಾದೇವ್, ಬಿ. ಕೃಷ್ಣಪ್ಪ ಮತ್ತಿತರರು ಆ ಸಭೆಯಲ್ಲಿ ಭಾಗವಹಿಸಿ ಹೋರಾಟದ ರೂಪುರೇಷಗಳ ಬಗ್ಗೆ ತಿಳಿಸುಕೊಂಡು ಬಂದುರಾಜ್ಯದಲ್ಲಿ 1975 ರಲ್ಲಿದಲಿತ ಸಂಘರ್ಷ ಸಮಿತಿಯನ್ನು ಸ್ಥಾಪಿಸಿದ್ದು, ಇಂದು ಬೃಹದಾಕಾರವಾಗಿ ಸಂಘಟನೆ ಬೆಳೆಯುತ್ತಿದೆ ಎಂದು ಬಣ್ಣಿಸಿದರು.

ಈ ಕಾರ್ಯಕ್ರಮದಲ್ಲಿ ಬೆಂಗಳೂರಿನ ಪೌರಕಾರ್ಮಿಕರ ಮಹಾ ಸಂಘದರಾಜ್ಯಾಧ್ಯಕ್ಷ ನಾರಾಯಣ, ನಗರಸಭಾಧ್ಯಕ್ಷೆ ಸುಜಾತ ಶಿವಕುಮಾರ್, ಪತ್ರಕರ್ತರ ಸಂಘದರಾಜ್ಯಾಧ್ಯಕ್ಷಜಿ. ಎನ್‌ರಾಜಶೇಖರ್, ಡಾ.ಭರತ್ ಅಂಚೆ, ಶ್ರೀಧರ್ ಕಲಿವೀರ್ ಮತ್ತಿತರರು ಉಪಸ್ಥಿತರಿದ್ದರು.

# ಸಿದ್ದರಾಮಯ್ಯ–ಶಿವಕುಮಾರ್ ಬಂಧನ ಯಾಕಿಲ್ಲ..? : ಜೆಡಿಎಸ್

**ಬೆಂಗಳೂರು:** ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಸಂಭವಿಸಿದ ಕಾಲ್ತುಳಿತದ ದುರಂತವು ಕಾಂಗ್ರೆಸ್ ಸರ್ಕಾರದ ಪ್ರಾಯೋಜಿತ ಕೊಲೆ ಎಂದು ಆರೋಪಿಸಿರುವ ಜೆಡಿಎಸ್ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬಂಧನ ಯಾಕಿಲ್ಲ? ಎಂದು ಪ್ರಶ್ನಿಸಿದೆ.

ಈ ಸಂಬಂಧ ತನ್ನ ಎಕ್ಸ್ ಖಾತೆಯಲ್ಲಿ ಪೋಸ್ಟ್ ಮಾಡಿರುವ ಜೆಡಿಎಸ್, ಆರ್‌ಸಿಬಿ ವಿಜಯೋತ್ಸವದಲ್ಲಿ ಪ್ರಚಾರ ಪಡೆಯಲು ಸಿದ್ದರಾಮಯ್ಯ ಮತ್ತು ಡಿ.ಕೆ. ಶಿವಕುಮಾರ್ ನಡುವಿನ ಪೈಪೋಟಿಯೇ ಈ ಮಹಾದುರಂತಕ್ಕೆ ಕಾರಣ ಎಂದು ಆರೋಪಿಸಿದೆ.

ವಿಧಾನಸೌಧದ ಮುಂಭಾಗ ದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಿಎಂ ಸಿದ್ದರಾಮಯ್ಯ ಮುಖ್ಯ ಅತಿಥಿ.

ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಡಿಸಿಎಂ ಡಿಕೆ ಶಿವಕುಮಾರ್ ಮುಖ್ಯ ಅತಿಥಿ. ಇವರಿಬ್ಬರ ರಾಜಕೀಯ ಪ್ರತಿಷ್ಠೆ, ನಾನೇ ಎಂಬ ಅಹಂಗೆ ಅಮಾಯಕ ಜೀವಗಳನ್ನು ಬಲಿತೆಗೆದುಕೊಂಡಿದ್ದಾಗಿದೆ ಎಂದು ಹೇಳಿದೆ.

ಕಾಲ್ತುಳಿತ ದುರಂತದ ಜವಾಬ್ದಾರಿಯಿಂದ ನುಣುಚಿಕೊಳ್ಳಲು ಕಾಂಗ್ರೆಸ್ ಸರ್ಕಾರ ಆರ್‌ಸಿಬಿ ಮತ್ತು ಕೆಎಸ್‌ಸಿಎ ವಿರುದ್ಧ ದೂರು ದಾಖಲಿಸಿದೆ ಎಂದು ಆರೋಪಿಸಿದೆ.



ಸಿಎಂ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವೈಫಲ್ಯದ ಬಗ್ಗೆ ಎದ್ದಿರುವ ಜನಾಕ್ರೋಶದ ಗಮನವನ್ನು ಬೇರೆಡೆ ಸೆಳೆಯಲು ಸ್ಟಾರ್ ಆಟಗಾರ ವಿರಾಟ್ ಕೊಹ್ಲಿಯನ್ನೂ ಟಾರ್ಗೆಟ್ ಮಾಡಲಾಗುತ್ತಿದೆ ಎಂದು ಜೆಡಿಎಸ್ ಆಪಾದಿಸಿದೆ.

ನಗರದಲ್ಲಿ ಎರಡು ಕಡೆ ಏಕಕಾಲದಲ್ಲಿ ಕಾರ್ಯಕ್ರಮಗಳನ್ನು ಆಯೋಜಿಸಿದರೆ ಭದ್ರತೆ ಹಾಗೂ ಜನದಟ್ಟಣೆ ನಿಯಂತ್ರಣ ಮಾಡುವುದು ಕಷ್ಟ ಎಂಬ ಪೊಲೀಸರ ಎಚ್ಚರಿಕೆಯ ಮಾತುಗಳನ್ನು ಧಿಕ್ಕರಿಸಿ, ಆರ್‌ಸಿಬಿ ದಿಗ್ವಿಜಯದ ಕ್ರೆಡಿಟ್ ಪಡೆಯಲು ರಾಜ್ಯ ಸರ್ಕಾರ ಹಠಕ್ಕೆ ಬಿದ್ದು ಸಮಾರಂಭ ನಡೆಸಿ 11 ಮುಗ್ಧ ಜೀವಗಳನ್ನು ಬಲಿ ಪಡೆದಿದೆ ಎಂದು ದೂರಿದೆ.

ಕಾಲ್ತುಳಿತ ಮಹಾದುರಂತದ ಬಗ್ಗೆ ದೇಶಾದ್ಯಂತ ಕಾಂಗ್ರೆಸ್ ಸರ್ಕಾರದ ವೈಫಲ್ಯಗಳು, ಭದ್ರತಾ ಎಡವಟ್ಟುಗಳು ಜಗಜ್ಜಾಹೀರಾಗಿ ಸುದ್ದಿಯಾಗುತ್ತಿದೆ. ಹೊಣೆಗೇಡಿ ಕಾಂಗ್ರೆಸ್ ಸರ್ಕಾರ ಡ್ಯಾಮೇಜ್ ಕಂಟ್ರೋಲ್‌ಗೆ ಮುಂದಾಗಿದೆ. ವ್ುತ್ೊ್ತಂದ್ಣಟಜಜಜಿುಟಜಜಡ್ ಕುತಂತ್ರದಿಂದ ವಿರಾಟ್ ಕೊಹ್ಲಿ ವಿರುದ್ಧವೂ ದೂರು ನೀಡಲಾಗಿದೆ ಎಂದು ಆರೋಪಿಸಿದೆ.

# ತರಳಬಾಳು ಬಡಾವಣೆ ನಾಗರೀಕ ಸಮಿತಿಯಿಂದ ಪರಿಸರ ದಿನಾಚರಣೆ





**ದಾವಣಗೆರೆ:** ನಗರದ ತರಳಬಾಳು ಬಡಾವಣೆ ಮೂರನೇ ಹಂತದ ನಾಗರಿಕ ಹಿತರಕ್ಷಣಾ ಸಮಿತಿ(ರಿ) ವತಿಯಿಂದ ಭಾನುವಾರ ಬಡಾವಣೆಯ ಉದ್ಯಾನವನದಲ್ಲಿ ಪರಿಸರ ದಿನಾಚರಣೆ ಹಾಗೂ ಪ್ರತಿಭಾ ಪುರಸ್ಕಾರ ಮತ್ತು ಉಚಿತ ಸಸಿ ವಿತರಣಾ ಕಾರ್ಯಕ್ರಮವನ್ನು ಬಡಾವಣೆಯ 19ನೇ ಮುಖ್ಯರಸ್ತೆಯ ಸಾರ್ವಜನಿಕ ಉದ್ಯಾನವನದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಮಿತಿಯ ಅಧ್ಯಕ್ಷರಾದ ಸಿ.ಆರ್. ಮಲ್ಲಿಕಾರ್ಜುನಯ್ಯ ರವರು ವಹಿಸಿಕೊಂಡಿದ್ದರು. ವಿಶ್ರಾಂತ ಪ್ರಾಚಾರ್ಯರು, ಕರುಣಾ ಜೀವ ಟ್ರಸ್ಟ್ ನ ನಿರ್ದೇಶಕರು

ಆದ ಕೆ.ಇ. ಈಶ್ವರಪ್ಪ ಕಾರ್ಯಕ್ರಮವನ್ನು ಉದ್ಯಾನವನದಲ್ಲಿ ಸಸಿಗಳನ್ನು ನೆಡುವುದರ ಮೂಲಕ ಚಾಲನೆ ನೀಡಿ ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿ ಯಾವುದೇ ಬಡಾವಣೆಯ ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಹಾಗೂ ಸೌಹಾರ್ದಯುತ ಮತ್ತು ಸಹಬಾಳ್ವೆಗೆ ಸಂಘಟನೆಯ ಬಲ ಅತಿ ಮುಖ್ಯ. ಆದರೆ ಸಂಘಟನೆ ಮಾಡುವಾಗ ಅನೇಕ ಅಡೆತಡೆ ಬರುವುದು ಸಹಜ.

ಅವುಗಳನ್ನು ಸಮ ಚಿತ್ತದಿಂದ ಸ್ವೀಕರಿಸಿ ಸಮಾಜದ ಋಣ ತೀರಿಸುವ ಕಾರ್ಯವೆಂದು ಮುಂದುವರೆದಲ್ಲಿ ಇಂದು ಅಡೆತಡೆ ಮಾಡುವ ಸನ್ನಿವೇಶಗಳ ಜನರೇ ಮುಂದಿನ ದಿನಗಳಲ್ಲಿ ನಾವು ಯಶಸ್ಸು ಸಾಧಿಸಿದಾಗ ನಮಗೆ ಗೌರವ ಆದರ ತೋರುತ್ತಾರೆ ಎಂದರು.

ಪರಿಸರ ರಕ್ಷಣೆ ಅತಿ ಮುಖ್ಯ. ಒಂದು ಅಧ್ಯಯನದ ಪ್ರಕಾರ 2050ನೇ ಇಸವಿಯ ಹೊತ್ತಿಗೆ ಪ್ಲಾಸ್ಟಿಕ್ ಎಂಬ ಮಹಾಮಾರಿಯ ಕಾಟದಿಂದ ಸಮುದ್ರದ 50ರಷ್ಟು ಭಾಗವನ್ನು ಇದು ಆವರಿಸಿಕೊಳ್ಳುವ ಅಂದಾಜಿದೆ. ಇದರಿಂದ ಸಮುದ್ರದಲ್ಲಿರುವ ಜಲಚರಗಳ ಜೀವನ ಚಕ್ರದ ಮೇಲೆ ಅದೆಷ್ಟು ದುಷ್ಪರಿಣಾಮ ಬೀರಬಹುದು ಎಂಬುದನ್ನು ತಾವೇ ಊಹಿಸಿಕೊಳ್ಳಿ.

ಇದರಿಂದ ಕೇವಲ ಅವುಗಳಿಗೆ ಅಷ್ಟೇ ಅಲ್ಲ ಅವುಗಳನ್ನು ಆಹಾರವಾಗಿ ಅವಲಂಬಿಸಿರುವ ಮಾನವನಿಗೂ ಆಹಾರದ ಕೊರತೆ ಹಾಗೂ ಆರೋಗ್ಯದ ಮೇಲೆ ಅತೀವ ದುಷ್ಪರಿಣಾಮ ಉಂಟಾಗುತ್ತದೆ ಎಂದರು.

ಭವಿಷ್ಯದಲ್ಲಿ ಹೀಗೆ ಪರಿಸರ ನಾಶ ಮಾಡಿದಲ್ಲಿ ಭೂಮಿಯ ತಾಪಮಾನವು ಸಹ 50 ಡಿಗ್ರಿ ತಲುಪಬಹುದು. ಆಗ ಅನೇಕ ಪ್ರಾಣಿ ಪಕ್ಷಿಗಳ ಸಂಕುಲವು ಭೂಮಿಯಿಂದ ಅಸ್ತಿತ್ವ ಕಳೆದುಕೊಳ್ಳಬಹುದು

ಎಂದು ಎಚ್ಚರಿಸಿದರು. ಆದ್ದರಿಂದ ಪರಿಸರ ರಕ್ಷಣೆ ನಮ್ಮೆಲ್ಲರ ಹೊಣೆ ಪ್ರತಿಯೊಬ್ಬ ನಾಗರೀಕರು ತಮ್ಮ ಸುತ್ತಮುತ್ತಲಿನ ಪ್ರದೇಶದಲ್ಲಿ ಒಂದೊಂದು ಗಿಡಮರಗಳನ್ನು ನೆಟ್ಟು ಅವುಗಳನ್ನು ದತ್ತು ಪಡೆದು ತಮ್ಮ ಮಕ್ಕಳಂತೆ ಪೋಷಣೆ ಮಾಡಲು ಮನವಿ ಮಾಡಿದರು. ಹೇಗೆಂದರೆ ನಮ್ಮ ನಮ್ಮ ಮನೆಯಿಂದಲೇ ಇದು ಪ್ರಾರಂಭವಾಗಬೇಕು ಮನೆಯಲ್ಲಿಯೇ ಉತ್ಪತ್ತಿಯಾಗುವ ತ್ಯಾಜ್ಯವನ್ನು ವೈಜ್ಞಾನಿಕವಾಗಿ ಮೂಲದಲ್ಲೇ ನಿರ್ವಹಣೆ ಮಾಡಬೇಕು ಹಾಗೂ ಇದರ ಬಗ್ಗೆ ಮಕ್ಕಳಿಗೆ ಮನೆಯವರಿಗೆ ತಿಳುವಳಿಕೆ ನೀಡಬೇಕು. ಅವರು ಸಹ ಕಡ್ಡಾಯವಾಗಿ ಇದನ್ನು ಪಾಲಿಸುವಂತೆ ತಾಯಂದಿರುಗಳು ಜವಾಬ್ದಾರಿ ವಹಿಸಬೇಕು ಎಂದು ಕರೆ ನೀಡಿದರು.ಕಾರ್ಯಕ್ರಮದಲ್ಲಿ ಬಡಾವಣೆಯ ಎಸ್ಸೆಸ್ಸೆಲ್ಸಿ ಮತ್ತು ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಶೇಕಡ 95ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಸಮಿತಿಯ ವತಿಯಿಂದ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಬಡಾವಣೆಯ ಎಸ್ಸೆಸ್ಸೆಲ್ಸಿ ಮತ್ತು ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಶೇಕಡ 95ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಸಮಿತಿಯ ವತಿಯಿಂದ ಸನ್ಮಾನಿಸಲಾಯಿತು.

ಕಾರ್ಯಕ್ರಮಕ್ಕೆ ಆಗಮಿಸಿದ 200ಕ್ಕೂ ಹೆಚ್ಚು ಬಡಾವಣೆಯ ನಾಗರಿಕರಿಗೆ ಉಚಿತ ಸಸಿಗಳನ್ನು ವಿತರಿಸಿ ಅವುಗಳ ನೆಟ್ಟು ಪೋಷಣೆ ಮಾಡಲು ಪ್ರತಿಜ್ಞೆ ಮಾಡಲಾಯಿತು.

ಪ್ರಾಸ್ತಾವಿಕ ನುಡಿಯನ್ನು ಸಹನ ರವಿ ಆಡಿದರು, ಕಾರ್ಯದರ್ಶಿ ರೇವಣಸಿದ್ದನಗೌಡ ಎಚ್. ಕೆ. ನಿರೂಪಿಸಿದರು. ಆನಂದಪ್ಪ ವಂದಿಸಿದರು. ಸಮಿತಿಯ ಉಪಾಧ್ಯಕ್ಷರಾದ ಕಲ್ಲಪ್ಪ, ಖಜಾಂಚಿ ಡಾ. ಸತೀಶ್ ಸದಸ್ಯರುಗಳಾದ ಮನೋಜ್, ಶಂಕರ್ ಮೂರ್ತಿ, ಸುಮಿತ್ರಮ್ಮ, ನಾಗಪ್ಪ, ನಾಗೇಂದ್ರಪ್ಪ ಹಾಗೂ ಇತರ ಸದಸ್ಯರು ಹಾಜರಿದ್ದರು.

# ನೇರ ಸಂದರ್ಶನ

**ಹಾಸನ :** ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಹಾಸನ ಮತ್ತು

ಜೆಕೆ ಟೈರ್ & ಇಂಡಸ್ಟ್ರೀಸ್ ಲಿಮಿಟೆಡ್, ಮೈಸೂರು (ಎಪಿ ಖಿಥಿಡಿಜ& ಖಟಿಜಣಡುಛ ಐಣಜ., ಒಥಿಂಡಿಜ)ಸಂಸ್ಥೆಯ ಸಹಭಾಗಿತ್ವದಲ್ಲಿ ಉದ್ಯೋಗ ನೀಡುವ ಸಂಬಂಧ ಜೂನ್.12 ರಂದು ಬೆಳಿಗ್ಗೆ 10.30 ಗಂಟೆಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ರೈಲ್ವೇ ಸ್ಟೇಷನ್ ಹತ್ತಿರ, ಸರ್ಕಾರಿ ಐ.ಟಿ.ಐ. ಕಾಲೇಜು ಆವರಣ, ಹಾಸನಇಲ್ಲಿ ನೇರ ಸಂದರ್ಶನ ನಡೆಯಲಿದ್ದು ಎಸ್.ಎಸ್.ಎಲ್.ಸಿ, ಪಿಯುಸಿ, ಐಟಿಐ (ಯಾವುದೇ ಶಾಖೆ), ಡಿಪ್ಲೊಮಾ (ಯಾವುದೇ ಶಾಖೆ)ಪಾಸಾದ ಪುರುಷ/ಮಹಿಳಾ ಅಭ್ಯರ್ಥಿಗಳು ನೇರ ಸಂದರ್ಶನದಲ್ಲಿ ಭಾಗವಹಿಸಿ ಇದರ ಸದುಪಯೋಗ ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

ದೂರವಾಣಿ ಸಂಖ್ಯೆ :08172–296374, 9743144950, ಹಾಗೂ 8722606874 ರವರನ್ನು ಕಚೇರಿ ವೇಳೆಯಲ್ಲಿ ಮಾತ್ರ ಸಂಪರ್ಕಿಸಿ ಮಾಹಿತಿ ಪಡೆಯಲು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಉದ್ಯೋಗಾಧಿಕಾರಿ ತಿಳಿಸಿದ್ದಾರೆ.


## ಮಾನ್ಯ ಗೌರವನ್ವಿತ 3ನೇ ಹೆಚ್ಚುವರಿ ಸಿವಿಲ್ ಮತ್ತು ಜೆ.ಎಮ್.ಎಫ್.ಸಿ. ನ್ಯಾಯಾಲಯ, ದಾವಣಗೆರೆ.

**ಸಿ.ಆರ್.ಮಿಸ್.ನಂ:2256/2025**

**ಅರ್ಜಿದಾರರು:** 1)ಜಯದೇವಯ್ಯ ಎಮ್ ಎಸ್ ಬಿನ್ ಲೇಟ್ ಹೆಚ್ ಎಂ ಶಂಭುಲಿಂಗಯ್ಯ ವಯಸ್ಸು 72 ವರ್ಷ
2) ಶ್ರೀಮತಿ ಗಿರಿಜಮ್ಮ ಕೋಂ ಗುರುಸಂಗಯ್ಯ ವಯಸ್ಸು 65 ವರ್ಷ ವಾಸ: ಚೆನ್ನಪಟ್ಟಣ, ಹೊಳಲ್ಕೆರಿ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ,
3) ಶ್ರೀಮತಿ ಹಾಲಮ್ಮ ಕೋಂ ಲೇಟ್ ಸಿದ್ದಯ್ಯ ವಯಸ್ಸು 55 ವರ್ಷ ವಾಸ: ಬೆನಕನಹಳ್ಳಿ, ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ.
4) ಗುರುಸ್ವಾಮಿ ಎಮ್ ಎಸ್ ಬಿನ್ ಲೇಟ್ ಹೆಚ್ ಎಂ ಶಂಭುಲಿಂಗಯ್ಯ ವಯಸ್ಸು 53 ವರ್ಷ5) ಶ್ರೀಮತಿ ಭಾಗ್ಯಮ್ಮ ಕೋಂ ಲೇಟ್ ಎಂ ರೇಣುಕಾ ವಯಸ್ಸು 70 ವರ್ಷ
ಅರ್ಜಿದಾರ ನಂ.1.4.5 ರವರ ವಾಸ: ಬಸಪೂರ ಗ್ರಾಮ, ದಾವಣಗೆರೆ ತಾ

**ವಿರುದ್ಧ**

**ಎದುರುದಾರರು:** ಜನನ ಮತ್ತು ಮರಣ ನೋಂದಣಾಧಿಕಾರಿಗಳು ಮಹಾನಗರ ಪಾಲಿಕೆರವರ ಕಛೇರಿ, ದಾವಣಗೆರೆ,

## ಸಾರ್ವಜನಿಕ ನೋಟಿಸ್

ಮೇಲ್ಕಂಡ ಪ್ರಕರಣವನ್ನು 1 ರಿಂದ 4ನೇ ಅರ್ಜಿದಾರರ ತಾಯಿ 5ನೇ ಅರ್ಜಿದಾರರ ಅತ್ತೆಯಾದ ಶ್ರೀಮತಿ ವೀರಮ್ಮ ಕೋಂ ಹೆಚ್ ಎಮ್ ಶಂಭುಲಿಂಗಯ್ಯ ಇವರು ದಿನಾಂಕ: 25–01–1998ರಂದು, ಬಸಾಪೂರ ಗ್ರಾಮ, ದಾವಣಗೆರೆ ತಾ ಮತ್ತು ಜಿ. ಸ್ವಗ್ರಾಮದ ವಿಳಾಸದ ಮನೆಯಲ್ಲಿ ವಯೋಮರಣ ಹೊಂದಿರುವ ಅಂಶವನ್ನು ಎದುರುದಾರರು ನೊಂದಾಯಿಸಿಕೊಂಡು ಮರಣ ಸಮರ್ಥನಾ ಪತ್ರವನ್ನು ನೀಡುವಂತೆ ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಸದರಿ ಅರ್ಜಿದಾರರ ಅರ್ಜಿಯನ್ನು ಮಾನ್ಯ ನ್ಯಾಯಾಲಯವು ನೊಂದಾಯಿಸಿಕೊಂಡು ಪ್ರಕರಣವನ್ನು ದಿನಾಂಕ: 18/07/25ರಂದು ಬೆಳಗ್ಗೆ 11–00 ಗಂಟೆಗೆ ವಿಚಾರಣೆಗೆ ನಿಗದಿಪಡಿಸಿದ್ದು, ಅರ್ಜಿದಾರರ ಅರ್ಜಿಗೆ ಯಾರಾದರೂ ತಕರಾರು ಇದ್ದಲ್ಲಿ ತಾವಾಗಲೀ ತಮ್ಮ ಪರ ವಕೀಲರ ಮುಖಾಂತರವಾಗಲೀ ನಿಗದಿತ ದಿನಾಂಕ ಸಮಯದಂದು ಮೇಲ್ಕಂಡ ನ್ಯಾಯಾಲಯದಲ್ಲಿ ತಮ್ಮ ಅಹವಾಲು ಸಲ್ಲಿಸಬಹುದು. ತಪ್ಪಿದಲ್ಲಿ ಪ್ರಕರಣವನ್ನು ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು ತಿಳಿಯಿರಿ,

ನ್ಯಾಯಾಲಯದ ಅಪ್ಪಣೆಯ ಮೇರೆಗೆ ದಿನಾಂಕ: 9/6/25 ರಂದು ನೀಡಲಾಗಿದೆ.

ನ್ಯಾಯಾಲಯದ ಆದೇಶದ ಮೇರೆಗೆ,

ಸಹಿ/–
ಅರ್ಜಿದಾರರ ಪರ ವಕೀಲರು
(ಶ್ರೀ. ಅರುಣ್ ಕುಮಾರ್‌ಎಮ್)
ದಾವಣಗೆರೆ
ದಿನಾಂಕ: 9/6/2025

ಶಿರಸ್ತೇದಾರರು
ಮಾನ್ಯ ಗೌರವನ್ವಿತ 3ನೇ ಹೆಚ್ಚುವರಿ ಸಿವಿಲ್ ಮತ್ತು ಜೆ.ಎಮ್.ಎಫ್.ಸಿ. ನ್ಯಾಯಾಲಯ, ದಾವಣಗೆರೆ.

## ಜಗಳೂರು ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ರವರ ನ್ಯಾಯಾಲಯದಲ್ಲಿ

**ಸಿ.ಆರ್.ಮಿಸ್ ನಂ: 470/2025**

**ಅರ್ಜಿದಾರರು:** 1) ನಾಗರಾಜಪ್ಪ ಬಿನ್ ಚನ್ನಬಸಪ್ಪ, ವಯಸ್ಸು ಸುಮಾರು 65 ವರ್ಷ,ವ್ಯವಸಾಯ ಗುತ್ತಿದುರ್ಗ ಗ್ರಾಮ. ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ. 2) ಚನ್ನಮ್ಮ ಬಿನ್ ಚನ್ನಬಸಪ್ಪ, ವಯಸ್ಸು ಸುಮಾರು 63 ವರ್ಷ, ವ್ಯವಸಾಯ ಹುಲ್ಲೂರು ಗ್ರಾಮ, ಚಿತ್ರದುರ್ಗ ತಾಲ್ಲೂಕು ಮತ್ತು ಜಿಲ್ಲೆ 3) ಕಲ್ಲಮ್ಮ ಕೋಂ ಷಣ್ಮುಖಪ್ಪ, ಬಿನ್ ಚನ್ನಬಸಪ್ಪ ವಯಸ್ಸು ಸುಮಾರು 60 ವರ್ಷ, ವ್ಯವಸಾಯ ಜಮ್ಮಾಪುರ ಗ್ರಾಮದ ವಾಸಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ.

**ವಿರುದ್ಧ**

**ಎದುರುದಾರರು:** ತಹಶೀಲ್ದಾರ್ ರವರ ಮತ್ತು ಜನನ ಮರಣ ನೋಂದಣಾಧಿಕಾರಿಗಳು. ಜಗಳೂರು ತಾಲ್ಲೂಕು. ದಾವಣಗೆರೆ ಜಿಲ್ಲೆ.

## ಸಾರ್ವಜನಿಕ ಪ್ರಕಟಣೆ

ಮೇಲ್ಕಂಡ ಅರ್ಜಿದಾರರು ಎದುರುದಾರರ ವಿರುದ್ಧ ಘನ ನ್ಯಾಯಾಲಯದಲ್ಲಿ ತಂದೆಯವರಾದ **ಚನ್ನಬಸಪ್ಪ ಬಿನ್ ಕಲ್ಲಪ್ಪ** ಇವರು **ದಿನಾಂಕ: 15–12–1995** ರಂದು ಜಗಳೂರು – ತಾಲ್ಲೂಕು ಬಿಳಿಚೋಡು ಹೋಬಳಿ, ಗುತ್ತಿದುರ್ಗ ಗ್ರಾಮದಲ್ಲಿ ಮರಣ ಹೊಂದಿದ್ದು, ಸದರಿ ಮೃತರ ಮರಣ ಪ್ರಮಾಣ ಪತ್ರವನ್ನು ಕೋರಿ ಎದುರುದಾರರ ವಿರುದ್ಧ ಅರ್ಜಿಯನ್ನು ಘನ – ನ್ಯಾಯಾಲಯಕ್ಕೆ ಸಲ್ಲಿಸಿರುತ್ತಾರೆ. ಸದರಿ ಅರ್ಜಿಗೆ ಸಂಬಂಧಿಸಿದಂತೆ ಮೇಲ್ಕಂಡ ಎದುರುದಾರರನ್ನು ಒಟ್ಟು ಬೇರೆ ಯಾರದರೂ ವಾರಸುದಾರರು ಇದ್ದರೆ ಅಥವಾ ಬೇರೆ ಯಾರಿಗಾದರೂ ತಂಟೆ ತಕರಾರುಗಳು ಏನಾದರೂ ಇದ್ದಲ್ಲಿ ದಿನಾಂಕ: 10. 07 .2025 ರಂದು ಪೂರ್ವಹ್ನ 11–00 ಗಂಟೆಗೆ ಖುದ್ದಾಗಿಯಾಗಲೀ ಅಥವಾ ವಕೀಲರ ಮೂಲಕವಾಗಲೀ ಘನ ನ್ಯಾಯಾಲಯಕ್ಕೆ ಹಾಜರಾಗಿ ತಮ್ಮ – ಲಿಖಿತ ತಕರಾರು / ಆಕ್ಷೇಪಣೆಗಳು ಏನಾದರೂ ಇದ್ದರೆ ಸಲ್ಲಿಸತಕ್ಕದ್ದು, ತಪ್ಪಿದ ಪಕ್ಷದಲ್ಲಿ ಈ ಮೇಲ್ಕಂಡ ಅರ್ಜಿಯನ್ನು ಗೈರು ಹಾಜರಿಯಲ್ಲಿ ಏಕಪಕ್ಷೀಯವಾಗಿ ತೀರ್ಮಾನಿಸಲಾಗುವುದು ತಿಳಿಯಿರಿ,

ನ್ಯಾಯಾಲಯದ ಮುದ್ರೆ ನನ್ನ ಸಹಿಯೊಂದಿಗೆ ದಿನಾಂಕ: 03–06 2025ರಂದು ಕೊಡಲ್ಪಟ್ಟಿದೆ.

ನ್ಯಾಯಾಲಯದ ಆದೇಶದ ಮೇರೆಗೆ

ಸಹಿ/–
ಅರ್ಜಿದಾರರುಗಳ ಪರ ವಕೀಲರು
(ಶ್ರೀ. ವೇದಮೂರ್ತಿ ಜಿ.ಎಂ)
ವಕೀಲರು ಜಗಳೂರು

ಸಹಿ/–
ಶಿರಸ್ತೇದಾರರು
ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಾ ದಂಡಧಿಕಾರಿಗಳು ನ್ಯಾಯಾಲಯ ಜಗಳೂರು .

# ಸಾಧಕರ ಮಾರ್ಗ ಅನುಸರಿಸಿ ದೇಶಕ್ಕೆ ಕೊಡುಗೆ ನೀಡಿ: ಎನ್ ಚಲುವರಾಯಸ್ವಾಮಿ

ಭಾರತ ದೇಶದಲ್ಲಿ ಬಹಳಷ್ಟು ಸಾಧಕರಿದ್ದಾರೆ. ವಿದ್ಯಾರ್ಥಿಗಳು ಸಾಧಕರ ಮಾರ್ಗ ಅನುಸರಿಸಿ ದೇಶಕ್ಕೆ ಕೊಡುಗೆ ನೀಡಿ ಎಂದು ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್ ಚಲುವರಾಯಸ್ವಾಮಿ ಅವರು ತಿಳಿಸಿದರು.

ಅವರು ಇಂದು ಕಲಾಮಂದಿರದಲ್ಲಿ ಆಯೋಜಿಸಲಾಗಿದ್ದ ನಾಲ್ವಡಿ ಕೃಷ್ಣರಾಜ ಒಡೆಯರ್ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಸರ್ಕಾರದ ವತಿಯಿಂದ ಎಲ್ಲ ಸಾಧಕರನ್ನು ಗೌರವಿಸಲು ಸಾಧ್ಯವಾಗುವುದಿಲ್ಲ. ಸಂಘ ಸಂಸ್ಥೆಗಳು ಸಾಧಕರನ್ನು ಗುರುತಿಸಿ, ಗೌರವಿಸುತ್ತಿರುವ ಕೆಲಸ ಶ್ಲಾಘನೀಯ ಎಂದರು.

ಎಸ್.ಎಸ್.ಎಲ್.ಸಿ ಪರೀಕ್ಷೆಯ ಪದ್ಧತಿ ಬದಲಾವಣೆಯಿಂದ ಕಳೆದ ಬಾರಿ ಜಿಲ್ಲೆಯಲ್ಲಿ ಉತ್ತಮ ಫಲಿತಾಂಶ ಬಂದಿರಲಿಲ್ಲ. ಈ ಬಾರಿ ಜಿಲ್ಲಾಡಳಿತ ಹಾಗೂ ಶಿಕ್ಷಣ ಇಲಾಖೆ ಉತ್ತಮ ಯೋಜನೆಗಳನ್ನು ರೂಪಿಸಿ ಫಲಿತಾಂಶವನ್ನು ಉತ್ತಮಗೊಳಿಸಿದೆ ಎಂದರು.

ಸರ್ಕಾರಿ ಶಾಲೆ ಎಂದರೆ ತಾತ್ಸಾರ ಬೇಡ ಇಂದು ಕಾರ್ಯಕ್ರಮದಲ್ಲಿ ಸನ್ಮಾನಿಸಿದ ಐ.ಎ.ಎಸ್. ಹಾಗೂ ಐ.ಪಿ.ಎಸ್ ಉತ್ತೀರ್ಣರಾಗಿರುವವರು ಸರ್ಕಾರಿ ಶಾಲೆಯಲೇ ವಿದ್ಯಾಭ್ಯಾಸ ಮಾಡಿರುವವರು. ಬಹಳಷ್ಟು ಉನ್ನತ ಹುದ್ದೆಯಲ್ಲಿರುವ ಅಧಿಕಾರಿಗಳು ಹಾಗೂ ವಿಜ್ಞಾನಿಗಳಲ್ಲಿ ಶೇ 70 ರಷ್ಟು ಜನ ಸರ್ಕಾರಿ ಶಾಲಾ, ಕಾಲೇಜುಗಳಲ್ಲಿ ವಿದ್ಯಾಭ್ಯಾಸ ಮಾಡಿರುವವರು. ಸಾಧನೆ ಮಾಡಬೇಕು ಎಂಬ ಮನೋಭಾವನೆ ಇರುವವರು ಎಷ್ಟೇ ಕಷ್ಟ ಇದ್ದರೂ ಗಲ್ಲುತ್ತಾರೆ ಎಂದರು.

ನಾಲ್ವಡಿ ಅವರು ಆಕಾಶ ಇದ್ದಂತೆ ಅವರು ನೀಡಿರುವ ಕೊಡುಗೆಗಳು ಅನನ್ಯ. ಅವರು ಆಡಳಿತ ನಡೆಸುವ ಸಂದರ್ಭದಲ್ಲಿ ಸಾಮಾಜಿಕ, ಆರ್ಥಿಕ ಹಾಗೂ ಶೈಕ್ಷಣಿಕ ಪರಿಸ್ಥಿತಿಗಳನ್ನು ಅವಲೋಕಿಸಿ ಅವುಗಳಲ್ಲಿ ಬದಲಾವಣೆ ತಂದು ಅಭಿವೃದ್ಧಿ ಪಡಿಸಿ ಸದಾ ಕಾಲ ಜನರ ಮನಸ್ಸಿನಲ್ಲಿ ಉಳಿದುಕೊಂಡಿದ್ದಾರೆ ಎಂದರು.

ಮಂಡ್ಯ ಜಿಲ್ಲೆಯಲ್ಲಿ ಕೆ.ಆರ್.ಎಸ್. ಶಿವನಸಮುದ್ರ, ಮೈ ಶುಗರ್, ಸೇರಿದಂತೆ ಹಲವಾರು ಯೋಜನೆಗಳನ್ನು ನಾಲ್ವಡಿ ಅವರು ಜಾರಿಗೆ ತಂದು ಸಾರ್ವಜನಿಕ ಜೀವನವನ್ನು ಸುಧಾರಣೆ ಮಾಡಿದರು. ನಾಲ್ವಡಿ ಅವರು ನೀಡಿದ ಕೊಡುಗೆಗಳಿಂದ ಮೈಸೂರು ಭಾಗದ ಜಿಲ್ಲೆಗಳು ಬೇರೆ ಜಿಲ್ಲೆಗಳಿಗಿಂತ ಮೊದಲೇ ಅಭಿವೃದ್ಧಿ ಹೊಂದಿತ್ತು. ಆದರೆ ಇಂದು ನಾವು ಅಭಿವೃದ್ಧಿಯಿಂದ ಹಿಂದೆ ಉಳಿಯುತ್ತಿದ್ದೇವೆ. ನಾವು ನಮ್ಮ ಆಲೋಚನೆಗಳನ್ನು ಬದಲಾವಣೆ ಮಾಡಿಕೊಂಡು ಅಭಿವೃದ್ಧಿ ಪಥದಲ್ಲಿ ಸಾಗಬೇಕಿದೆ ಎಂದರು.

ನಾಲ್ವಡಿ ಅವರು ಕೃಷಿಗೆ ನೀಡಿದ ಕೊಡುಗೆ ಹಾಗೂ ಮಂಡ್ಯ ಕೃಷಿ ಆಧಾರಿತ ಜಿಲ್ಲೆ ಎಂದು ಮಾನ್ಯ ಮುಖ್ಯಮಂತ್ರಿಗಳಿಗೆ ಮನವಿ ಮಾಡಿ ಮಂಡ್ಯ ಜಿಲ್ಲೆಯಲ್ಲಿ ಕೃಷಿ ವಿಶ್ವವಿದ್ಯಾನಿಲಯ ಪ್ರಾರಂಭಿಸಲು ಒಪ್ಪಿಗೆ ನೀಡಿದರು. ಆದಿ ಚುಂಚನಗಿರಿ ಮಹಾಸಂಸ್ಥಾನವು ಸಮಾಜಕ್ಕೆ ಹಲವಾರು ಕೊಡುಗೆ ನೀಡಿದ್ದರು ಶ್ರೀ ಶ್ರೀ ಶ್ರೀ ನಿರ್ಮಲಾನಂದ ಸ್ವಾಮೀಜಿ ಅವರು ಅವಿರತ ಪ್ರಯತ್ನದಿಂದ ಖಾಸಗಿ ಕೃಷಿ ಕಾಲೇಜನ್ನು ಸಹ ಪ್ರಾರಂಭಿಸಿದ್ದಾರೆ ಎಂದರು.

ಕೃಷಿ ಸಚಿವನಾಗಿ ಕೆಲಸ ಮಾಡಲು ಹಾಗೂ ಜಿಲ್ಲೆಯನ್ನು ಅಭಿವೃದ್ಧಿ ಪಡಿಸಲು ಹಲವಾರು ಸಾರ್ವಜನಿಕರು ಹಾಗೂ ಸಂಘ, ಸಂಸ್ಥೆಗಳು ಶಕ್ತಿ ತುಂಬಿದ್ದಾರೆ. ಕೃಷಿ ವಿಶ್ವವಿದ್ಯಾನಿಲಯ ಮುಂದಿನ ದಿನಗಳಲ್ಲಿ ರೈತರಿಗೆ ಉಪಯುಕ್ತವಾಗಲಿದೆ ಪ್ರತಿ ರೈತನ ಮನೆಗೆ ಕಾಮದೇನುವಾಗಲಿದೆ ಎಂದು ಅಭಿಪ್ರಾಯ ಪಟ್ಟರು. ಕೃಷಿಯಲ್ಲಿ ಹಲವಾರು ಬದಲಾವಣೆಯಾಗಬೇಕಿದೆ ಇದಕ್ಕೆ ಕೃಷಿ ವಿಶ್ವವಿದ್ಯಾನಿಲಯ ಸಹಕರಿಸಲಿದೆ. ಕೃಷಿಯಲ್ಲಿ ತಾಂತ್ರಿಕತೆ, ಸಮಗ್ರ ಕೃಷಿ, ನೈಸರ್ಗಿಕ ಹಾಗೂ ಸಾವಯವ ಕೃಷಿ ಕೃಷಿಯಲ್ಲಿ ಕಡಿಮೆ ನೀರಿನ ಬಳಕೆ ಈಗೆ ಹಲವಾರು ಬದಲಾವಣೆ ತರಬೇಕಿದೆ. ಕಬ್ಬಿನಲ್ಲಿ ತಾಂತ್ರಿಕತೆ ತಂದರೆ ಇಳುವರಿ ಹೆಚ್ಚಾಗುತ್ತದೆ. ಕಬ್ಬನ್ನು ಕಟಾವು ಮಾಡಲು ಹೈಟೆಕ್ ಹಾರ್ವೆಸ್ಟರ್ ನ್ನು ಎಸ್.ಸಿ /ಎಸ್.ಟಿ ರೈತರಿಗೆ 50 ಲಕ್ಷ ರೂ ಹಾಗೂ ಸಾಮಾನ್ಯ ರೈತರಿಗೆ 40 ಲಕ್ಷ ರೂ ಸಹಾಯ ಧನ ನೀಡಲಾಗುತ್ತಿದೆ. ಈ ಯೋಜನೆಯನ್ನು 344 ರೈತರಿಗೆ ಒದಗಿಸಲಾಗಿದೆ ಎಂದರು.



ಕರ್ನಾಟಕ ರಾಜ್ಯ ವಾಯುಮಾಲಿನ್ಯ ನಿಯಂತ್ರಣ ಮಂಡಳಿಯ ಅಧ್ಯಕ್ಷರು ಹಾಗೂ ಮಳವಳ್ಳಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಪಿ.ಎಂ. ನರೇಂದ್ರ ಸ್ವಾಮಿ ಅವರು ಮಾತನಾಡಿ ನಾಲ್ವಡಿ ಕೃಷ್ಣರಾಜ ಒಡೆಯರ್ ರವರು ತಮ್ಮ ಪ್ರಜೆಗಳನ್ನು ತಮ್ಮ ಮನೆಯ ಮಕ್ಕಳಂತೆ ನೋಡಿದವರು, ಆಧುನಿಕ ವ್ಯವಸ್ಥೆಯಲ್ಲಿಯೂ ನೀಡಲಾಗದಂತಹ ಕೊಡುಗೆಗಳನ್ನು ಅವರ ಆಳ್ವಿಕೆಯಲ್ಲೇ ನೀಡಿದ್ದಾರೆ ಎಂದರು.

ಏಷ್ಯಾದಲ್ಲಿ ಪ್ರಥಮ ಬಾರಿಗೆ ಜಲ ವಿದ್ಯುತ್ ಸ್ಥಾವರ ಸ್ಥಾಪನೆ, ಬೆಳಗೊಳದ ಕಾಗದ ಕಾರ್ಖಾನೆ, ಸಕ್ಕರೆ ಕಾರ್ಖಾನೆ, ಭದ್ರಾವತಿಯ ಉಕ್ಕಿನ ಕಾರ್ಖಾನೆ ಇನ್ನೂ ಮುಂತಾದ ಅನೇಕ ಕೊಡಗುಗಳನ್ನು ನಾಲ್ವಡಿ ಕೃಷ್ಣರಾಜ ಒಡೆಯರ್ ನಮಗೆ ನೀಡಿರುವುದು ನಮ್ಮ ಹೆಮ್ಮೆ ಎಂದು ಹರ್ಷ ವ್ಯಕ್ತಪಡಿಸಿದರು.

ರೈತರು ಇಂದು ರಾಸಾಯನಿಕಗಳನ್ನು ಬಳಸಿ ಕೃಷಿ ಮಾಡುತ್ತಿರುವುದು ಮಣ್ಣಿನ ಪೌಷ್ಟಿಕಾಂಶವನ್ನು ನಾಶ ಮಾಡುತ್ತಿದೆ , ಜಿಲ್ಲೆಯ ರೈತರು ಕೃಷಿ ಪದ್ಧತಿಯನ್ನು ಬದಲಾಯಿಸಬೇಕಿದೆ, ಸಾವಯವ ಕೃಷಿ ಪದ್ಧತಿಯನ್ನು ಅಳವಡಿಸಿಕೊಳ್ಳುವ ಮೂಲಕ ಮುಂದಿನ ಪೀಳಿಗೆಯನ್ನು ಉಳಿಸಿಕೊಳ್ಳಬೇಕು ಎಂದು ಹೇಳಿದರು.

ನಾಲ್ವಡಿ ಕೃಷ್ಣರಾಜ ನೀಡಿದ ಕೊಡುಗೆಗಳಲ್ಲಿ ಒಂದಾದ ಶ್ರೀಗಂಧದ ಸೋಪ್ ತಯಾರಿಕೆ ಕಾರ್ಖಾನೆಯು ಇಂದು ಅಂತರಾಷ್ಟ್ರೀಯ ಮಟ್ಟದಲ್ಲಿ ಮನ್ನಣೆ ಪಡೆದು ಅಭಿವೃದ್ಧಿ ಹೊಂದುತ್ತಿದೆ, ನಾವೆಲ್ಲರೂ ಕೃಷಿ ಆಧಾರಿತ ಕೈಗಾರಿಕೆಗಳ ಸ್ಥಾಪಿಸುವ ಮೂಲಕ ನಾಲ್ವಡಿ ಕೃಷ್ಣರಾಜ ಹಾಕಿಕೊಟ್ಟ ಮಾರ್ಗದಲ್ಲಿ ನಡೆಯೋಣ ಎಂದು ತಿಳಿಸಿದ್ದರು. ನಂತರ ಶ್ರೀ ಆದಿಚುಂಚನಗಿರಿ ಕ್ಷೇತ್ರದ ಪೀಠಾಧ್ಯಕ್ಷರಾದ ಶ್ರೀ ನಿರ್ಮಲಾನಂದ ಸ್ವಾಮೀಜಿ ಅವರು ಮಾತನಾಡಿ ಪ್ರತಿಯೊಬ್ಬ ಯಶಸ್ವಿ ಪುರುಷನ ಹಿಂದೆ ಒಬ್ಬ ಮಹಿಳೆ ಇರುತ್ತಾಳೆ, ಅದೇ ರೀತಿ ನಾಲ್ವಡಿ ಕೃಷ್ಣರಾಜ ಒಡೆಯರ್ ರವರಿಗೆ ಅವರ ತಾಯಿ ಕೆಂಪರಾಜಮ್ಮ ಮತ್ತು ಅವರ ಪತ್ನಿ ಪ್ರತಾಪ ಕುಮಾರ ದೇವಿ ನಿಂತಿದ್ದರು, ಅವರ ತಾಯಿ ಕೆಂಪರಾಜಮ್ಮ ತನ್ನ ಮಗನಿಗೆ ಶಿಕ್ಷಣವನ್ನು ನೀಡಲು ವಿದೇಶದಿಂದ ಶಿಕ್ಷಕರನ್ನು ಕರೆಸಿ ಶಿಕ್ಷಣ ಕೊಡಿಸಿದರು ಎಂದು ಹೇಳಿದರು. ಅವರ ತಾಯಿ ಗುಣಮಟ್ಟದ ಶಿಕ್ಷಣವನ್ನು ನೀಡಿದ್ದರಿಂದಲೇ ಮೈಸೂರು ಸಂಸ್ಥಾನದಲ್ಲಿ ನವ ಮೈಸೂರನ್ನು ನಿರ್ಮಾಣ ಮಾಡಲು ಸಾಧ್ಯವಾಯಿತು, ಮೈಸೂರು ಸಂಸ್ಥಾನದ ಪ್ರಜೆಗಳು ಆಧುನಿಕವಾಗಿ ಅಭಿವೃದ್ಧಿ ಹೊಂದಲು ಭಾರತದ ಅತಿ ದೊಡ್ಡ ಐ.ಟಿ ಕಂಪನಿಯಾದ "ಟಾಟಾ ಕನ್ಸಲ್ಟೆನ್ಸಿ ಸರ್ವೀಸಸ್"ಗೆ ಬೆಂಗಳೂರಿನಲ್ಲಿ ಸುಮಾರು 400 ಎಕರೆ ಪ್ರದೇಶವನ್ನು ನಾಲ್ವಡಿ ಕೃಷ್ಣರಾಜ ಒಡೆಯರ್ ಬಿಟ್ಟುಕೊಟ್ಟಿದ್ದರು ಎಂದು ಹೇಳಿದರು. ಯುರೋಪಿನ ತತ್ವಶಾಸ್ತ್ರಜ್ಞರು ಮೈಸೂರು ಸಂಸ್ಥಾನ ನಾಲ್ವಡಿ ಕೃಷ್ಣರಾಜ ಒಡೆಯರ್ ಸಮಯದಲ್ಲಿ ಅಭಿವೃದ್ಧಿ ಹೊಂದಿದಷ್ಟು ಯುರೋಪಿನ ಅದೆಷ್ಟೋ ರಾಜ್ಯಗಳು ಅಭಿವೃದ್ಧಿಯೇ ಹೊಂದಿರಲಿಲ್ಲ ಎಂದು ಬರೆದುಕೊಂಡಿದ್ದಾರೆ. ಅ?ಯನಿ ಬೆಸೆಂಟ್ ಸಹ ನಾಲ್ವಡಿ ಕೃಷ್ಣರಾಜ ಒಡೆಯರ್ ರವರಂತ ರಾಜರು ಭಾರತದ ಎಲ್ಲಡೆ ಇದಿದ್ದರೆ ಭಾರತ ಬ್ರಿಟಿಷರಿಂದ ಆಳ್ವಿಕೆ ಮಾಡಿಸಿ ಕುಳ್ಳ ವ ಪರಿಸ್ಥಿತಿ ಬರುತ್ತಿರಲಿಲ್ಲ ಎಂದು ತಿಳಿಸಿದರು.

ನಾಲ್ವಡಿ ಕೃಷ್ಣರಾಜ ಒಡೆಯರ್ ಮಾರುವೇಶದಲ್ಲಿ ಹೋಗಿ ಜನರ ಸಮಸ್ಯೆಗಳನ್ನು ಆಲಿಸಿ ಪರಿಹಾರ ನೀಡುತ್ತಿದ್ದರು, ಭಾರತ ದೇಶದಲ್ಲಿ ಶೇಕಡ 50ರಷ್ಟು ಸಾರ್ವಜನಿಕರು ಕೃಷಿ ಅವಲಂಬಿತರಾಗಿದ್ದಾರೆ ಆದರೆ ಕೃಷಿಯಿಂದ ದೇಶದ ಒಟ್ಟು ದೇಶೀಯ ಉತ್ಪನ್ನ ಶೇ 18 ರಷ್ಟಿದೆ, ದೇಶದ ರೈತರು ಆಧುನಿಕ ವಿಜ್ಞಾನವನ್ನು ಬಳಸಿಕೊಂಡು ಕೃಷಿಯನ್ನು ಪ್ರಾರಂಭಿಸಿದರೆ, ನಮ್ಮ ರೈತರ ಬದುಕು ಹಸನಾಗುತ್ತದೆ ಎಂದು ಹೇಳಿದರು.

ಬೆಳ್ಳಿ ಕೀರಿಟ ನೀಡಿ ಅಭಿನಂದನೆ : ಜಿಲ್ಲೆಗೆ ಕೃಷಿ ವಿಶ್ವವಿದ್ಯಾನಿಲಯ ಅನ್ನು ತಂದ ಜಿಲ್ಲಾ ಉಸ್ತುವಾರಿ ಸಚಿವ ಹಾಗೂ ಕೃಷಿ ಸಚಿವರಾದ ಎನ್ ಚೆಲುವರಾಯಸ್ವಾಮಿ ರವರಿಗೆ ನಾಲ್ವಡಿ ಕೃಷ್ಣರಾಜ ಒಡೆಯರ್ ಟ್ರಸ್ಟ್ (ರಿ) ವತಿಯಿಂದ ಬೆಳ್ಳಿ ಕಿರೀಟ ಮತ್ತು ಅಭಿನಂದನಾ ಪತ್ರ ನೀಡಿ ಗೌರವಿಸಲಾಯಿತು. ಎಸ್ ಎಸ್ ಎಲ್ ಸಿ ಹಾಗೂ ದ್ವಿತೀಯ ಪಿಯುಸಿ ಯಲ್ಲಿ ಅತಿ ಹೆಚ್ಚು ಅಂಕ ಪಡೆದ ಜಿಲ್ಲೆಯ ವಿದ್ಯಾರ್ಥಿಗಳಿಗೆ ಗೌರವಿಸಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಕೊಮ್ಮೇರಹಳ್ಳಿ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪುರುಷೋತ್ತಮಾನಂದನಾಥ ಸ್ವಾಮೀಜಿ, ಮಾಜಿ ಉಪ ಮುಖ್ಯಮಂತ್ರಿಗಳಾದ ಅಶ್ವಥ್ ನಾರಾಯಣ್, ವಿಧಾನಪರಿಷತ್ ಸದಸ್ಯ ದಿನೇಶ್ ಗೂಳಿಗೌಡ, ಜಿಲ್ಲಾಧಿಕಾರಿ ಡಾ. ಕುಮಾರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಕೆ ಆರ್ ನಂದಿನಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ, ನಾಲ್ವಡಿ ಕೃಷ್ಣರಾಜ ಟ್ರಸ್ಟ್ ನ ಅಧ್ಯಕ್ಷರಾದ ವೆಂಕಟೇಶ್, ಮುಖಂಡರುಗಳಾದ ಬಸವರಾಜು ವಿನಯ್ ಯೋಗೇಶ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಮಕ್ಕಳಲ್ಲಿರುವ ನ್ಯೂನ್ಯತೆ ಗುರುತಿಸಿ ತಿದ್ದಿ ತೀಡಬೇಕು : ಡಾ.ಪ್ರಭಾ ಮಲ್ಲಿಕಾರ್ಜುನ್

**ದಾವಣಗೆರೆ :** ಮಕ್ಕಳಿಗೆ ನಿರಂತರ ಅಭ್ಯಾಸ ಮಾಡಿಸುವ ಮೂಲಕ. ಅವರ ಸಾಧನೆಗೆ ಶಕ್ತಿನೀಡಬೇಕು. ಮಕ್ಕಳಲ್ಲೂ ಅನೇಕ ನ್ಯೂನ್ಯತೆಗಳಿರುತ್ತವೆ ಅವುಗಳನ್ನು ಸರಿಯಾದ ಕ್ರಮದಲ್ಲಿ ತಿದ್ದಿ ತೀಡಬೇಕು ಜೊತೆಗೆ ಉತ್ತಮ ಪ್ರಜೆಯಾಗಿ ರೂಪಿಸಬೇಕು ಎಂದು ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ಶಿಕ್ಷಕರಿಗೆ ಕರೆ ನೀಡಿದರು.

ದಾವಣಗೆರೆ ಸಮೀಪದ ಶಿರಮಗೊಂಡನಹಳ್ಳಿಯಲ್ಲಿ ಬುಧವಾರ ಸ್ವಾಮಿ ವಿವೇಕಾನಂದ ಶಿಕ್ಷಣ ಅಭಿಯಾನ ಯೋಜನೆಯಡಿ ನಿರ್ಮಾಣಗೊಂಡ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ನೂತನ ಕಟ್ಟಡದ ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು ಶಾಲಾ ಶಿಕ್ಷಣದಿಂದ ವಂಚಿತರಾದ ಮಕ್ಕಳನ್ನು ಗುರುತಿಸಬೇಕು ಅವರನ್ನು ಪುನಃ ಶಾಲೆಗೆ ದಾಖಲಿಸಿ ಅವರಿಗೆ ಉತ್ತಮ ವಿದ್ಯಾಭ್ಯಾಸ ನೀಡಬೇಕು.ಮಕ್ಕಳು ದೇಶದ ನಿಜವಾದ ಆಸ್ತಿ ಅವರನ್ನು ಸಂರಕ್ಷಿಸುವುದು ನಮ್ಮೆಲ್ಲರ ಕರ್ತವ್ಯ ಎಂದರು.ಮಕ್ಕಳಲ್ಲಿ ಪರಿಸರ, ಹಸಿರು ಇಂಧನ, ನೀರಿನ ಸಂರಕ್ಷಣೆ,ಗುಣಮಟ್ಟದ ಗಾಳಿ ಬಗ್ಗೆ ಅರಿವು ಮೂಡಿಸಬೇಕು.ಶಿಕ್ಷಕರು ಮಾತೃಹೃದಯದಿಂದ ಮಕ್ಕಳ ಸಮಸ್ಯೆಗೆ ಸ್ಪಂದಿಸಬೇಕು.ಶಿಕ್ಷಣದ ಜೊತೆಗೆ ಸಂಸ್ಕೃತಿ,ಸಂಸ್ಕಾರ ಹಾಗೂ ಮಾನವೀಯ ಮೌಲ್ಯಗಳನ್ನು ತಿಳಿಸಬೇಕು. ಮಕ್ಕಳು ತಮ್ಮ ಬೆಳವಣಿಗೆಗೆ ಪೂರಕವಾದ ಹೊಸ ವಿಷಯಗಳನ್ನು ತಿಳಿದುಕೊಳ್ಳುವುದು ಅತಿ ಅಗತ್ಯ.



ಮಕ್ಕಳು ತಮ್ಮ ದಿನಚರಿಯನ್ನು ಬರೆಯಬೇಕು ಇದರಿಂದ ಮುಂದಿನ ಪ್ಲಾನ್ ಇರುತ್ತದೆ ಹಾಗೂ ಅದನ್ನು ಸರಿಯಾದ ಕ್ರಮದಲ್ಲಿ ನಿಭಾಯಿಸಬೇಕು. ಆಗ ಉನ್ನತಮಟ್ಟಕ್ಕೆ ಹೋಗಲು ಸಾಧ್ಯ ಎಂದರು.


ಇಂದಿನ ಮಕ್ಕಳು ಹೆಚ್ಚಾಗಿ ಮೊಬೈಲ್ ಹಾಗೂ ಟಿವಿ ಯ ಬಳಕೆಯಲ್ಲೇ ಮುಳುಗಿದ್ದಾರೆ.ಇದರಿಂದ ಊಟ ಹಾಗೂ ನಿದ್ರೆ ಮಾಡುವುದಿಲ್ಲ. ಮಕ್ಕಳಿಗೆ ಮಾನಸಿಕ ಸಮಸ್ಯೆಗಳು ಉಂಟಾಗುತ್ತಿವೆ ಆದ್ದರಿಂದ ಮಕ್ಕಳಿಗೆ ಮೊಬೈಲ್ ಬಿಡಿ ಪುಸ್ತಕ ಹಿಡಿ ಎಂಬಂತೆ ಮಾಡಬೇಕು.

ಪ್ರತಿಯೊಬ್ಬ ಶಿಕ್ಷಕರು ಮಕ್ಕಳಜೊತೆ ಉತ್ತಮ ಒಡನಾಟ ಹೊಂದಬೇಕು.ಶಿಕ್ಷಕರು ಮಕ್ಕಳಿಗೆ ಬೇಕು-ಬೇಡಗಳ ಬಗ್ಗೆ ತಿಳಿದು ತರಬೇತಿ ಕೊಟ್ಟಾಗ ಮಾತ್ರ ಒಳ್ಳೆಯ ಶಿಕ್ಷಕರಾಗಲು ಸಾಧ್ಯ.ವಿದ್ಯಾರ್ಥಿಗಳಿಗೆ ನಿರಂತರ ಅಭ್ಯಾಸ ಮಾಡಿಸುವ ಮೂಲಕ. ಅವರ ಸಾಧನೆಗೆ ಶಕ್ತಿನೀಡಬೇಕು. ಸರ್ಕಾರಿ ಶಾಲೆ ವಿದ್ಯಾರ್ಥಿಗಳಿಗೆ ಇಂಗ್ಲಿಷ್ ಹಾಗೂ ಗಣಿತ ಕಷ್ಟದ ವಿಷಯಗಳು ಎನ್ನುವ ಮಾತಿದೆ ಈಬಗ್ಗೆ ಗಮನಹರಿಸಬೇಕು.ಸರಳವಾಗಿ ಅರ್ಥೈಸುವ ವಿಧಾನ ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಸರ್ಕಾರಿ ಶಾಲೆಗಳಿಗೆ ಸೇರುವ ಮಕ್ಕಳ ಪ್ರಮಾಣ ಕುಸಿತಕಾಣುತ್ತಿದೆ. ಸರ್ಕಾರಿ ಶಾಲೆಗಳಲ್ಲಿ ವರ್ಷ ವರ್ಷವೂ ದಾಖಲಾತಿ ಕಡಿಮೆ ಆಗುತ್ತಿದ್ದು, ಇದನ್ನು ತಡೆಯಲು ಪೋಷಕರೊಂದಿಗೆ ನಿಯಮಿತ ಸಭೆಗಳನ್ನು ನಡೆಸಬೇಕು. ಬಿಇಒ ಗಳು ನಿಯಮಿತವಾಗಿ ಶಾಲೆಗಳಿಗೆ ಭೇಟಿ ನೀಡಬೇಕು. ಈ ಬಗ್ಗೆ ಜಿಲ್ಲಾಧಿಕಾರಿಗಳು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಬೇಕು.ನಮ್ಮ ಶಾಲೆ ನಮಗೆ ಹೆಮ್ಮೆಯಾಗಬೇಕು ಎಂದರು.

ಈ ಸಂದರ್ಭದಲ್ಲಿ ಮಾಜಿ ಸಚಿವರಾದ ಎಸ್.ಎ ರವೀಂದ್ರನಾಥ್, ಬಿಇಒ ಪುಷ್ಪಲತಾ,ಗ್ರಾ.ಪಂ. ಅಧ್ಯಕ್ಷರಾದ ಇ.ಪ್ರಸನ್ನ,ಉಪಾಧ್ಯಕ್ಷೆ ರೇಣುಕಾಬಾಯಿ, ಪಿಡಿಒ ಜಯಲಕ್ಷ್ಮಿ, ಜಿಲ್ಲಾ ಸರ್ಕಾರಿ ಆಸ್ಪತ್ರೆಯ ರಕ್ಷಾ ಸಮಿತಿ ಸದಸ್ಯರಾದ ಎಸ್ .ಎಂ ರುದ್ರೇಶ್ ,ಶಾಲಾ ಶಿಕ್ಷಕವೃಂದ ಹಾಗೂ ಶಿರಮಗೊಂಡನಹಳ್ಳಿ ಗ್ರಾಮಸ್ಥರು ಇದ್ದರು.

## ಪ್ರೀತಿಯ ಅಮಲೋ, ಅಮಲಿನಲ್ಲೇ ಪ್ರೀತಿಯೋ? ರಾಜಾ ರಘುವಂಶಿ ಕೊಲೆ ಮಾಡಿದ್ದೇಗೆ ಟಾಕ್ಸಿಕ್ ಪ್ರೇಮಿಗಳು?



**ಇಂದೋರ್:** ಇದನ್ನು ನೀವು ಪ್ರೀತಿಯ ಅಮಲು ಎಂದು ಕರೆಯುತ್ತೀರೋ ಅಥವಾ ಅಮಲಿನಲ್ಲೇ ಪ್ರೀತಿ ಮಾಡುತ್ತಿದ್ದ ಹುಚ್ಚು ಪ್ರೇಮಿಗಳು ಎಂದು ಕರೆಯತ್ತೀ-ರೋ ತಿಳಿಯದು. ಆದರೆ ಮೇಘಾಲಯ ಹನಿಮೂನ್ ಕೊಲೆ ಪ್ರಕರಣ ಮಾತ್ರ, ಪ್ರೇಮಿಗಳಿಬ್ಬರ ಭೀಕರ ಮಾನಸಿಕತೆಯನ್ನು ತೆರೆದಿಡುತ್ತದೆ.

ಹೌದು, ಪ್ರೀತಿಗಾಗಿ ಮಧ್ಯಪ್ರದೇಶದ ಯುವತಿಯೊಬ್ಬಳು ಕಟ್ಟಿಕೊಂಡ ಗಂಡನನ್ನೇ ಮೇಘಾಲಯ ಮಧುಚಂದ್ರ ಪ್ರವಾಸ ಸಮಯದಲ್ಲಿ ಭೀಕರವಾಗಿ ಕೊಲೆ ಮಾಡಿಸಿದ ಘಟನೆ ಇಡೀ ದೇಶವನ್ನು ಬೆಚ್ಚಿಬೀಳಿಸಿದೆ. ಹನಿಮೂನ್‌ಗೆಂದು ಮೇಘಾಲಯಕ್ಕೆ ಹೋದಾಗ ಪತ್ನಿಯು ತನ್ನ ಬಾಯ್‌ಫ್ರೆಂಡ್ ಕಳುಹಿಸಿದ್ದ ಸಹಚರರ ಜೊತೆಗೂಡಿ ಪತಿಯನ್ನೇ ಕೊಲೆ ಮಾಡಿದ್ದು, ಇವರ ಹುಚ್ಚು ಪ್ರೇಮದ ಉನ್ಮಾದದ ಬಗ್ಗೆ ದೇಶಾದ್ಯಂತ ಚರ್ಚೆಯಾಗುತ್ತಿದೆ.

# ಸಾರ್ವಜನಿಕರು ಸರ್ಕಾರಿ ಯೋಜನೆಗಳನ್ನು ಸದುಪಯೋಗಪಡಿಸಿಕೊಳ್ಳಬೇಕು-ಜಿಲ್ಲಾಧಿಕಾರಿ

**ತುಮಕೂರು :** ಸಾರ್ವಜನಿಕರು ಸರ್ಕಾರ ರೂಪಿಸುವ ವಿವಿಧ ಜನಪರ ಯೋಜನೆಗಳ ಸೌಲಭ್ಯವನ್ನು ಸದುಪಯೋಗಪಡಿಸಿಕೊಳ್ಳಬೇಕೆಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಮನವಿ ಮಾಡಿದರು.

ಜಿಲ್ಲಾಡಳಿತ ಹಾಗೂ ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಯೋಗದಲ್ಲಿ ನಗರದ ಶ್ರೀ ಡಿ.ದೇವರಾಜ ಅರಸು ಬಸ್ ನಿಲ್ದಾಣದಲ್ಲಿ ಸರ್ಕಾರದ 2 ವರ್ಷದ ಸಾಧನೆ ಹಾಗೂ ಯೋಜನೆಗಳ ಕುರಿತು ಏರ್ಪಡಿಸಲಾಗಿದ್ದ ವಸ್ತುಪ್ರದರ್ಶನವನ್ನು ವೀಕ್ಷಿಸಿದ ನಂತರ ಮಾತನಾಡಿದ ಅವರು, ಇಂದಿನಿಂದ ಜೂನ್ 10ರವರೆಗೆ ಆಯೋಜಿಸಲಾಗಿರುವ ಈ ವಸ್ತುಪ್ರದರ್ಶನವನ್ನು ಸಾರ್ವಜನಿಕರು ವೀಕ್ಷಿಸಿ ಸರ್ಕಾರದ ವಿವಿಧ ಯೋಜನೆಗಳ ಮಾಹಿತಿ ಪಡೆದು ಸೌಲಭ್ಯ ಪಡೆದುಕೊಳ್ಳಬೇಕು ಎಂದು ಮನವಿ ಮಾಡಿದರು.

ಸರ್ಕಾರ ಜಾರಿಗೆ ತಂದಿರುವ ಮಹತ್ವಾಕಾಂಕ್ಷಿ ಪಂಚ ಗ್ಯಾರಂಟಿ ಯೋಜನೆಗಳಿಗೆ ಸಂಬಂಧಿಸಿದಂತೆ ಜಿಲ್ಲೆಯಲ್ಲಿ ಕಳೆದೆರಡು ವರ್ಷಗಳಲ್ಲಿ ಗೃಹಲಕ್ಷ್ಮಿ ಯೋಜನೆಯಡಿ ಮನೆಯ ಯಜಮಾನಿಯ ಖಾತೆಗೆ ಪ್ರತೀ ತಿಂಗಳು 2,000 ರೂ.ಗಳನ್ನು ಜಮೆ ಮಾಡಲಾಗುತ್ತಿದ್ದು, ಈವರೆಗೆ ಅರ್ಹ ಫಲಾನುಭವಿಗಳಿಗೆ 2300 ಕೋಟಿ ರೂ. ಗಳನ್ನು ತಲುಪಿಸಲಾಗಿದೆ. ಮಹಿಳಾ ಸಬಲೀಕರಣಕ್ಕಾಗಿ ಜಮೆಯಾಗುತ್ತಿರುವ ಈ ಹಣದಿಂದ ಮಹಿಳೆಯರು ತಮ್ಮ ಮಕ್ಕಳ ವಿದ್ಯಾಭ್ಯಾಸ, ಕುಟುಂಬ ನಿರ್ವಹಣೆ, ದಿನನಿತ್ಯದ ಖರ್ಚು-ವೆಚ್ಚಗಳಿಗಾಗಿ ಬಳಸಿಕೊಳ್ಳುತ್ತಿದ್ದಾರೆ ಎಂದು ಹೇಳಿದರು.

ಅದೇ ರೀತಿ ಅನ್ನಭಾಗ್ಯ ಯೋಜನೆಯಡಿ ಬಿಪಿಎಲ್ ಕುಟುಂಬದ ಪ್ರತಿ ಸದಸ್ಯರಿಗೆ ಉಚಿತವಾಗಿ ಪೂರೈಕೆ ಮಾಡಲಾಗುತ್ತಿರುವ 10 ಕೆ.ಜಿ. ಅಕ್ಕಿಯಿಂದ ಬಡವರು ತಮ್ಮ ಹಸಿವನ್ನು ನೀಗಿಸಿಕೊಳ್ಳುತ್ತಿದ್ದಾರೆ. ಜಿಲ್ಲೆಯಲ್ಲಿ ಈವರೆಗೆ ಅನ್ನಭಾಗ್ಯ ಯೋಜನೆಯಡಿ ಸುಮಾರು 350 ಕೋಟಿ ರೂ. ಮೌಲ್ಯದ ಅಕ್ಕಿಯನ್ನು ವಿತರಿಸಲಾಗಿದೆ ಎಂದು ತಿಳಿಸಿದರು.

ಗೃಹಜ್ಯೋತಿ ಯೋಜನೆಯಡಿ ಪ್ರತಿ ಗ್ರಾಹಕ ಕುಟುಂಬಕ್ಕೆ ಉಚಿತವಾಗಿ 200 ಯುನಿಟ್ ವಿದ್ಯುತ್ ಒದಗಿಸಲಾಗುತ್ತಿದೆ. ಶಕ್ತಿ ಯೋಜನೆಯಡಿ ಎಲ್ಲಾ ವರ್ಗದ ಮಹಿಳೆಯರು ರಾಜ್ಯದಾದ್ಯಂತ ವಿವಿಧ ಸ್ಥಳಗಳಿಗೆ ಉಚಿತವಾಗಿ ಪ್ರಯಾಣಿಸಿ ಸೌಲಭ್ಯ ಪಡೆದುಕೊಳ್ಳುತ್ತಿದ್ದಾರೆ ಎಂದು ತಿಳಿಸಿದರು.



ಪದವಿ/ಡಿಪ್ಲೋಮಾ ಮುಗಿಸಿದ ನಿರುದ್ಯೋಗಿ ಯುವ ಜನಾಂಗಕ್ಕೆ ಮಾಸಿಕ ಭತ್ಯೆ ನೀಡಲಾಗುತ್ತಿದ್ದು, ಜಿಲ್ಲೆಯ ಅರ್ಹ ಫಲಾನುಭವಿಗಳ ಖಾತೆಗೆ ಭತ್ಯೆಯನ್ನು ಜಮೆ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಜಿಲ್ಲೆಯ ಕಂದಾಯ ಗ್ರಾಮಗಳಲ್ಲಿ ಫಲಾನುಭವಿಗಳಿಗೆ 7,000 ಹಕ್ಕು ಪತ್ರ ವಿತರಿಸಲಾಗಿದ್ದು, ಹಕ್ಕುಪತ್ರ ವಿತರಣೆಯಲ್ಲಿ ಜಿಲ್ಲೆಯು ರಾಜ್ಯದಲ್ಲಿಯೇ ಪ್ರಥಮ ಸ್ಥಾನದಲ್ಲಿದೆ. ಬಾಕಿಯಿರುವ ಪೌತಿ ಖಾತೆ, ದರಖಾಸ್ತು/ಪೋಡಿ ಸೇರಿದಂತೆ ಮತ್ತಿತರ ಕಂದಾಯ ಸೇವೆಗಳನ್ನು ಜನಸಾಮಾನ್ಯರಿಗೆ ಒದಗಿಸಲು ಆಂದೋಲನ ರೂಪದಲ್ಲಿ ಕೈಗೊಳ್ಳಲಾಗುತ್ತಿದೆ. ಕಂದಾಯ, ಆರೋಗ್ಯ, ಸಮಾಜ ಕಲ್ಯಾಣ, ಹಿಂದುಳಿದ ವರ್ಗಗಳ ಕಲ್ಯಾಣ ಸೇರಿದಂತೆ ವಿವಿಧ ಇಲಾಖೆಗಳು ಜನ ಸೇವೆಗಾಗಿ ನಿರಂತರ ಶ್ರಮಿಸುತ್ತಿವೆ. ಜಿಲ್ಲೆಯನ್ನು ಅಭಿವೃದ್ಧಿ ಹಾದಿಯಲ್ಲಿ ಮುನ್ನಡೆಸುವ ನಿಟ್ಟಿನಲ್ಲಿ ಸರ್ಕಾರದ ಹಲವಾರು ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಿ ಜಿಲ್ಲೆಯನ್ನು ಪ್ರಥಮ ಸ್ಥಾನಕ್ಕೆ ತರುವಲ್ಲಿ ಜಿಲ್ಲಾಡಳಿತ ಬದ್ಧವಾಗಿದೆ ಎಂದು ತಿಳಿಸಿದರು.

ವಸ್ತುಪ್ರದರ್ಶನದಲ್ಲಿ ರಾಜ್ಯದ ಜನತೆಯ ಸಮಾನತೆಗಾಗಿ ಅನುಷ್ಠಾನಗೊಳಿಸಿರುವ ಗ್ಯಾರಂಟಿ ಬದುಕಿನ 5 ಯೋಜನೆಗಳು, ಇಂದಿರಾ ಕ್ಯಾಂಟೀನ್, ಹಿಂದುಳಿದ ವರ್ಗಗಳ ಕಲ್ಯಾಣ ಯೋಜನೆಗಳು, ಅನ್ನದಾತನಿಗಾಗಿ ಜಾರಿಗೊಳಿಸಿರುವ ವಿವಿಧ ಸೌಲಭ್ಯಗಳು, ವಸತಿ ಯೋಜನೆ, ಗುಣಮಟ್ಟದ ಆರೋಗ್ಯ ಸೌಲಭ್ಯ, ಮತ್ತಿತರ ಯೋಜನೆಗಳ ಮಾಹಿತಿ ಫಲಕಗಳನ್ನು ಪ್ರದರ್ಶಿಸಲಾಗಿದ್ದು, ಸಾರ್ವಜನಿಕರು ವೀಕ್ಷಿಸಿ ಪ್ರಯೋಜನ ಪಡೆದುಕೊಳ್ಳಬಹುದಾಗಿದೆ ಎಂದು ತಿಳಿಸಿದರು.

ತನ್ನ ಸ್ವಗ್ರಾಮಕ್ಕೆ ತೆರಳಲು ಬಸ್ ನಿಲ್ದಾಣ-ಕ್ಕೆ ಆಗಮಿಸಿದ್ದ ತಾಲ್ಲೂಕಿನ ಹೊನ್ನುಡಿಕೆ ನಿವಾಸಿ ಪಾರ್ವತಮ್ಮ ಅವರು ವಸ್ತುಪ್ರದರ್ಶನ ಕಾರ್ಯಕ್ರಮಕ್ಕೆ ಚಾಲನೆ ನೀಡಿದ್ದು ವಿಶೇಷವಾಗಿತ್ತು. ನಂತರ ಜಿಲ್ಲಾಧಿಕಾರಿಗಳು ಮಹಿಳೆಯಿಂದ ಗೃಹಲಕ್ಷ್ಮಿ ಯೋಜನೆಯ 2000 ರೂ. ಹಣ ಖಾತೆಗೆ ಜಮೆಯಾಗುತ್ತಿರುವ ಬಗ್ಗೆ ಮಾಹಿತಿ ಪಡೆದರು.

ವಸ್ತುಪ್ರದರ್ಶನದಲ್ಲಿ ಅಳವಡಿಸಲಾಗಿದ್ದ ಸೆಲ್ಫಿ ಪಾಯಿಂಟ್‌ಗಳಲ್ಲಿ ಸಾರ್ವಜನಿಕರು ಫೋಟೋ ಕ್ಲಿಕ್ಕಿಸಿಕೊಂಡರು. ವಸ್ತುಪ್ರದರ್ಶನದ ಬಗ್ಗೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಜಿ. ಪ್ರಭು ಅವರು "ರಾಜ್ಯದ ಸಮಗ್ರ ಅಭಿವೃದ್ಧಿಯ ಬಗ್ಗೆ ಪ್ರಚುರಪಡಿಸಿರುವ ಮಾಹಿತಿ ಫಲಕಗಳು ಅರ್ಥಪೂರ್ಣ ಹಾಗೂ ಆಕರ್ಷಕವಾಗಿವೆ. ಸರ್ಕಾರಿ ಯೋಜನೆಗಳನ್ನು ಜನಸಾಮಾನ್ಯರಿಗೆ ತಲುಪಿಸಲು ಈ ವಸ್ತುಪ್ರದರ್ಶನ ಫಲಕಾರಿಯಾಗಲಿದೆ ಎಂದು ಅಭಿಪ್ರಾಯ ಸಂಗ್ರಹ ಪುಸ್ತಕದಲ್ಲಿ ದಾಖಲಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಿರಿಯ ಸಹಾಯಕ ನಿರ್ದೇಶಕ ಹಿಮಂತರಾಜು ಜಿ., ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿ ಎಸ್. ಚಂದ್ರಶೇಖರ್, ವಾರ್ತಾ ಸಹಾಯಕಿ ಆರ್. ರೂಪಕಲಾ, ನಿಗಮದ ನಿಲ್ದಾಣಾಧಿಕಾರಿ ಮಾಸಪ್ಪ, ಸೇರಿದಂತೆ ಮತ್ತಿತರರು ಹಾಜರಿದ್ದರು.

# ಆರ್ ಸಿಬಿ ಅಭಿಮಾನಿಗಳ ಸಾವಿಗೆ ಹೊಣೆ ಯಾರು..?

**ಬೆಂಗಳೂರು :** ಆರ್‌ಸಿಬಿಗೆ ಅಪಾರ ಅಭಿಮಾನಿ ಬಳಗವಿದೆ. ಲಕ್ಷಾಂತರ ಜನ ಸಂಭ್ರಮಾಚರಣೆಗೆ ಸೇರುತ್ತಾರೆ ಎನ್ನುವ ಅಂದಾಜಿದ್ದರೂ ಕರ್ನಾಟಕ ಸರ್ಕಾರ ಹಾಗೂ ಪೊಲೀಸರು ಯಾವುದೇ ಪೂರ್ವ ಸಿದ್ಧತೆಯನ್ನು ಮಾಡಿಕೊಂಡಿರಲಿಲ್ಲ ಎನ್ನುವ ಗಂಭೀರವಾದ ಆರೋಪ ಕೇಳಿ ಬಂದಿದೆ. ಇಲಾಖೆ ವೈಫಲ್ಯವನ್ನು ಕಂಡಿತೇ ಎನ್ನುವ ಅನುಮಾನ ಕಾಡಲಾರಂಭಿಸಿದೆ.

ಚಿನ್ನಸ್ವಾಮಿ ಮೈದಾನಕ್ಕೆ ಪಾಸ್ ಇದ್ದವರನ್ನು ಮಾತ್ರ ಬಿಡಲಾಗುವುದು ಎಂದು ಹೇಳಲಾಗುತ್ತಿತ್ತು. ಆದರೆ, ಎಲ್ಲಿ ಸಂವಹನದ ಕೊರತೆ ಎದುರಾಯಿತೋ ಎನ್ನುವ ಹಾಗೇ, ಮೈದಾನದ ಒಳಗೆ ಹೋಗಲು ಭಾರೀ ನೂಕುನುಗ್ಗಲು ಶುರುವಾಯಿತು. 40 ಸಾವಿರ ಸಾಮರ್ಥ್ಯದ ಕ್ರೀಡಾಂಗಣದ ಸುತ್ತಮುತ್ತ 60 ಸಾವಿರಕ್ಕೂ ಹೆಚ್ಚು ಅಭಿಮಾನಿಗಳು ಜಮಾಯಿಸಿದ್ದರು.

ಅಸಲಿಗೆ, ಎಚ್‌ಎಎಲ್ ವಿಮಾನ ನಿಲ್ದಾಣದಿಂದ ತೆರೆದ ವಾಹನದಲ್ಲಿ ಮೆರವಣಿಗೆ ಮೂಲಕ ಆಟಗಾರರನ್ನು ಕರೆತರುವ ಪ್ರೋಗ್ರಾಂ ಹಾಕಲಾಗಿತ್ತು. ರಾಯಲ್ ಚಾಲೆಂಜರ್ಸ್ ತಂಡ ಇದನ್ನು ತಮ್ಮ ಸಾಮಾಜಿಕ ಖಾತೆಯಲ್ಲೂ ಪ್ರಕಟಿಸಿತ್ತು. ಆದರೆ, ತೆರೆದ ವಾಹನದಲ್ಲಿ ಮೆರವಣಿಗೆ ಮಾಡಲು ಸರ್ಕಾರ ಅನುಮತಿಯನ್ನು ನೀಡಿರಲಿಲ್ಲ.



ವಿಧಾನಸೌಧದ ಮುಂದೆಯೂ ಸಾವಿರಾರು ಸಂಖ್ಯೆಯಲ್ಲಿ ಜನರು ಜಮಾಯಿಸಿದ್ದರು. ಆದರೆ, ವಿಶಾಲವಾದ ಸ್ಥಳ ಮತ್ತು ಆ ಸಮಯದಲ್ಲಿ ಮಳೆ ಆರಂಭವಾದ ಹಿನ್ನಲೆಯಲ್ಲಿ 15 ನಿಮಿಷದಲ್ಲಿ ಕಾರ್ಯಕ್ರಮವನ್ನು ಮುಗಿಸಲಾಗಿತ್ತು. ಆದರೆ, ಆಟಗಾರರು ವಿಧಾನಸೌಧದಿಂದ ಚಿನ್ನಸ್ವಾಮಿಗೆ ಬರುವಷ್ಟರಲ್ಲಿ ಕಾಲ್ತುಳಿತದ ಘಟನೆ ಸಂಭವಿಸಿದೆ.

ಜನಾಕ್ರೋಶ: ಇನ್ನು ಸೋಷಿಯಲ್ ಮೀಡಿಯಾದಲ್ಲಿ ರಾಜ್ಯ ಸರ್ಕಾರವು ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಭಾರೀ ಆಕ್ರೋಶ ವ್ಯಕ್ತವಾಗಿದೆ. ರಾಜ್ಯ ಸರ್ಕಾರವು ಯಾವುದೇ ಮುಂದಾಲೋಚನೆ ಅಥವಾ ಪೂರ್ವ ಸಿದ್ಧತೆಯನ್ನು ಮಾಡಿಕೊಳ್ಳದೆ ಇಷ್ಟೊಂದು ದೊಡ್ಡ ಕಾರ್ಯಕ್ರಮವನ್ನು ಆಯೋಜನೆ ಮಾಡಿದೆ.

ಆರ್‌ಸಿಬಿಯ ಅಭಿಮಾನಿಗಳು ಅಪಾರ ಸಂಖ್ಯೆಯಲ್ಲಿ ಸೇರಲಿದ್ದಾರೆ ಎನ್ನುವ ಮುನ್ಸೂಚನೆ ಇದ್ದರೂ ಗೆದ್ದ ಬೆನ್ನಲ್ಲೇ ಈ ರೀತಿಯ ಸಂಭ್ರಮಾಚರಣೆ ಕಾರ್ಯಕ್ರಮವನ್ನು ಆಯೋಜನೆ ಮಾಡಬಾರದಿತ್ತು. ಇದಕ್ಕೆ ಇನ್ನಷ್ಟು ಪೂರ್ವ ಸಿದ್ಧತೆಗಳನ್ನು ರಾಜ್ಯ ಸರ್ಕಾರವು ಮಾಡಿಕೊಳ್ಳಬೇಕಿತ್ತು ಎನ್ನುವ ಆಗ್ರಹ ಕೇಳಿ ಬಂದಿದೆ.

ಇದಕ್ಕೆಲ್ಲವೂ ರಾಜ್ಯ ಸರ್ಕಾರವೇ ಕಾರಣ ಎಂದು ಜನ ಅಭಿಪ್ರಾಯಪಟ್ಟಿದ್ದಾರೆ. ದೊಡ್ಡ ದೊಡ್ಡ ಸಮಾವೇಶಗಳಲ್ಲಿ ಜನ ಯಾವ ರೀತಿ ಸೇರುತ್ತಾ-ರೆ ಎನ್ನುವುದು ತಿಳಿದಿದ್ದರೂ ಸರ್ಕಾರ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಂಡಿಲ್ಲ ಎಂದು ಹೇಳಲಾಗುತ್ತಿದೆ.

# ನಟಿ ಉಮಾಶ್ರೀ, ಕಲಾವಿದೆ ಬಿ.ಜಯಶ್ರೀ ಸೇರಿ 16 ಸಾಧಕಿಯರಿಗೆ 'ವಾವ್' ಪ್ರಶಸ್ತಿ

**ಬೆಂಗಳೂರು:** ನಟಿ ಹಾಗೂ ಮಾಜಿ ಸಚಿವೆ ಉಮಾಶ್ರೀ, ಖ್ಯಾತ ರಂಗಭೂಮಿ ಗಾಯಕಿ ಮತ್ತು ಮಾಜಿ ಸಂಸದೆ ಪದ್ಮಶ್ರೀ ಬಿ. ಜಯಶ್ರೀ ಹಾಗೂ ಕಲಬುರಗಿಯ ಕ್ಯಾನ್ಸರ್ ತಜ್ಞೆ ಡಾ. ವಿಜಯಲಕ್ಷ್ಮೀ ದೇಶಮಾನೆ ಅವರಿಗೆ ಬುಧವಾರ ಬೆಂಗಳೂರಿನ ಯಶವಂತಪುರದ ಖಾಸಗಿ ಹೋಟೆಲ್‌ನಲ್ಲಿ ಉಬುಂಟು ಮಹಿಳಾ ನಿಯೋಗವು ಆಯೋಜಿಸಿದ್ದ ಅಂತಾರಾಷ್ಟ್ರೀಯ ಮಹಿಳಾ ದಿನದ ಕಾರ್ಯಕ್ರಮದಲ್ಲಿ ?ವುಮೆನ್ ಆಫ್ ವರ್ತ್ (ವಾವ್)ನ 2025ರ 5ನೇ ಆವೃತ್ತಿಯ ಪ್ರಶಸ್ತಿ ಪ್ರದಾನ ಮಾಡಲಾಯಿತು. ಕಲೆ, ಸಂಸ್ಕೃತಿ, ಉದ್ಯಮ ಮತ್ತು ಸಾರ್ವಜನಿಕ ಸೇವೆಗಳಲ್ಲಿ ತೊಡಗಿಸಿಕೊಂಡು ಸಾಧನೆಗೈದ 16 ಮಹಿಳಾ ಸಾಧಕಿಯರಿಗೆ 'ವಾವ್' ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಕರ್ನಾಟಕ ಸರ್ಕಾರದ ಮಾಜಿ ಮುಖ್ಯ ಕಾರ್ಯದರ್ಶಿ ಮತ್ತು ಉಬುಂಟು ನಿಯೋಗದ ಸ್ಥಾಪಕಿ ಕೆ. ರತ್ನಪ್ರಭಾ ಮಾತನಾಡಿ, 'ಆತ್ಮದೊಂದಿಗೆ ಬೆಳವಣಿಗೆ ಎಂಬ ನಿಟ್ಟಿನಲ್ಲಿ ಮಹಿಳಾ ಉದ್ಯಮಿಗಳನ್ನು ಸಬಲೀಕರಣಗೊಳಿಸುವ ಮತ್ತು ಕರ್ನಾಟಕ ಜಾಗತಿಕ ಹೂಡಿಕೆದಾರರ ಸಭೆಗಳಂತಹ ವೇದಿಕೆಗಳಲ್ಲಿ ಅವರಿಗೆ ಅವಕಾಶಗಳನ್ನು ಸೃಷ್ಟಿಸಿದ ಕಾರ್ಯಗಳನ್ನು ನೆನಪಿಸಿಕೊಂಡರು. 'ಉಬುಂಟು' ಎಂದರೆ ನಾವಿದ್ದೇವೆ, ಒಟ್ಟಿಗೆ ಬೆಳೆಯುತ್ತೇವೆ ಎಂಬ ತತ್ವಶಾಸ್ತ್ರದೊಂದಿಗೆ ನಿಂತಿದ್ದೇವೆ ಎಂದರು.



ಇದೇ ವೇಳೆ ಡಿಜಿಟಲ್ ಕೌಶಲ್ಯ ಮತ್ತು ಸ್ಪರ್ಧಾತ್ಮಕತೆಯನ್ನು ಹೆಚ್ಚಿಸಲು 1,000 ಮಹಿಳಾ ಉದ್ಯಮಿಗಳಿಗೆ ನೂತನ ಡಿಜಿಟಲ್ ಮಾರ್ಕೆಟಿಂಗ್ ಕಾರ್ಯಕ್ರಮವನ್ನು ಕೂಡ ಕೆ. ರತ್ನಪ್ರಭಾ ಘೋಷಿಸಿದರು.

ಸೈಬರ್ ಸುರಕ್ಷತೆ, ಇ-ಕಾಮರ್ಸ್ ಮತ್ತು ವ್ಯವಹಾರ ಜಾಲಗಳ ಕುರಿತು ಕಾರ್ಯಾಗಾರಗಳನ್ನು ಹಮ್ಮಿಕೊಳ್ಳಲಾಗಿತ್ತು. ಥಿಂಕ್ ಥ್ರೂ ಕನ್ಸಲ್ಟಿಂಗ್‌ನ ಜಾಗತಿಕ ವ್ಯವಸ್ಥಾಪಕ ಪಾಲುದಾರರು ಮತ್ತು ಅಸೋಸಿಯೇಷನ್ ಆಫ್ ಬಿಸಿನೆಸ್ ವುಮೆನ್ ಇನ್ ಕಾಮರ್ಸ್‌ನ ಸಮಾಲೋಚಕ ಸಂಸ್ಥಾಪಕ ಮತ್ತು ಪ್ರಧಾನ ಕಾರ್ಯದರ್ಶಿ ಪಾರುಲ್ ಸೋನಿ ಮಾತನಾಡಿ, ಮಹಿಳೆಯರು ನಡೆಸುವ ಉದ್ಯಮಗಳಿಗೆ ಅವಕಾಶಗಳನ್ನು ಸೃಷ್ಟಿಸುವಲ್ಲಿ ಇ-ಪ್ಲಾಟ್‌ಫಾರಂಗಳ ಪಾತ್ರವನ್ನು ಒತ್ತಿ ಹೇಳಿದರು. ವಾಲ್‌ಮಾರ್ಟ್ ಮತ್ತು ಫ್ಲಿಪ್‌ಕಾರ್ಟ್‌ನಂತಹ ವೇದಿಕೆಗಳಲ್ಲಿ ಪಾಲುದಾರಿಕೆಯ ಮಹತ್ವವನ್ನು ತಿಳಿಸಿಕೊಟ್ಟರು. ಇ- ಕಾಮರ್ಸ್ ಪ್ಲಾಟ್‌ಫಾರಂಗಳಲ್ಲಿ ಮಹಿಳೆಯರನ್ನು ಸಬಲೀಕರಣಗೊಳಿಸುವ ಅವರ ಸಾಮರ್ಥ್ಯವನ್ನು ಬಲಗೊಳಿಸುವ ಕುರಿತಾಗಿ ಮಾಹಿತಿ ಹಂಚಿಕೊಂಡರು.

ಕರ್ನಾಟಕದ ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ಮಾಜಿ ಅಪರ ಮುಖ್ಯ ಕಾರ್ಯದರ್ಶಿ ಡಾ. ರಾಜ್ ಕುಮಾರ್ ಖತ್ರಿ ಮಾತನಾಡಿದರು. ಕರ್ನಾಟಕದ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆ, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ನಿರ್ದೇಶಕ ನಿತೇಶ್ ಕೆ. ಪಾಟೀಲ್ ಮಾತನಾಡಿ, ಮಹಿಳಾ ಉದ್ಯಮಿಗಳನ್ನು ಸಬಲೀಕರಣಗೊಳಿಸಲು ಅಭಿವೃದ್ಧಿಪಡಿಸಲಾಗುತ್ತಿರುವ ಡಿಜಿಟಲ್ ಮಾರ್ಕೆಟಿಂಗ್ ವೇದಿಕೆಗಳ ಕುರಿತು ವಿವರವಾದ ಮಾಹಿತಿಯನ್ನು ಹಂಚಿಕೊಂಡರು.

## ವಿದ್ಯಾರ್ಥಿನಿಗೆ ಲೈಂಗಿಕ ಕಿರುಕುಳ ನೀಡಿದ ಕಾಮುಕ ಪ್ರಾಧ್ಯಾಪಕ ಅಮಾನತು

**ಮುಜಫರ್‌ನಗರ :** ಸರ್ಕಾರಿ ಅನುದಾನಿತ ಛೋಟು ರಾಮ್ ಪದವಿ ಕಾಲೇಜಿನ ಪ್ರಾಧ್ಯಾಪಕರೊಬ್ಬರನ್ನು ವಿದ್ಯಾರ್ಥಿನಿಯೊಬ್ಬರಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪದ ಮೇಲೆ ಅಮಾನತುಗೊಳಿಸಲಾಗಿದೆ.

ಬಿಎಸ್‌ಸಿ ವಿದ್ಯಾರ್ಥಿನಿಯೊಬ್ಬಳು ಮೇ 24 ರಂದು ಕಾಲೇಜಿನ ಸಸ್ಯ ರೋಗಶಾಸ್ತ್ರ ವಿಭಾಗದ ಪ್ರಾಧ್ಯಾಪಕ ದುಶ್ಯಂತ್ ಕುಮಾರ್ ವಿರುದ್ಧ ಲೈಂಗಿಕ ಕಿರುಕುಳದ ಆರೋಪ ಹೊರಿಸಿದ್ದರು.

ತುರ್ತು ಸಭೆಯ ನಂತರ ಕುಮಾರ್ ಅವರನ್ನು ಸೇವೆಯಿಂದ ಅಮಾನತುಗೊಳಿಸಲಾಗಿದೆ ಎಂದು ಕಾಲೇಜು ಆಡಳಿತ ಕಾರ್ಯದರ್ಶಿ ಶರದ್ ಕುಮಾರ್ ವರದಿಗಾರರಿಗೆ ತಿಳಿಸಿದರು.

ಘಟನೆಯ ಬಗ್ಗೆ ಉಪಸಮಿತಿ ತನಿಖೆ ನಡೆಸಲಿದೆ ಎಂದು ಅವರು ಹೇಳಿದರು.ಪೊಲೀಸ್ ಕಸ್ಟಡಿಯಲ್ಲಿರುವ ಕುಮಾರ್ ಅವರನ್ನು ಮುಖ್ಯ ನ್ಯಾಯಾಂಗ ಮ್ಯಾಜಿಸ್ಟ್ರೇಟ್ ಕವಿತಾ ಅಗರ್ವಾಲ್ ಜಾಮೀನು ನಿರಾಕರಿಸಿದರು.

ಪ್ರಾಸಿಕ್ಯೂಷನ್ ಅಧಿಕಾರಿ ಕೆ.ಸಿ. ಮೋರಿ ಅವರ ಪ್ರಕಾರ, ವಿದ್ಯಾರ್ಥಿನಿಯೊಬ್ಬಳಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪದ ಮೇಲೆ ಕುಮಾರ್ ಅವರನ್ನು ಮೇ 24 ರಂದು ಬಂಧಿಸಲಾಯಿತು.ಅಂದಿನಿಂದ ಪೊಲೀಸರು ಅವರ ವಿರುದ್ಧ ಇನ್ನೂ ಎರಡು ವಿಭಾಗಗಳನ್ನು ಸೇರಿಸಿದ್ದಾರೆ.

### ಸೂಡಾದಿಂದ ಬಡಾವಣೆಗಳಲ್ಲಿ ಅಭಿವೃದ್ಧಿ ಕಾಮಗಾರಿಗಳು

# ನಗರವನ್ನು ಸುಂದರ-ಸ್ವಚ್ಛವಾಗಿಟ್ಟುಕೊಳ್ಳಲು ಸುಂದರೇಶ್ ಕರೆ


**ಶಿವಮೊಗ್ಗ :** ಸೂಡಾ ವತಿಯಿಂದ ನಗರದ ವಿವಿಧ ಬಡಾವಣೆಗಳಲ್ಲಿ ಉದ್ಯಾನವನ ಅಭಿವೃದ್ಧಿ ಸೇರಿದಂತೆ ಇತರೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳುತ್ತಿದ್ದು, ನಗರದ ನಿವಾಸಿಗಳು ತಮ್ಮ ಬಡಾವಣೆಗಳ ಉದ್ಯಾನವನಗಳು ಹಾಗೂ ತಮ್ಮ ಸುತ್ತಮುತ್ತಲಿನ ಪ್ರದೇಶವನ್ನು ಸ್ವಚ್ಛ ಮತ್ತು ಸುಂದರವಾಗಿಟ್ಟುಕೊಳ್ಳಬೇಕು ಎಂದು ಶಿವಮೊಗ್ಗ-ಭದ್ರಾವತಿ ನಗರಾಭಿವೃದ್ಧಿ ಪಾಧಿಕಾರದ ಅಧ್ಯಕ್ಷರಾದ ಹೆಚ್ ಎಸ್ ಸುಂದರೇಶ್ ಕರೆ ನೀಡಿದರು.

ಶಿವಮೊಗ್ಗ-ಭದ್ರಾವತಿ ನಗರಾಭಿವೃದ್ಧಿ ಪಾಧಿಕಾರದ ವತಿಯಿಮದ ಸೋಮವಾರದಂದು ನಗರದ ವಿವಿಧ ಬಡಾವಣೆಗಳಲ್ಲಿ ಉದ್ಯಾನವನ ಹಾಗೂ ಇತರೆ ಅಭಿವೃದ್ಧಿ ಕಾಮಗಾರಿಗಳಿಗೆ ಗುದ್ದಲಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.

ಸೂಡಾ ವತಿಯಿಂದ ನಗರದ ವಿವಿಧ ಬಡಾವಣೆಗಳಲ್ಲಿನ ಉದ್ಯಾನವನಗಳನ್ನು ಅಭಿವೃದ್ಧಿ ಪಡಿಸುವ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ. ಹಾಗೂ ಕೆಲವೆಡೆ ರಸ್ತೆ ಡಾಂಬರೀಕರಣ, ಚರಂಡಿ ನಿರ್ಮಾಣ ಮಾಡಲಾಗುತ್ತಿದೆ.

ಸ್ಥಳೀಯ ನಿವಾಸಿಗಳು ತಮ್ಮ ಬಡಾವಣೆಗಳ ಉದ್ಯಾನವನ, ಸುತ್ತಮುತ್ತಲಿನ ಜಾಗವನ್ನು ಸ್ವಚ್ಛವಾಗಿ ಇಟ್ಟುಕೊಳ್ಳಲು ಸಹಕರಿಸಬೇಕು. ಮನೆಯ ಸುತ್ತಮುತ್ತ ಗಿಡಗಳನ್ನು ನೆಟ್ಟು ಬೆಳೆಸಬೇಕು. ಇದರಿಂದ ಬೇಸಿಗೆಯಲ್ಲಿ ತಂಪು ವಾತಾವರಣ ಸಾಧ್ಯವಾಗುತ್ತದೆ. ಹಾಗೂ ನಗರದ ಸೌಂದರ್ಯವೂ ಹೆಚ್ಚುತ್ತದೆ ಎಂದ ಅವರು ಪಾರ್ಕು, ರಸ್ತೆಯಂತಹ ಸಾರ್ವಜನಿಕ ಆಸ್ತಿ, ನಿವಾಸಿಗಳದ್ದೇ ಆಗಿದ್ದು ಇದನ್ನು ಕಾಪಾಡಿಕೊಂಡು ಹೋಗಬೇಕೆಂದರು.

ಗಾಡಿಕೊಪ್ಪದಲ್ಲಿರುವ ಸಿದ್ದಪ್ಪ ಬಡಾವಣೆಯಲ್ಲಿ ಅಂದಾಜು ರೂ.25 ಲಕ್ಷ ಮೊತ್ತದ ಅಭಿವೃದ್ದಿ ಕಾಮಗಾರಿಗೆ ಗುದ್ದಲಿಪೂಜೆ ನೆರವೇರಿಸಿದ ಅವರು 04 ಸಂಖ್ಯೆ ಡೆಕ್‌ಸ್ಲಾ ?ಯಬ್ ಹಾಗೂ 45 ಮೀ.ಕಾಂಕ್ರಿಟ್ ಬಾಕ್ಸ್ ಚರಂಡಿ ನಿರ್ಮಾಣ, 280 ಮೀ ರಸ್ತೆಗೆ ಡಾಂಬರೀಕರಣ ಮಾಡಲಾಗುವುದು ಎಂದರು.



ವಿದ್ಯಾನಗರದ ಗ್ರಂಥಾಲಯ ಹತ್ತಿರದ ಉದ್ಯಾನವನಕ್ಕೆ ರೂ.20 ಲಕ್ಷ ಮೊತ್ತದ ಅಭಿವೃದ್ಧಿ ಕಾಮಗಾರಿಗೆ ಗುದ್ದಲಿಪೂಜೆ ನೆರವೇರಿಸಿ, ಇಲ್ಲಿಯ ಉದ್ಯಾನವನದಲ್ಲಿ ಪ್ಲಾಟ್‌ಫಾರ್ಮ್ ನಿರ್ಮಾಣದೊಂದಿಗೆ 12 ಸಂಖ್ಯೆ ಹೊರಾಂಗಣ ವ್ಯಾಯಾಮ ಸಾಮಗ್ರಿ ಅಳವಡಿಕೆ, ಪಾರ್ಕ್ಲಿನ ಹಾಲಿ ಇರುವ ಪಾಥ್‌ವೇಗೆ ಮತ್ತು ಗ್ರಿಲ್ ಫೆನ್ಸಿಂಗ್‌ಗೆ ಬಣ್ಣ ಲೇಪಿಸಿವುದು ಹಾಗೂ ಉದ್ಯಾನವನದಲ್ಲಿ 08 ಸಂಖ್ಯೆ ಸಾದರಳ್ಳಿ ಕಲ್ಲಿನ ಬೆಂಚು ಅಳವಡಿಕೆ ಮಾಡಲಾಗುವುದು ಎಂದರು.

ವಿದ್ಯಾನಗದ ಪ್ರೊ.ದಾನಪ್ಪ ಮನೆ ಹತ್ತಿರದ ಪಾರ್ಕಿನಲ್ಲಿ ಅಂದಾಜು ಮೊತ್ತ ರೂ.20 ಲಕ್ಷ ಅನುದಾನದಲ್ಲಿ ಉದ್ಯಾನವನದ ಮುಂಭಾಗದಲ್ಲಿ ಆಯ್ದ ಭಾಗದಲ್ಲಿ ಕಾಂಕ್ರೀಟ್ ಬಾಕ್ಸ್ ಚರಂಡಿ ನಿರ್ಮಾಣ, ಗ್ರಿಲ್ ಕಾಂಪೌಂಡ್ ಹಾಗೂ ಉದ್ಯಾನವನದಲ್ಲಿ ಪ್ಲಾಟ್‌ಫಾರ್ಮ್ ನಿರ್ಮಾಣದೊಂದಿಗೆ 10 ಸಂಖ್ಯೆ ಹೊರಾಂಗಣ ವ್ಯಾಯಾಮ ಸಾಮಗ್ರಿಗಳ ಅಳವಡಿಕೆ ಮಾಡಲಾಗುವುದು.

ಗುರುಪುರದ ಭುವನೇಶ್ವರಿ ಬಡಾವಣೆಯಲ್ಲಿರುವ ಉದ್ಯಾನವನದಲ್ಲಿ ರೂ.20 ಲಕ್ಷ ವೆಚ್ಚದಲ್ಲಿ 15*10 ಮೀ ಅಳತೆಯ ಯೋಗ ಪ್ಲಾಟ್‌ಫಾರ್ಮ್ ನಿರ್ಮಾಣ, ಉದ್ಯಾನವನದಲ್ಲಿ ಪ್ಲಾಟ್‌ಫಾರ್ಮ್ ನಿರ್ಮಾಣದೊಂದಿಗೆ 11 ಸಂಖ್ಯೆ ಹೊರಾಂಗಣ ವ್ಯಾಯಾಮ ಸಾಮಗ್ರಿ ಅಳವಡಿಕೆ, ಹಾಲಿ ಇರುವ ಪಾಥ್‌ವೇಗೆ ಮತ್ತು ಗ್ರಿಲ್ ಫೆನ್ಸಿಂಗ್‌ಗೆ ಬಣ್ಣ ಲೇಪನ ಮತ್ತು 06 ಸಂಖ್ಯೆ ಸಾದರಳ್ಳಿ ಕಲ್ಲಿನ ಬೆಂಚು ಅಳವಡಿಕೆ ಮಾಡಲಾಗುವುದು.

ಮಲವಗೊಪ್ಪದ ಶಿವಪ್ರಿಯ ಉದ್ಯಾನವನಕ್ಕೆ ರೂ.20 ಲಕ್ಷ ಮೊತ್ತದಲ್ಲಿ ಅಭಿವೃದ್ಧಿ ಕಾಮಗಾರಿಗೆ ಗುದ್ದಲಿಪೂಜೆ ನೆರವೇರಿಸಿ, ಪಾರ್ಕ್ನ ಪ್ಲಾಟ್‌ಫಾರ್ಮ್ ನಿರ್ಮಾಣದೊಂದಿಗೆ 10 ಸಂಖ್ಯೆ ಹೊರಾಂಗಣ ವ್ಯಾಯಾಮ ಸಾಮಗ್ರಿ ಅಳವಡಿಕೆ, ಪಾರ್ಕಿನಲ್ಲಿ ಹಾಲಿ ಇರುವ ಪಾಥ್‌ವೇಗೆ ಮತ್ತು ಗ್ರಿಲ್ ಫೆನ್ಸಿಂಗ್‌ಗೆ ಬಣ್ಣ ಲೇಪನ ಹಾಗೂ 75 ಮೀ.ಪಾಥ್‌ವೇ ನಿರ್ಮಾಣ ಹಾಗೂ 8 ಸಂಖ್ಯೆ ಸಾದರಳ್ಳಿ ಕಲ್ಲಿನ ಬೆಂಚು ಅಳವಡಿಕೆ ಮಾಡಲಾಗುವುದು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಶಾಸಕರಾದ ಎಸ್.ಎನ್.ಚನ್ನಬಸಪ್ಪ ಮಾತನಾಡಿ, ನಿವಾಸಿಗಳು ತಮ್ಮ ಬಡಾವಣೆಗಳಲ್ಲಿನ ಉದ್ಯಾನವನಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕು. ಜೊತೆಗೆ ತಮ್ಮ ಮನೆ ಸುತ್ತಮುತ್ತ ಗಿಡಗಳನ್ನು ನೆಟ್ಟು ಪೋಷಿಸಬೇಕು. ಸುತ್ತಮುತ್ತ ಸ್ವಚ್ಛವಾಗಿಟ್ಟುಕೊಳ್ಳುವ ಮೂಲಕ ನಗರದ ಸೌಂದರ್ಯಕ್ಕೆ ಕೊಡುಗೆ ನೀಡಬೇಕೆಂದರು.

ಕಾರ್ಯಕ್ರಮದಲ್ಲಿ ಸೂಡಾ ಆಯುಕ್ತರಾದ ವಿಶ್ವನಾಥ ಮುದಜ್ಜಿ, ಸೂಡಾ ಕಾರ್ಯಪಾಲಕ ಅಭಿಯಂತರ ಗಂಗಾಧರ್ ಸ್ವಾಮಿ, ಪಾಲಿಕೆ ಮಾಜಿ ಸದಸ್ಯೆ ಯಮುನಾ ರಂಗೇಗೌಡ, ಇತರೆ ಅಧಿಕಾರಿಗಳು, ನಿವಾಸಿಗಳು ಪಾಲ್ಗೊಂಡಿದ್ದರು.

# ಗೃಹ ಸಚಿವರಿಂದ ಬುಗುಡನಹಳ್ಳಿ ಕೆರೆ ವೀಕ್ಷಣೆ

**ತುಮಕೂರು :** ಹೇಮಾವತಿ ನಾಲೆಯಿಂದ ಬುಗುಡನಹಳ್ಳಿಯಲ್ಲಿ ಸಂಗ್ರಹವಾಗುವ ನೀರು ಮುಂದಿನ 8 ತಿಂಗಳ ಕಾಲ ನಗರಕ್ಕೆ ಪೂರೈಕೆ ಮಾಡಬಹುದಾಗಿದೆ ಎಂದು ಗೃಹ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ: ಜಿ. ಪರಮೇಶ್ವರ ಅವರು ತಿಳಿಸಿದರು.



ತುಮಕೂರು ನಗರದ ಬುಗುಡನಹಳ್ಳಿ ಕೆರೆಗೆ ಅಧಿಕಾರಿಗಳೊಂದಿಗೆ ಸೋಮವಾರ ಭೇಟಿ ನೀಡಿದ ನಂತರ ನಗರದ ಎಂ.ಜಿ.ಸ್ಟೇಡಿಯಂನಲ್ಲಿ ಪತ್ರಿಕಾ ಹೇಳಿಕೆ ನೀಡಿ ಮಾತನಾಡಿದ ಅವರು ಗೊರೂರು ಜಲಾಶಯದಿಂದ ಹೇಮಾವತಿ ನಾಲೆಗೆ ಮೇ 23ರಂದು ನೀರು ಹರಿಯಬಿಟ್ಟಿದ್ದು, ಮೇ 25ರ ರಾತ್ರಿ ಬುಗಡನಹಳ್ಳಿ ಕೆರೆಗೆ ನೀರು ತಲುಪಿದೆ ಎಂದು ತಿಳಿಸಿದ ಅವರು ನಗರದಲ್ಲಿ ಕುಡಿಯುವ ನೀರಿಗೆ ತೊಂದರೆಯಾಗಬಾರದೆಂಬ ಉದ್ದೇಶದಿಂದ ಹಾಸನದಲ್ಲಿ ಇತ್ತೀಚೆಗೆ ಜರುಗಿದ ನೀರಾವರಿ ಸಮಿತಿ ನಿರ್ಣಯದಂತೆ ಕುಡಿಯುವ ನೀರಿನ ಉದ್ದೇಶಕ್ಕಾಗಿ ತುಮಕೂರಿಗೆ ಗೊರೂರು ಜಲಾಶಯದಿಂದ ನೀರು ಹರಿಸಲಾಗಿದೆ. ಮುಂದಿನ 50 ದಿನಗಳಿಗೆ ಮಾತ್ರ ಪೂರೈಕೆ ಮಾಡುವಷ್ಟು ಕೆರೆಯಲ್ಲಿ ನೀರು ಲಭ್ಯವಿತ್ತು. ಮುಂದಾಲೋಚನೆಯಿಂದ ಕೆರೆಗೆ ನೀರು ಹರಿಸಲಾಗಿದೆ ಎಂದು ತಿಳಿಸಿದರು.

ಹೇಮಾವತಿ ನೀರನ್ನು ಬುಗುಡನಹಳ್ಳಿ ಕೆರೆಯಲ್ಲಿ ಸಂಗ್ರಹಿಸಿ ಶುದ್ಧೀಕರಿಸಿ ನಾಗರಿಕರಿಗೆ ಪೂರೈಕೆ ಮಾಡಲಾಗುವುದು. ಹೇಮಾವತಿ ಜಲಾಶಯದಿಂದ ಪ್ರತೀ ದಿನ 2 ಟಿಎಂಸಿ ನೀರನ್ನು ಹರಿಸಲು ನೀರಾವರಿ ಸಲಹಾ ಸಮಿತಿಯಲ್ಲಿ ನಿರ್ಣಯ ಕೈಗೊಳ್ಳಲಾಗಿದೆ. ಮುಂದಿನ 8 ದಿನಗಳಲ್ಲಿ ಕೆರೆ ಭರ್ತಿಯಾಗಲಿದ್ದು, ಕೆರೆ ಭರ್ತಿಯಾದ ನಂತರ ಹೆಬ್ಬಾಕ, ನರಸಾಪುರ, ಅಮಾನಿಕೆರೆಗೆ ನೀರನ್ನು ತುಂಬಿಸುವ ಪ್ರಯತ್ನ ಮಾಡಲಾಗುವುದು. ಪ್ರಸಕ್ತ ವರ್ಷ ಅವಧಿಗೂ ಮುನ್ನವೇ ಮಳೆಗಾಲ ಪ್ರಾರಂಭವಾಗಿರುವುದರಿಂದ ಜಿಲ್ಲೆಯಲ್ಲಿ ಕುಡಿಯುವ ನೀರಿಗೆ ಯಾವುದೇ ರೀತಿಯ ತೊಂದರೆ-ಯಾಗದು ಎಂದು ಹೇಳಿದರು.

ಪ್ರಸಕ್ತ ವರ್ಷ ಗ್ರಾಮೀಣ ಪ್ರದೇಶ ಹಾಗೂ ನಗರ ಪ್ರದೇಶಗಳಲ್ಲಿ ನೀರಿನ ಸಮಸ್ಯೆ ತಲೆದೋರದಂತೆ ಜಿಲ್ಲಾಡಳಿತದಿಂದ ಈಗಾಗಲೇ ಸಭೆಗಳನ್ನು ನಡೆಸಿ ನೀಲನಕ್ಷೆಯನ್ನು ಸಿದ್ಧಪಡಿಸಿ, ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಜಿಲ್ಲಾ ಕೇಂದ್ರ ಸ್ಥಾನದಲ್ಲಿ 35 ಲಕ್ಷ ರೂ.ಗಳ ವೆಚ್ಚದಲ್ಲಿ ಅಲಂಕಾರಿಕ ಮೀನುಗಳ ಪ್ರದರ್ಶನಕ್ಕಾಗಿ ಮತ್ಸ್ಯಾಲಯವನ್ನು ಅಭಿವೃದ್ಧಿಗೊಳಿಸಲಾಗುತ್ತಿದೆ. ವಿಶೇಷವಾಗಿ ಶಾಲಾ ಮಕ್ಕಳನ್ನು ದೃಷ್ಟಿಯಲ್ಲಿಟ್ಟುಕೊಂಡು ಈ ಮತ್ಸ್ಯಾಲಯವನ್ನು ನಿರ್ಮಿಸಲಾಗುತ್ತಿದೆ. ವಿವಿಧ ಜಾತಿಯ ಮೀನುಗಳ ಪರಿಚಯ, ಅಧ್ಯಯನಕ್ಕಾಗಿ ವಿದ್ಯಾರ್ಥಿಗಳಿಗೆ ಅನುಕೂಲಕರವಾಗಲಿದೆ. ಸದ್ಯದಲ್ಲಿಯೇ ಈ ಮತ್ಸ್ಯಾಲಯವನ್ನು ಉದ್ಘಾಟಿಸಲಾಗುವುದು ಎಂದು ತಿಳಿಸಿದರು.

ಇದಕ್ಕೂ ಮುನ್ನ ನಗರದ ಹೊರವಲಯದಲ್ಲಿರುವ ನರಸಾಪುರ ಗೇಟ್‌ನಿಂದ ಬುಗುಡನಹಳ್ಳಿ ಜಲ ಸಂಗ್ರಹಾಗಾರದವರೆಗೂ ಕಾಲ್ನಡಿಗೆಯಲ್ಲಿ ಸಾಗಿ ಹೇಮಾವತಿ ನಾಲೆ ನೀರು ಹರಿಯುವಿಕೆಯನ್ನು ಸಚಿವರು ಪರಿವೀಕ್ಷಿಸಿದರು. ಬುಗುಡನಹಳ್ಳಿ ಕೆರೆಯಲ್ಲಿ ಬೆಳೆದಿರುವ ಜಾಲಿಗಿಡ, ಜಂಗಲ್, ಗಿಡ-ಗಂಟೆಗಳನ್ನು ಕೂಡಲೇ ತೆರವುಗೊಳಿಸಲು ಕ್ರಮಕೈಗೊಳ್ಳಬೇಕು. ಕೆರೆಗೆ ಯಾವುದೇ ಕಲುಷಿತ ನೀರು ಸೇರದಂತೆ ಎಚ್ಚರಿಕೆವಹಿಸಬೇಕು ಎಂದು ಪಾಲಿಕೆ ಆಯುಕ್ತ ಅಶ್ವಿಜ ಅವರಿಗೆ ನಿರ್ದೇಶನ ನೀಡಿದರು. ನರಸಾಪುರ ಗೇಟ್‌ನಿಂದ ಜಲ ಸಂಗ್ರಹಾಗಾರಕ್ಕೆ ಸೇರುವ ರಸ್ತೆಯನ್ನು ಅಗಲೀಕರಣಗೊಳಿಸಬೇಕು. ಕೆರೆ ಏರಿ ಮೇಲೆ ತಿರುಗಾಡಲು ಅನುಕೂಲ ಮಾಡಿಕೊಡಬೇಕು ಎಂದು ಸ್ಥಳೀಯ ಗ್ರಾಮಸ್ಥರು ಸಚಿವರಿಗೆ ಮನವಿ ಮಾಡಿದರು.

ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಮಾತನಾಡಿ, ಗೊರೂರು ಜಲಾಶಯದಿಂದ ಮೇ 23 ರಿಂದ ಹೇಮಾವತಿ ನಾಲೆಗೆ ನೀರು ಹರಿಸಲಾಗಿದ್ದು, ಮೇ 25 ರಾತ್ರಿ 11.15 ಗಂಟೆಗೆ ತುಮಕೂರಿಗೆ ನೀರು ತಲುಪಿದೆ. ಸಂಗ್ರಹವಾದ ನೀರನ್ನು ಕುಡಿಯುವ ಉದ್ದೇಶಕ್ಕಾಗಿ ಮಾತ್ರ ಬಳಸಲಾಗುವುದು ಎಂದು ತಿಳಿಸಿದರು.

ಸಜಿಲ್ಲಾ ಪಂಚಾಯತಿ ಮುಖ್ಯಕಾರ್ಯ ನಿರ್ವಾಹಣಾಧಿಕಾರಿ ಜಿ. ಪ್ರಭು ಮಾತನಾಡಿ ಸುಮಾರು 100 ಮಕ್ಕಳು ಕುಳಿತು ಸಾಕ್ಷ್ಯಚಿತ್ರ ವೀಕ್ಷಿಸಲು ವ್ಯವಸ್ಥೆ ಮಾಡಲಾಗುತ್ತಿದೆ. ತುಮಕೂರಿನ ಪ್ರಮುಖ ಆಕರ್ಷಣೆ ಇದಾಗಲಿದೆ. ಹಲವಾರು ವರ್ಷಗಳಿಂದ ಕಾರ್ಯ ನಿರ್ವಹಿಸದೆ ಮುಚ್ಚಲಾಗಿದ್ದ ಮತ್ಸ್ಯಾಲಯಕ್ಕೆ ಮರುಜೀವ ನೀಡಲಾಗುತ್ತಿದೆ. ಮುಂದಿನ 10 ದಿನಗಳೊಳಗಾಗಿ ನವೀಕರಣ ಕಾರ್ಯವನ್ನು ಪೂರ್ಣಗೊಳಿಸಿ ಲೋಕಾರ್ಪಣೆಗೊಳಿಸಲಾಗುವುದು. ಈ ಮತ್ಸ್ಯಾಲಯದಲ್ಲಿ ವಿವಿಧ 36 ಜಾತಿಯ ಅಲಂಕಾರಿಕ ಮೀನುಗಳ ಅಕ್ವೇರಿಯಂಗಳನ್ನು ಅಳವಡಿಸಲಾಗಿದೆ. ಕೋಯಿಕಾರ್ಪ್, ಗೋಲ್ಡ್ ಫಿಶ್, ಅರೋಹನ, ಫ್ಲವರ್‌ಆರ್ಮ್, ಪ್ಯಾರಲ್ಸ್ ಸೇರಿದಂತೆ ಹಲವಾರು ಜಾತಿಯ ಮೀನುಗಳನ್ನು ಪ್ರದರ್ಶನಕ್ಕಿಡಲಾಗುವುದು ಎಂದು ಸಚಿವರಿಗೆ ಮಾಹಿತಿ ನೀಡಿ-ದರು.

ಈ ಸಂದರ್ಭದಲ್ಲಿ ಪಾವಗಡ ಶಾಸಕ ಹೆಚ್.ವಿ.ವೆಂಕಟೇಶ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ. ಅಶೋಕ್, ಹೇಮಾವತಿ ನಾಲಾ ಉಪವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ಸಿ. ಸಂಪತ್ ಕುಮಾರ್, ಮೀನುಗಾರಿಕೆ ಇಲಾಖೆ ಉಪನಿರ್ದೇಶಕ ಎ.ಸಿ. ಶಿವಶಂಕರ್, ತೋಟಗಾರಿ-ಕೆ ಉಪನಿರ್ದೇಶಕ ಶಾರದಮ್ಮ, ಪಶುಸಂಗೋಪನಾ ಇಲಾಖೆ ಉಪನಿರ್ದೇಶಕ ಡಾ: ಗಿರೀಶ್ ಬಾಬುರೆಡ್ಡಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಪ್ಲಾಸ್ಟಿಕ್ ಮಾಲಿನ್ಯ ಕೊನೆಗೊಳಿಸುವ ನಿಟ್ಟಿನಲ್ಲಿ ವಿಶೇಷ ಆಂದೋಲನ

**ಚಿತ್ರದುರ್ಗ :** ಪ್ರತಿ ವರ್ಷ ಜೂನ್ 05 ರಂದು ವಿಶ್ವ ಪರಿಸರ ದಿನ



ಆಚರಿಸಲಾಗುತ್ತದೆ. "ಜಾಗತಿಕವಾಗಿ ಪ್ಲಾಸ್ಟಿಕ್ ಮಾಲಿನ್ಯವನ್ನು ಕೊನೆಗೊಳಿಸುವುದು" ಎಂಬ ಘೋಷವಾಕ್ಯದೊಂದಿಗೆ ಪ್ಲಾಸ್ಟಿಕ್ ಮಾಲಿನ್ಯವನ್ನು ಸಂಪೂರ್ಣ ತಡೆಗಟ್ಟಬೇಕಾದ ಮಹತ್ವ ತಿಳಿಸುವ ಉದ್ದೇಶದೊಂದಿಗೆ ಈಗಾಗಲೇ ಕಳೆದ ಮೇ 22 ರಿಂದ ವಿಶೇಷ ಆಂದೋಲನ ಪ್ರಾರಂಭವಾಗಿದ್ದು, ಜೂನ್ 05 ರವರೆಗೆ ಎಲ್ಲ ಗ್ರಾಮ ಪಂಚಾಯಿತಿಗಳಲ್ಲಿ ನಡೆಯಲಿದೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್. ಜೆ.ಸೋಮಶೇಖರ್ ತಿಳಿಸಿದ್ದಾರೆ.

ಪ್ಲಾಸ್ಟಿಕ್ ತ್ಯಾಜ್ಯ ನಿರ್ವಹಣೆಯು ಸ್ವಚ್ಛ ಭಾರತ್ ಮಿಷನ್ (ಗ್ರಾ) ಯೋಜನೆಯ ಘನ ತ್ಯಾಜ್ಯ ನಿರ್ವಹಣಾ ಪ್ರಯತ್ನಗಳ ಪ್ರಮುಖ ಭಾಗವಾಗಿದ್ದು, ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಜಾಗೃತಿ ಅಭಿಯಾನದಲ್ಲಿ ಪ್ಲಾಸ್ಟಿಕ್ ತ್ಯಾಜ್ಯದಿಂದ ಆಗುವ ದುಷ್ಪಾರಿಣಾಮಗಳು ಹಾಗೂ ಪ್ಲಾಸ್ಟಿಕ್ ನಿರ್ಮೂಲನೆ ಮಾಡುವ ಸಂಬಂಧ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ವಿವಿಧ ಕಾರ್ಯಕ್ರಮ, ಚಟುವಟಿಕೆ, ಶ್ರಮದಾನ, ಸಂವಾದ ಸಭೆಗಳನ್ನು ಆಯೋಜನೆ ಮಾಡಿ ಜನರಲ್ಲಿ ಜಾಗೃತಿ ಮೂಡಿಸುವುದಾಗಿದೆ.

ಈ ವಿಶೇಷ ಆಂದೋಲನದಲ್ಲಿ ಜಲಮೂಲಗಳ ಸುತ್ತಮುತ್ತ ಸ್ವಚ್ಛಗೊಳಿಸುವುದು, ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ಬ್ಲಾಕ್ ಸ್ಪಾಟ್ ಕಸ ಎಸೆಯುವ ಸ್ಥಳಗಳನ್ನು ಅದರಲ್ಲಿ ಪ್ಲಾಸ್ಟಿಕ್ ಮತ್ತು ಇತರೆ ವಸ್ತುಗಳನ್ನು ಎಸೆಯದಂತೆ ತಿಳಿಸುವುದು. ಏಕ ಬಳಕೆ-ಯ ಪ್ಲಾಸ್ಟಿಕ್ ವಸ್ತುಗಳು, ಥರ್ಮಕೋಲ್, ಕ್ಯಾರಿ ಬ್ಯಾಗ್‌ಗಳು, ಪಾಲಿಥಿನ್ ಬ್ಯಾಗ್‌ಗಳು, ಶ್ಯಾಂಪು ಬಾಟಲಿಗಳು, ಇಯರ್ ಬಡ್ಸ್, ಪ್ಲಾಸ್ಟಿಕ್ ತಟ್ಟೆ, ಪ್ಲಾಸ್ಟಿಕ್ ರೂಪದ ಗಾಜುಗಳು, ಐಸ್‌ಕ್ರೀಂ ಕಡ್ಡಿಗಳು, ಆಹ್ವಾನ ಪತ್ರಿಕೆಗಳು ಸಿಗರೇಟ್ ಪ್ಯಾಕ್‌ಗಳು ಸೇರಿದಂತೆ ಇತ್ಯಾದಿಗಳು ಪ್ಲಾಸ್ಟಿಕ್ ವಸ್ತು ಮತ್ತು ಕವರ್‌ಗಳನ್ನು ಉತ್ಪಾದಿಸುವ, ಮಾರಾಟ ಮಾಡುವ ಗ್ರಾಹಕರಿಗೆ ನೀಡುವ ಅಂಗಡಿ, ಹೋಟೆಲ್, ಬೇಕರಿ ಇತರೆ ವಾಣಿಜ್ಯ ಮಳಿಗೆಗಳಿಗೆ ತಪಾಸಣೆ ಮಾಡುವುದು. ಬಳಕೆಯಾದ ಪ್ಲಾಸ್ಟಿಕ್ ವಸ್ತುಗಳನ್ನು ಸೂಕ್ತ ವಿಲೇವಾರಿ ಮಾಡುವಂತೆ ಪ್ರೇರೆಪಿಸುವುದು.

## ಬೀದರ್ ಕಾಂಗ್ರೆಸ್‌ನಲ್ಲಿ ಬಂಡಾಯದ ಬಿಸಿ, ಖಂಡ್ರೆ ವಿರುದ್ಧ ಅಸಮಾಧಾನ! ಏನು ಕಾರಣ

**ಬೆಂಗಳೂರು:** ಬೀದರ್ ಕಾಂಗ್ರೆಸ್‌ನಲ್ಲಿ ಬಂಡಾಯ ಬಿಸಿ ಏರಿದೆ. ಸಚಿವ ಈಶ್ವರ್ ಖಂಡ್ರೆ ವಿರುದ್ಧ ಅಸಮಾಧಾನಿತ ಬಣ ಬಂಡಾಯದ ಬಾವುಟ ಹಾರಿಸಿದೆ. ರಾಜಶೇಖರ್ ಪಾಟೀಲ್ ನೇತೃತ್ವದ ತಂಡ ಇದೇ ವಿಚಾರವಾಗಿ ಬೆಂಗಳೂರಿನ ಖಾಸಗಿ ಹೋಟೆಲ್‌ನಲ್ಲಿ ಸಭೆ ನಡೆಸಿದ್ದು, ಖಂಡ್ರೆ ವಿರುದ್ಧ ಹೈಕಮಾಂಡ್ ನಾಯಕರಿಗೆ ದೂರು ಕೊಡಲು ಸಿದ್ಧತೆ ಮಾಡಿಕೊಂಡಿದೆ.

ಈ ಕುರಿತಾಗಿ ಬೆಂಗಳೂರಿನಲ್ಲಿ ನಡೆದಿದ್ದ ಸಭೆಯಲ್ಲಿ ಮಾಜಿ ಶಾಸಕರು,ಮಾಜಿ ಎಂಎಲ್ ಸಿಗಳು ಹಾಗೂ ಸ್ಥಳೀಯ ಮುಖಂಡರು ಸಭೆಯಲ್ಲಿ ಭಾಗಿಯಾಗಿದ್ದರು. ಇದೇ ಸಂದರ್ಭದಲ್ಲಿ ಮಾತನಾಡಿದ್ದ ಮಾಜಿ ಮೇಲ್ಮನೆ ಸದಸ್ಯ ಅರವಿಂದ ಅರಳಿ, ನಾವು ಯಾರ ವಿರುದ್ಧವೂ ಅಲ್ಲ. ಪಕ್ಷ ಒಟ್ಟಿಗೆ ಹೋಗಬೇಕೆಂಬುದಷ್ಟೇ ಉದ್ದೇಶ. ಆದರೆ ಈಶ್ವರ್ ಖಂಡ್ರೆ ಅವರು, ನಮ್ಮನ್ನು ಪರಿಗಣಿಸುತ್ತಿಲ್ಲ ಎಂದರು.

ಖಂಡ್ರೆ ಅವರು ಯಾರನ್ನೂ ವಿಶ್ವಾಸಕ್ಕೆ ತೆಗೆದುಕೊಳ್ಳಿಲ್ಲ. ಈಗ ಜಿಲ್ಲಾ,ತಾಲ್ಲೂಕು ಹಾಗು ಪಂಚಾಯಿತಿ ಚುನಾವಣೆಗಳು ಎದುರಾಗಲಿವೆ. ನಾವೆಲ್ಲರು ಒಟ್ಟಾಗಿ ಹೋಗಬೇಕಾಗಿದೆ. ಚುನಾವಣೆ ಗೆಲ್ಲೋಕೆ ಒಟ್ಟಾಗಬೇಕಲ್ಲವೇ? ಆದರೆ ಈಶ್ವರ್ ಖಂಡ್ರೆ ಅವರು ಜಿಲ್ಲೆಯನ್ನೇ ಸರಿಯಾಗಿ ನಡೆಸ್ತಿಲ್ಲ, ಇನ್ನು ರಾಜ್ಯವನ್ನು ಹೇಗೆ ನಡೆಸ್ತಾರೆ ಎಂದು ಪ್ರಶ್ನಿಸಿದರು. ನಮಗೆ ಸರಿಯಾಗಿ ಗೌರವ ಕೊಡುವುದಿಲ್ಲ. ನಮ್ಮನ್ನು ಯಾವುದಕ್ಕೂ ಕರೆಯಲ್ಲ ಎಂದು ಈಶ್ವರ್ ಖಂಡ್ರೆ ವಿರುದ್ಧ ಅರವಿಂದ ಅರಳಿ ಆರೋಪ ಮಾಡಿದರು.


## ಯುವತಿ ನಾಪತ್ತೆ

**ಚಿಕ್ಕಮಗಳೂರು, ಜೂ.4:** ಆಲ್ದೂರು ಸಮೀಪದ ಬಾಸ್ತಿ ಸಾರಗೋಡು ಗ್ರಾಮದ ಯುವತಿಯೊಬ್ಬಳು ಮೇ 31 ರ ಸಂಜೆ 5 ಗಂಟೆಯಿಂದ ನಾಪತ್ತೆಯಾಗಿರುವುದಾಗಿ ಆಲ್ದೂರು ಪೊಲೀಸ್ ಠಾಣೆಗೆ ದೂರು ನೀಡಲಾಗಿದೆ. ಆಕೆಯನ್ನು ಸ್ಥಳೀಯ ಚೊಟ್ಟೆಗದ್ದೆ ನಿವಾಸಿ ರಘು ಎಂಬಾತ ಕರೆದೊಯ್ದಿರುವ ಅನುಮಾನವಿದ್ದು, ಆತನ ಮೊಬೈಲ್‌ಗೆ ಕರೆ ಮಾಡಿದಲ್ಲಿ ಸ್ವಿಚ್ ಆಫ್ ಆಗಿದೆ. ಈ ಬಗ್ಗೆ ಕ್ರಮ ಕೈಗೊಂಡು ಪತ್ತೆಹಚ್ಚುವಂತೆ ದೂರಿನಲ್ಲಿ ತಿಳಿಸಲಾಗಿದೆ. ಈ ಬಗ್ಗೆ ಮಾಹಿತಿ ದೊರಕಿದಲ್ಲಿ ಪೊಲೀಸ್ ಕಂಟ್ರೋಲ್ ರೂಂ ದೂರವಾಣಿ ಸಂಖ್ಯೆ 08262-235608 ಆಲ್ದೂರು ಪೊಲೀಸ್ ಠಾಣೆಯ ದೂರವಾಣಿ ಸಂಖ್ಯೆ 08262-250041, 9480805149 ಕ್ಕೆ ಕರೆ ಮಾಡಿ ಮಾಹಿತಿ ನೀಡುವಂತೆ ಕೋರಲಾಗಿದೆ.

### ಶಿರಸಿ: ಮಳೆಯಿಂದಾಗಿ ರಸ್ತೆಗಳು ದುಸ್ತರ। ಜಾರಿಬಿದ್ದು ಕಾಲು ಮುರಿದುಕೊಂಡ ವೃದ್ಧೆ

# ಬಿದಿರಿನ ಬುಟ್ಟಿಯಲ್ಲಿ ಹೊತ್ತೊಯ್ದ ಗ್ರಾಮಸ್ಥರು

ಉತ್ತರ ಕನ್ನಡ: ವೃದ್ಧ ಮಹಿಳೆಯೊಬ್ಬರು ಮನೆಯಲ್ಲಿ ಜಾರಿ ಬಿದ್ದು ಕಾಲು ಮುರಿದುಕೊಂಡಿದ್ದರು. ಅವರನ್ನು ಆಸ್ಪತ್ರೆಗೆ ಸೇರಿಸುವ ಅಗತ್ಯವಿತ್ತು, ಆದರೆ ರಸ್ತೆ ಸರಿಯಿಲ್ಲದ ಕಾರಣ ಬಿದಿರಿನ ಬುಟ್ಟಿಯಲ್ಲಿ ಹೊತ್ತುಕೊಂಡು ಆಸ್ಪತ್ರೆಗೆ ಸೇರಿಸಲಾಗಿದೆ.



ಹೌದು, ಇತ್ತೀಚೆಗೆ ಶಿರಸಿ ತಾಲ್ಲೂಕಿನ ಶಿರಗುಣಿ ಗ್ರಾಮದಲ್ಲಿ 75 ವರ್ಷದ ಮಹಾದೇವಿ ಸುಬ್ಬರಾಯ ಹೆಗ್ಡೆ ಮನೆಯಲ್ಲಿ ಜಾರಿ ಬಿದ್ದು ಕಾಲು ಮುರಿದುಕೊಂಡರು. ಕತ್ತಲಾಗಿದ್ದ ಕಾರಣ ಅವರಿಗೆ ತುರ್ತು ವೈದ್ಯಕೀಯ ಆರೈಕೆಯ ಅಗತ್ಯವಿತ್ತು.

ಆದರೆ ಭಾರೀ ಮಳೆಯಿಂದಾಗಿ ಮಣ್ಣಿನ ರಸ್ತೆ ಕೆಸರುಮಯವಾಗಿ ಜಾರುವಂತಾಗಿತ್ತು, ಮಹಾದೇವಿಯನ್ನು ಸ್ಥಳೀಯರು ಮಾಡಿದ ಬಿದಿರಿನ ಬುಟ್ಟಿಯಲ್ಲಿ 5 ಕಿ.ಮೀ. ಹೊತ್ತುಕೊಂಡು ಹೋಗಿ ಅಂತಿಮವಾಗಿ ಸಿರಗುಣಿ ಗ್ರಾಮದಿಂದ ಸುಮಾರು 40 ಕಿ.ಮೀ ದೂರದಲ್ಲಿರುವ ಶಿರಸಿಯಲ್ಲಿರುವ ಆಸ್ಪತ್ರೆಗೆ ತಲುಪಬೇಕಾಯಿತು. 50 ಮನೆಗಳನ್ನು ಹೊಂದಿರುವ ಮತ್ತು 300 ಜನರಿಗೆ ನೆಲೆಯಾಗಿರುವ ಈ ಗ್ರಾಮದಲ್ಲಿ ಈ ಹಿಂದೆಯೂ ಸಹ ಇಂತಹ ಅನೇಕ ಘಟನೆಗಳು ನಡೆದಿವೆ. ರಸ್ತೆಗಳು ಮತ್ತು ನೆಟ್ ವರ್ಕ್ ಕೊರತೆಯಿಂದಾಗಿ ಗ್ರಾಮಸ್ಥರು ಗಂಭೀರ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಈ ಗ್ರಾಮವು ಮೊದಲು ಬಸ್ ಸೇವೆಯನ್ನು ಹೊಂದಿತ್ತು ಆದರೆ ಐದು ವರ್ಷಗಳ ಹಿಂದೆ ಅದನ್ನು ನಿಲ್ಲಿಸಲಾಗಿತ್ತು. ನಮ್ಮದು ಶಿರಸಿ ಮತ್ತು ಅಂಕೋಲಾದ ಗಡಿಯಲ್ಲಿರುವ ಕೊನೆಯ ಹಳ್ಳಿ. ವಾಹನ ಸಂಚಾರಕ್ಕೆ ಯೋಗ್ಯವಾದ ರಸ್ತೆ ಇಲ್ಲದ ಕಾರಣ ಐದು ವರ್ಷಗಳ ಹಿಂದೆ ಈ ಗ್ರಾಮಕ್ಕೆ ಬಸ್ ಸೇವೆಯನ್ನು ಸ್ಥಗಿತಗೊಳಿಸಲಾಗಿತ್ತು. ಇದ-ರಿಂದಾಗಿ ಇಲ್ಲಿ ಸಾರಿಗೆ ವ್ಯವಸ್ಥೆ ದುಃಸ್ವಪ್ನವಾಗಿದೆ ಎಂದು ಸ್ಥಳೀಯ ನಿವಾಸಿ ಭಾಗೀರಥಿ ಭಟ್ ವಿವರಿಸಿದ್ದಾರೆ. ಮಳೆಗಾಲದಲ್ಲಿ ಮತ್ತೊಂದು ಪಾಳುಬಿದ್ದ ಬಸ್ ನಿಲ್ದಾಣ ಮತ್ತು ಕೆಸರುಮಯ ರಸ್ತೆ ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಸಾಕ್ಷಿಯಾಗಿದೆ. ಗ್ರಾಮದಲ್ಲಿ ಬಸ್ ಸೇವೆ ಪ್ರಾರಂಭವಾದ ಕೆಲವು ದಿನಗಳ ನಂತರ ಬಸ್ ಸಂಚಾರ ಧೂಳಿನಿಂದ ಕೂಡಿದ್ದರಿಂದ ಜನರು ಅನಾರೋಗ್ಯಕ್ಕೆ ಒಳಗಾಗಲು ಪ್ರಾರಂಭಿಸಿದರು, ತಕ್ಷಣವೇ ಬಸ್ ಸೇವೆಯನ್ನು ನಿಲ್ಲಿಸಲಾಯಿತು ಎಂದು ಮತ್ತೊಬ್ಬ ನಿವಾಸಿ ನಾಗ್ಯ ಸಿದ್ದಿ ಮಾತನಾಡಿ ಹೇಳಿದ್ದಾರೆ. ಗ್ರಾಮಸ್ಥರು ಸ್ಥಳೀಯ ಶಾಸಕ ಭೀಮಣ್ಣ ನಾಯಕ್ ಅವರಿಗೆ ಮನವಿ ಪತ್ರ ನೀಡಿದ್ದಾರೆ, ಆದರೆ ಯಾವುದೇ ಕ್ರಮ ಕೈಗೊಳ್ಳಲಾಗಿಲ್ಲ ಎಂದು ಆರೋಪಿಸಿದ್ದಾರೆ.

# ಬಡವರ ಅಂತ್ಯಸಂಸ್ಕಾರಕ್ಕೆ ಮುಕ್ತಿವಾಹನ ಅನುಕೂಲ : ಶಾಸಕ ಬಿ. ದೇವೇಂದ್ರಪ್ಪ




**ಜಗಳೂರು:** ಬಡವರ ಅಂತ್ಯಸಂಸ್ಕಾರಕ್ಕೆ ಮುಕ್ತಿವಾಹನ ಅನುಕೂಲವಾಗಲಿದೆ ಎಂದು ಶಾಸಕ ಬಿ. ದೇವೇಂದ್ರಪ್ಪ ಹೇಳಿದರು.

ಪಟ್ಟಣದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯ ಮುಂಭಾಗದಲ್ಲಿ ಜೈ ಭಾರತ್ ಟ್ರಸ್ಟ್ ವತಿಯಿಂದ 'ಮುಕ್ತಿ ವಾಹನ' ಲೋಕಾರ್ಪಣೆ ನಂತರ ಮಾತನಾಡಿದರು.

ಸಮಾಜಮುಖಿ ಕೆಲಸ, ಬಡವರಿಗೆ ಸಹಾಯಸ್ತ ಚಾಚುವ ಹೃದಯ ಶ್ರೀಮಂತಿಕೆಯ ಜನಸಂಖ್ಯೆ ವಿರಳವಾಗಿದೆ. ಸಮಾಜದಲ್ಲಿ ಮತ್ತೊಬ್ಬರ ಕಂಬನಿಗೆ ಮಿಡಿಯುವ ಗುಣ ಮೈಗೂಡಿಸಿಕೊಳ್ಳಬೇಕು ಎಂದರು.

ಜೈ ಭಾರತ್ ಟ್ರಸ್ಟ್‌ನ ಬರ್ಕತ್ ಅಲಿ ಅವರು ಸಾರ್ವಜನಿಕ ಆಸ್ಪತ್ರೆಯೊಂದಿಗೆ ಕೈಜೋಡಿಸಿ ತುರ್ತುಪರಿಸ್ಥಿತಿಯಲ್ಲಿರುವವರಿಗೆ ಉಚಿತ ಆಂಬ್ಯುಲೆನ್ಸ್, ರೋಗಿಗಳಿಗೆ ಉಚಿತ ಗಂಜಿ ಕೇಂದ್ರ, ಇದೀಗ ಶವ ಸಂಸ್ಕಾರಕ್ಕೆ ತೆರಳಲು ಮುಕ್ತಿವಾಹನ ಕಲ್ಪಿಸುವ ಮೂಲಕ ಬಡ ವರ್ಗದವರಿಗೆ ಸಹಾಯ ಹಸ್ತ ಚಾಚುತ್ತಿರುವುದು ಶ್ಲ್ಯಾಘನೀಯ ಕಾರ್ಯವಾಗಿದೆ ಎಂದರು.

ಪ್ರತಿವರ್ಷ ಅನಾಥಾಶ್ರಮಕ್ಕೆ ವೈಯಕ್ತಿಕವಾಗಿ 50 ಸಾವಿರ ರೂ. ದೇಣಿಗೆ ನೀಡುತ್ತಿದ್ದೇನೆ. ಇದರ ಜೊತೆಗೆ ಭಿಕ್ಷಾ ಪಾತ್ರೆಯನ್ನು ಹಿಡಿದು ಬೀದಿಗೆ ಇಳಿಯುತ್ತೇನೆ. ಈ ಕಾರ್ಯದಲ್ಲಿ ಸಾರ್ವಜನಿಕರು ನನ್ನೊಂದಿಗೆ ಕೈಜೋಡಿಸಿ ಎಂದು ಕರೆ ನೀಡಿದರು.

ಜಿ.ಪಂ. ಮಾಜಿ ಸದಸ್ಯ ಕೆ.ಪಿ.ಪಾಲಯ್ಯ ಮಾತನಾಡಿ, ಆಸ್ಪತ್ರೆಯ ರೋಗಿಗಳಿಗೆ ಅನುಕೂಲವಾಗುವಂತೆ ಜೈ ಭಾರತ್ ಟ್ರಸ್ಟ್ ಸೇವೆಗೈಯ್ಯುತ್ತಿದೆ. ಇನ್ನೂ ಹೆಚ್ಚಿನದಾಗಿ ಸಮಾಜಮುಖಿ ಕೆಲಸಗಳನ್ನು ಮಾಡಲಿ. ಇವರ ಕೆಲಸಕ್ಕೆ ಶಾಸಕರು ಸಂಪೂರ್ಣ ಸಹಕಾರ ನೀಡಿದ್ದಾರೆ ಎಂದರು.

ಮಾಜಿ ಶಾಸಕ ಹೆಚ್.ಪಿ.ರಾಜೇಶ್ ಅವರು ಮುಕ್ತಿವಾಹನ ಲೋಕಾರ್ಪಣೆ ಕಾರ್ಯಕ್ರಮಕ್ಕೆ ಶುಭ ಕೋರಿದರು.

ಈ ಸಂದರ್ಭದಲ್ಲಿ ಸಾರ್ವಜನಿಕ ಸರ್ಕಾರಿ ಆಸ್ಪತ್ರೆ ಆಡಳಿತಾಧಿಕಾರಿ ಡಾ.ಷಣ್ಮುಖಪ್ಪ, ಜೈ ಭಾರತ್ ಟ್ರಸ್ಟ್‌ನ ಬರ್ಕತ್ ಅಲಿ, ಪ.ಪಂ. ಸದಸ್ಯರಾದ ಮಂಜುನಾಥ್, ಲುಕ್ಮಾನ್ ಖಾನ್, ಪಿಂಜಾರ ಸಮಾಜದ ತಾಲ್ಲೂಕು ಅಧ್ಯಕ್ಷ ಬಂಗ್ಲೆ ಫರ್‌ವೀಜ್, ಮುಖಂಡರಾದ ಓಮಣ್ಣ, ಬಿ.ಮಹೇಶ್ವರಪ್ಪ, ಗೌಸ್, ಪಲ್ಲಾಗಟ್ಟೆ ಶೇಖರಪ್ಪ, ಪ್ರಕಾಶರೆಡ್ಡಿ, ಅನ್ವರ್ ಅಲಿ ಮತ್ತಿತರರು ಉಪಸ್ಥಿತರಿದ್ದರು.

## ದಿಢೀರ್ ತುಂಬಿ ಹರಿದ ಎರುಗುಂಡಿ ಫಾಲ್ಸ್; ಸ್ಥಳೀಯರಿಂದ ಐವರು ಪ್ರವಾಸಿಗರ ರಕ್ಷಣೆ



**ಮಂಗಳೂರು:** ನಿಗದಿಗಿಂತ ಮೊದಲೇ ರಾಜ್ಯಕ್ಕೆ ಮುಂಗಾರು ಕಾಲಿಟ್ಟಿದ್ದು, ರಾಜ್ಯಾದ್ಯಂತ ವ್ಯಾಪಕ ಮಳೆಯಾಗುತ್ತಿದೆ. ಇತ್ತ ಎರುಗುಂಡಿ ಫಾಲ್ಸ್‌ನಲ್ಲಿ ಅಪಾಯಕ್ಕೆ ಸಿಲುಕಿದ್ದ ಪ್ರವಾಸಿಗರನ್ನು ಸ್ಥಳೀಯರು ರಕ್ಷಣೆ ಮಾಡಿರುವ ವಿಡಿಯೋ ವೈರಲ್ ಆಗುತ್ತಿದೆ.

ದಕ್ಷಿಣ ಕನ್ನಡ ಜಿಲ್ಲೆಯ ಮೂಡಬಿದಿರೆ ಬಳಿಯ ಎರುಗುಂಡಿ ಫಾಲ್ಸ್ ಗೆ ಪ್ರವಾಸಕ್ಕೆಂದು ತೆರಳಿ ಅಪಾಯಕ್ಕೆ ಸಿಲುಕಿದ್ದ ಐದು ಮಂದಿ ಪ್ರವಾಸಿಗರನ್ನು ಸ್ಥಳೀಯರು ರಕ್ಷಿಸಿದ್ದಾರೆ. ತುಂಬಿ ಹರಿಯುತ್ತಿರುವ ಫಾಲ್ಸ್‌ನ ಮೇಲೆ ಐವರು ಪ್ರವಾಸಿಗರು ತೆರಳಿದ್ದು, ಸ್ಥಳೀಯರು ಹೇಳಿದರೂ ಕೇಳದೆ ಹೋಗಿದ್ದಾರೆ.

ಈ ಸಂದರ್ಭ ಏಕಾಏಕಿ ನೀರು ನುಗ್ಗಿದೆ. ಐವರು ಬಂಡೆಗಳ ನಡುವೆ ಸಿಲುಕಿದ್ದಾರೆ. ನೀರಿನಲ್ಲಿ ಕೊಚ್ಚಿಕೊಂಡು ಹೋಗಲಿದ್ದ ಐವರನ್ನು ಸ್ಥಳೀಯರು ರಕ್ಷಣೆ ಮಾಡಿದ್ದಾರೆ.

ಎರುಗುಂಡಿ ಫಾಲ್ಸ್ ದಕ್ಷಿಣ ಕನ್ನಡ ಜಿಲ್ಲೆಯ ಪುತ್ತಿಗೆ ಗ್ರಾಮದ ಪಾಲಡ್ಕದಲ್ಲಿ ಇದ್ದು, ಮುಂಗಾರು ಮಳೆಯ ಕಾರಣದಿಂದ ಫಾಲ್ಸ್ ತುಂಬಿ ಹರಿಯುತ್ತಿದೆ. ಪ್ರವಾಸಿಗರ ರಕ್ಷಣೆಯ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕ ವೈರಲ್ ಆಗುತ್ತಿದೆ.

**ಎಚ್ಚರಿಕೆ ನೀಡಿದರೂ ಜಲಪಾತ ಏರಿದ ಪ್ರವಾಸಿಗರು :** ಇನ್ನು ಭಾರಿ ಮಳೆ ಕಾರಣ ನೀರು ರಭಸವಾಗಿ ಹರಿಯುತ್ತಿದೆ. ಜಲಪಾತ ಯಾವಾಗ ಬೇಕಾದರೂ ಉಕ್ಕಿ ಹರಿಯಬಹುದು. ಜಲಪಾತದ ಬಳಿ ಹೋಗಬೇಡಿ ಎಂದು ಸ್ಥಳೀಯರು ಪ್ರವಾಸಿಗರಿಗೆ ಎಚ್ಚರಿಕೆ ನೀಡಿದ್ದರು. ಆದರೂ ಪ್ರವಾಸಿಗರೂ ಸ್ಥಳೀಯರನ್ನು ನಿರ್ಲಕ್ಷಿಸಿ ಜಲಪಾತ ಏರಿದ್ದರು.

ಪ್ರವಾಸಿಗರು ಜಲಪಾತ ಏರುತ್ತಲೇ ಜಲಪಾತದಲ್ಲಿ ನೀರು ತುಂಬಿ ಹರಿದಿದೆ. ಈ ವೇಳೆ ಪ್ರವಾಸಿಗರು ಪಾರಾಗುವ ಪ್ರಯತ್ನ ಮಾಡಿದರಾದರೂ ನೀರಿನ ರಭ ಹೆಚ್ಚಾದ ಹಿನ್ನಲೆಯಲ್ಲಿ ಬಂಡೆಗಳ ನಡುವೆ ಸಿಲುಕಿದ್ದರು. ನದಿಯಲ್ಲಿ ನೀರಿನ ಮಟ್ಟ ಹಠಾತ್ತನೆ ಏರಿಕೆಯಾದ ಕಾರಣ, ಪ್ರವಾಸಿಗರು ಸಿಲುಕಿಕೊಂಡರು ಮತ್ತು ಸಹಾಯಕ್ಕಾಗಿ ಕೂಗಿಕೊಂಡರು.ಈ ವೇಳೆ ಇದನ್ನು ಗಮನಿಸಿದ ಸ್ಥಳೀಯರು ತಮ್ಮ ಬಳಿ ಇದ್ದ ಹಗ್ಗಗಳನ್ನು ಸೇರಿಸಿ ಜಲಪಾತದಿಂದ ಪ್ರವಾಸಿಗರನ್ನು ಒಬ್ಬೊಬ್ಬರನ್ನಾಗಿಯೇ ಕೆಳಗಿಳಿಸಿದ್ದಾರೆ. ಅದೃಷ್ಟವಶಾತ್, ಯಾವುದೇ ಸಾವುನೋವುಗಳು ಅಥವಾ ಗಾಯಗಳು ವರದಿಯಾಗಿಲ್ಲ.

**ಅಧಿಕಾರಿಗಳ ಎಚ್ಚರಿಕೆ:** ತೀವ್ರ ಮಳೆಯ ಸಮಯದಲ್ಲಿ ಜಲಪಾತಗಳು ಮತ್ತು ಗುಡ್ಡಗಾಡು ಪ್ರದೇಶಗಳಿಗೆ ಭೇಟಿ ನೀಡದಂತೆ ಜಿಲ್ಲಾ ಅಧಿಕಾರಿಗಳು ಮೊದಲೇ ಜನರಿಗೆ ಎಚ್ಚರಿಕೆ ನೀಡಿದ್ದರು. ಆದಾಗ್ಯೂ, ಈ ಸಲಹೆಗಳನ್ನು ನಿರ್ಲಕ್ಷಿಸುವ ಕೆಲವು ಪ್ರವಾಸಿಗರ ಪ್ರವೃತ್ತಿ ಸ್ಥಳೀಯ ಸಮುದಾಯಗಳು ಮತ್ತು ರಕ್ಷಣಾ ತಂಡಗಳಿಗೆ ಸವಾಲುಗಳನ್ನು ಒಡ್ಡುತ್ತಲೇ ಇದೆ ಎಂದು ಅಧಿಕಾರಿಗಳು ಹೇಳಿದರು.

ರೆಡ್ ಅಲರ್ಟ್ : ಕಳೆದ ಮೂರು ದಿನಗಳಿಂದ ಕರ್ನಾಟಕದ ಕರಾವಳಿ ಪ್ರದೇಶದಲ್ಲಿ ಭಾರೀ ಮಳೆಯಾಗುತ್ತಿದ್ದು, ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸಾಮಾನ್ಯ ಜನಜೀವನ ತೀವ್ರವಾಗಿ ಅಸ್ತವ್ಯಸ್ತಗೊಂಡಿದ್ದು, ಅಧಿಕಾರಿಗಳು ರೆಡ್ ಅಲರ್ಟ್ ಹೊರಡಿಸಲು ಮತ್ತು ವಿಪತ್ತು ಪ್ರತಿಕ್ರಿಯೆ ತಂಡಗಳನ್ನು ನಿಯೋಜಿಸಲು ಉತ್ತೇಜನ ನೀಡಿದ್ದಾರೆ. ಕರಾವಳಿ ಕರ್ನಾಟಕದ ರೆಡ್ ಅಲರ್ಟ್ ಮುಂದಿನ ಐದು ದಿನಗಳವರೆಗೆ ಜಾರಿಯಲ್ಲಿರುತ್ತದೆ ಎಂದು ಐಎಂಡಿ ತಿಳಿಸಿದೆ.

# ಅಂತಾರಾಜ್ಯ ನಕಲಿ ಕೀಟನಾಶಕ ಜಾಲ ಭೇದಿಸಿದ ಪೊಲೀಸರು; ಆರೋಪಿ ಬಂಧನ



**ಬಳ್ಳಾರಿ:** ನಕಲಿ ಕೃಷಿ ರಾಸಾಯನಿಕ ಮಾರಾಟ ಮಾಡುವ ಅಂತರ ರಾಜ್ಯ ಜಾಲವನ್ನು ಭೇದಿಸಿರುವ ಪೊಲೀಸರು 2 ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ನಕಲಿ ಕೃಷಿ ರಾಸಾಯನಿಕಗಳನ್ನು ವಶಪಡಿಸಿಕೊಂಡಿದ್ದಾರೆ.

ಕರ್ನಾಟಕದ ಬಳ್ಳಾರಿ ಮತ್ತು ಶಿವಮೊಗ್ಗ ಸೇರಿದಂತೆ ಹನ್ನೊಂದು ರಾಜ್ಯಗಳ ವಿವಿಧೆಡೆಗಳಲ್ಲಿ ತನ್ನ ಸಹಚರರ ಮೂಲಕ ಈ ಜಾಲವನ್ನು ನಿರ್ವಹಿಸುತ್ತಿದ್ದ ಪ್ರಮುಖ ಆರೋಪಿ ರಾಜೇಂದ್ರ ಚೆಚಾನಿಯನ್ನು ತೆಲಂಗಾಣ ಪೊಲೀಸರು, ರಾಜಸ್ಥಾನ ಪೊಲೀಸರ ಸಹಕಾರದೊಂದಿಗೆ ರಾಜಸ್ಥಾನದ ಚಿತ್ತೋರ್‌ಗಢ ಜಿಲ್ಲೆಯ ಬಸ್ಸಿ ಗ್ರಾಮದಲ್ಲಿರುವ ಅವರ ತೋಟದ ಮನೆಯಿಂದ ಬಂಧಿಸಿದ್ದಾಗಿ ಅಧಿಕೃತ ಮೂಲಗಳು ಹೇಳಿವೆ.

ಚೆಚಾನಿ ಏಳು ವರ್ಷಗಳಿಗೂ ಹೆಚ್ಚು ಕಾಲ ಇಂತಹ ಅತ್ಯಾಧುನಿಕ ಅಕ್ರಮ ವ್ಯಾಪಾರ ಮತ್ತು ಅಕ್ರಮ ಜಾಲವನ್ನು ನಡೆಸುತ್ತಿದ್ದ. ಹೆಸರಾಂತ ಕೃಷಿ ರಾಸಾಯನಿಕ ಕಂಪನಿಗಳ ಲೇಬಲ್‌ಗಳನ್ನು ಹೊಂದಿರುವ ನಕಲಿ ಉತ್ಪನ್ನಗಳನ್ನು ಸರಬರಾಜು ಮಾಡಿ ಮಾರಾಟ ಮಾಡಿರುವುದು ವಿಚಾರಣೆಯಿಂದ ತಿಳಿದು ಬಂದಿದೆ.

ಭಾರತದ ಕೃಷಿ ವಲಯದಲ್ಲಿ ನಕಲಿ ಕೀಟನಾಶಕಗಳ ಹೆಚ್ಚುತ್ತಿರುವ ಮಾರಾಟವನ್ನು ಈ ಘಟನೆ ಬಹಿರಂಗಪಡಿಸಿದೆ.. ಅಲ್ಲಿ ಮುಗ್ಧ ರೈತರು ಅಗ್ಗದ ನಕಲಿ ಉತ್ಪನ್ನಗಳಿಂದ ಇಂತಹ ಮೋಸಗಾರರಿಂದ ಮೋಸ ಹೋಗುತ್ತಾರೆ. ಈ ನಕಲಿ ರಾಸಾಯನಿಕಗಳು, ನಿಜವಾದ ಬ್ರಾಂಡ್‌ಗಳನ್ನು ಹೋಲುವಂತೆ ಪ್ಯಾಕ್ ಮಾಡಲಾಗಿದ್ದರೂ, ಅವುಗಳ ಹಾನಿಕಾರಕ ಅಥವಾ ನಿಷ್ಪರಿಣಾಮಕಾರಿ ರಾಸಾಯನಿಕಗಳಿಂದಾಗಿ ಇವು ಬೆಳೆ ಹಾನಿಯನ್ನು ಹೆಚ್ಚು ಮಾಡಿ ಮತ್ತು ಇಳುವರಿಯನ್ನು ಕಡಿಮೆ ಮಾಡುತ್ತವೆ. ಇತ್ತೀಚಿನ ಬಂಧನವು ಹಲವಾರು ರಾಜ್ಯಗಳಲ್ಲಿ ವ್ಯಾಪಿಸಿರುವ ನಕಲಿ ಕೃಷಿ ರಾಸಾಯನಿಕಗಳ ಪೂರೈಕೆ ಸರಪಳಿಯನ್ನು ಗಮನಾರ್ಹವಾಗಿ ಕಡಿತಗೊಳಿಸುತ್ತದೆ.'

ಚೆಚಾನಿ ಬಸ್ಸಿಯಲ್ಲಿ ಮಹೇಶ್ವರಿ ಸೀಡ್ಸ್ ಮತ್ತು ಕೀಟನಾಶಕಗಳ ಹೆಸರಿನ ಅಂಗಡಿಯನ್ನು ಹೊಂದಿದ್ದ.

ದೇಶಾದ್ಯಂತ ವಿವಿಧ ನಕಲಿ ವಸ್ತು ಮಾರಾಟಗಾರರಿಗೆ ಪ್ಯಾಕೇ-ಜಿಂಗ್ ಸಾಮಗ್ರಿಗಳು ಮತ್ತು ಸಿದ್ಧಪಡಿಸಿದ ನಕಲಿ ಉತ್ಪನ್ನಗಳಿಗಿರುವ ಪ್ರಮುಖ ಪೂರೈಕೆದಾರನಾಗಿದ್ದ ಎಂದು ವರದಿಯಾಗಿದೆ.ಜುಲೈ 2024 ರಲ್ಲಿ ಹೈದರಾಬಾದ್‌ನಲ್ಲಿ ನಕಲಿ ರಾಸಾಯನಿಕ ಮಾರಾಟಗಾರ ಇ. ರಾಜೇಶ್ ಅವರ ಗೋದಾಮಿನಲ್ಲಿ ನಕಲಿ ಕೀಟನಾಶಕಗಳು ಪತ್ತೆಯಾದ ನಂತರ, ಕೀಟನಾಶಕ ಕಾಯ್ದೆಯಡಿಯಲ್ಲಿ ಎಬಿ ನಗರ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ಸಂಖ್ಯೆ 831/2024 ದಾಖಲು ಮಾಡಿಕೊಂಡು ತನಿಖೆ ನಡೆಸಿ ನಂತರ ಜಾಲವನ್ನು ಭೇದಿಸಲಾಗಿದೆ.

ಹೆಚ್ಚಿನ ತನಿಖೆಯಿಂದ ಚೆಚಾನಿ ವಿರುದ್ಧ ಹಲವಾರು ರಾಜ್ಯಗಳಲ್ಲಿ ದಾಖಲಾಗಿರುವ ಅನೇಕ ಕ್ರಿಮಿನಲ್ ಪ್ರಕರಣಗಳನ್ನು ಬಹಿರಂಗಪಡಿಸಿದೆ ಎಂದು ಪ್ರಕಟಣೆ ಹೇಳಿದೆ.

# ಪ್ಲಾಸ್ಟಿಕ್ ಮುಕ್ತ ಶಾಲೆಯಾಗಲು ಶ್ರಮಿಸಿ: ಗಿರೀಶ ಎಸ್. ದೇವರಮನಿ




**ದಾವಣಗೆರೆ:** ಪರಿಸರದ ದೊಡ್ಡ ವಿರೋಧಿ ಪ್ಲಾಸ್ಟಿಕ್ ಆಗಿದ್ದು, ಎಲ್ಲರ ಜೊತೆಗಿದ್ದೇ ಪ್ಲಾಸ್ಟಿಕ್ ಎಂಬ ರಾಕ್ಷಸ ಎಲ್ಲರನ್ನೂ ಕೊಲ್ಲುತ್ತಿದೆ. ಪ್ಲಾಸ್ಟಿಕ್ ಅನ್ನು ಸಂಪೂರ್ಣ ನಿಷೇಧಿಸಿ ಪರಿಸರದ ಹಾಗೂ ನಮ್ಮನ್ನು ನಾವು ರಕ್ಷಣೆ ಮಾಡಿಕೊಳ್ಳಬೇಕಾಗಿದೆ ಎಂದು ಪರಿಸರ ಸಂರಕ್ಷಣಾ ವೇದಿಕೆ ಜಿಲ್ಲಾಧ್ಯಕ್ಷ ಗಿರೀಶ ಎಸ್. ದೇವರಮನಿ ತಿಳಿಸಿದರು.

ನಗರದ ಪಿ.ಜೆ.ಬಡಾವಣೆಯಲ್ಲಿರುವ ಸೇಂಟ್ ಪಾಲ್ ಬಾಲಕಿಯರ ಪ್ರೌಢಶಾಲೆಯಲ್ಲಿ ಮಂಗಳವಾರ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಗಡಿಯಲ್ಲಿ ದೇಶ ವಿರೋಧಿಗಳ ವಿರುದ್ಧ ಯುದ್ಧ ಮಾಡಿ ನಮ್ಮನ್ನು ಕಾಪಾಡುತ್ತಿರುವ ಯೋಧರ ರೀತಿಯಲ್ಲಿ ನಮ್ಮ ಪರಿಸರವನ್ನು ರಕ್ಷಿಸಲು ಹಸಿರು ಸೈನಿಕರಾಗಿ ನಿಲ್ಲಬೇಕು ಎಂದು ವಿದ್ಯಾರ್ಥಿನಿಯರಿಗೆ ಕರೆ ನೀಡಿದ ಅವರು, ಈ ನಿಮ್ಮ ಶಾಲೆಯನ್ನು ಪ್ಲಾಸ್ಟಿಕ್ ಮುಕ್ತ ಶಾಲೆ ಎಂದು ಘೋಷಿಸಲು ಪ್ರಯತ್ನಿಸಲು ಶಾಲೆ ಮುಖ್ಯಸ್ಥರಿಗೆ ಮನವಿ ಮಾಡಿದರು.

ಹಿರಿಯ ಲೆಕ್ಕ ಪರಿಶೋಧಕ ಸಿಎ ಉಮೇಶ ಶೆಟ್ಟಿ ಮಾತನಾಡಿ, ಪರಿಸರ ರಕ್ಷಣೆಗಸಲು ಸಾರ್ವಜನಿಕರ ಸಹಭಾಗಿತ್ವ ಅತಿ ಅವಶ್ಯಕವಾಗಿದೆ. ಕಸ ವಿಲೇವಾರಿ ಹಾಗೂ ಸ್ವಚ್ಛತೆಗಳಲ್ಲಿ ನಾವೆಲ್ಲರೂ ಜವಾಬ್ದಾರಿಯುತವಾಗಿ ನಡೆದುಕೊಳ್ಳಬೇಕಾಗಿದೆ. ನಾವು ರೋಟರಿ, ರೋಟ್ರ್ಯಾಕ್ಟ್ ಸಂಸ್ಥೆ, ವಿವಿಧ ಸಂಘಟನೆಗಳ ಸಹಯೋಗದಲ್ಲಿ ವಿವಿಧೆಡೆ ಸಸಿಗಳನ್ನು ನೆಡುವ ಕಾರ್ಯಕ್ರಮಗಳನ್ನು ಆಯೋಜಿಸಿಕೊಂಡು ಬಂದಿದ್ದೇವೆ. ಅದೇ ರೀತಿ ನಿಮ್ಮ ಮನೆ, ರಸ್ತೆ ಹಾಗೂ ಶಾಲಾ ಆವರಣದಲ್ಲಿ ಹೆಚ್ಚು ಹೆಚ್ಚು ಗಿಡಗಳನ್ನು ನೆಟ್ಟು ಅವುಗಳನ್ನು ಪೋಷಣೆ ಮಾಡುವ ಮೂಲಕ ಪರಿಸರಕ್ಕೆ ಹೆಚ್ಚಿನ ಕೊಡುಗೆಯನ್ನು ನೀಡಿ ಪರಿಸರದ ರಕ್ಷಣೆಯ ಮುಂದಾಳತ್ವ ವಹಿಸಲು ವಿದ್ಯಾರ್ಥಿನಿಗಳಿಗೆ ಕರೆ ನೀಡಿದರು.

ಕಾರ್ಯಕ್ರಮದಲ್ಲಿ ವಿವಿಧ ವಿಭಾಗಗಳ ಮುಖ್ಯಸ್ಥರಾದ ಸಿಸ್ಟರ್ ಸೆಲ್ವಾ ಮಾರಿಸ್, ಸಿಸ್ಟರ್ ವೆನಿಸಾ, ಸಿಸ್ಟರ್ ಲಿಂಡಾ, ಸಿಸ್ಟರ್ ಸಮಂತ, ಸಿಸ್ಟರ್ ರಶ್ಮಿ, ವೈಲೆಟ್, ಎಂ.ಕೆ.ಮಂಜುಳ, ಜಸ್ಸಿ, ಮೇಘನಾಥ್, ಟಿ.ಎಂ. ರವೀಂದ್ರಸ್ವಾಮಿ, ಕಿರಣ್, ಗೋವಿಂದಪ್ಪ, ಶಿಕ್ಷಕ ವರ್ಗದವರು, ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಕೆಎಸ್ ಎಂಎಸ್ ಸಿಎಲ್ ಬಲವರ್ಧನೆಗೆ ಡ್ರಗ್ ಆಕ್ಷನ್ ಫೋರಂ ಆಗ್ರಹ




**ದಾವಣಗೆರೆ:** ಕರ್ನಾಟಕ ಸರ್ಕಾರವು ಕರ್ನಾಟಕ ರಾಜ್ಯ ವೈದ್ಯಕೀಯ ಸರಬರಾಜು ನಿಗಮ ನಿ. ( ಕೆಎಸ್ ಎಂಎಸ್ ಸಿಎಸ್) ವನ್ನು ತಮಿಳುನಾಡು, ಕೇರಳ, ರಾಜಸ್ಥಾನ ರಾಜ್ಯಗಳ ಮಾದರಿಯಂತೆ ಬಲಪಡಿಸಿ, ಎಲ್ಲಾ ಸರ್ಕಾರಿ ಸೌಲಭ್ಯಗಳಲ್ಲಿ ಗುಣಮಟ್ಟದ ಔಷಧಿಗಳ ನಿರಂತರ ಪೂರೈಕೆಯನ್ನು ಖಾತ್ರಿ ಪಡಿಸುವತ್ತ ಗಮನ ಹರಿಸುವಂತೆ ಡ್ರಗ್ ಆಕ್ಷನ್ ಫೋರಂ –ಕರ್ನಾಟಕ ಹಾಗೂ ನೆರಳು ಬೀಡಿ ಕಾರ್ಮಿಕರ ಯೂನಿಯನ್ ವತಿಯಿಂದ ಆಗ್ರಹಿಸಲಾಯಿತು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಫೋರಂ ನ ಡಾ. ಗೋಪಾಲ ದಾಬಡೆ, ರಾಜ್ಯ ಸರ್ಕಾರ ಆಸ್ಪತ್ರೆಗಳು ಆವರಣದಲ್ಲಿರುವ ಪ್ರಧಾನಮಂತ್ರಿ ಜನೌಷಧಿ ಕೇಂದ್ರಗಳನ್ನು ಮುಚ್ಚುವುದನ್ನು ಸ್ವಾಗತಿಸುತ್ತೇವೆ. ಆದರೆ ಉಚಿತ ಔಷಧಗಳ ಮುಕ್ತ ಲಭ್ಯತೆಯನ್ನು ಖಚಿತಪಡಿಸಿಯೇ ಜನೌಷಧಿ ಕೇಂದ್ರಗಳನ್ನು ಮುಚ್ಚಿದ್ದರೆ ಹೆಚ್ಚು ಸೂಕ್ತವಾಗುತ್ತಿತ್ತು ಎಂಬ ಅಭಿಪ್ರಾಯವನ್ನು ವ್ಯಕ್ತಪಡಿಸಿದರು.

ರೋಗಿಗಳಿಗೆ ನೀಡುವ ಎಲ್ಲಾ ಔಷಧಿಗಳ ಗುಣಮಟ್ಟ ಪರೀಕ್ಷೆಗಳಾಗಬೇಕು. ಇಲ್ಲವಾದರೆ ಕಳಪೆ ಗುಣಮಟ್ಟದ ಔಷದಿಗಳಿಂದ ಅಕ್ಟೋಬರ್ 2024 ರಲ್ಲಿ ಬಳ್ಳಾರಿಯಲ್ಲಿ ಮತ್ತು ಇತರೆ ಜಿಲ್ಲಾ ಆಸ್ಪತ್ರೆಗಳಲ್ಲಿ ಸಂಭವಿಸಿದ ಬಾಣಂತಿ ಸಾವುಗಳಂತಹ ಘಟನೆಗಳನ್ನು ಇನ್ನಾದರೂ ತಡೆಯಲು ಸಾಧ್ಯ ಎಂದರಲ್ಲದೆ, ಸರ್ಕಾರಿ ಆಸ್ಪತ್ರೆಗೆ ಬಂದ ಯಾವುದೇ ರೋಗಿಗಳು ಖಾಸಗಿ ಫಾರ್ಮಸಿ ಗಳಿಂದ ಅಥವಾ ಜನೌಷಧಿ ಕೇಂದ್ರಗಳಿಂದ ಔಷಧಿಗಳನ್ನು ಖರೀದಿಸುವಂತಾಗಬಾರದು ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಜಬೀನಾ ಖಾನಂ, ಎಂ. ಕರಿಬಸಪ್ಪ, ನೂರ್ ಫಾತೀಮಾ, ಹಸೀನಾ ಬಾನು, ಶಾಹೀರಾ,ಷ ಫಜ್ಲಾನ್, ರೇಷ್ಮಾ ಬಾನು ಇನ್ನಿತರರು ಉಪಸ್ಥಿತರಿದ್ದರು.

# ಉಪನ್ಯಾಸಕರ ಹುದ್ದೆಯ ಫಲಿತಾಂಶ ಪಟ್ಟಿ ಬಿಡುಗಡೆ

**ಹಾಸನ** : 2025-26ನೇ ಶೈಕ್ಷಣಿಕ ಸಾಲಿಗೆ ವಿವಿಧ ವಸತಿ ಶಾಲೆ/ ಮೌಲಾನಾ ಆಜಾದ್ ಮಾದರಿ ಶಾಲೆ/ ವಸತಿ ಕಾಲೇಜುಗಳಲ್ಲಿ ಖಾಲಿ ಇರುವ ಅತಿಥಿ ಶಿಕ್ಷಕರು/ ಉಪನ್ಯಾಸಕರ ಹುದ್ದೆಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಹಾಸನ ವತಿಯಿಂದ ಸಾಮಾನ್ಯ ಪರೀಕ್ಷೆಯನ್ನು ನಡೆಸಲಾಗಿದ್ದು, ಸದರಿ ಪರೀಕ್ಷೆಯ ಫಲಿತಾಂಶದ 1:2 ಪಟ್ಟಿಯನ್ನು ಬಿಡುಗಡೆ ಮಾಡಲಾಗಿರುತ್ತದೆ. ಆದ್ದರಿಂದ ಜಿಲ್ಲಾ ಕಚೇರಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಮೌಲಾನಾ ಆಜಾದ್ ಭವನ, ಆಕಾಶವಾಣಿ ಹಿಂಭಾಗ, ಸಾಲಗಾಮೆ ರಸ್ತೆ, ಹಾಸನ ಈ ಕಚೇರಿಗೆ ಭೇಟಿ ನೀಡಿ ಫಲಿತಾಂಶದ ಮಾಹಿತಿಯನ್ನು ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಆಕಾಶವಾಣಿ ಹಿಂಭಾಗ, ಹಾಸನ.ದೂರವಾಣಿ ಸಂಖ್ಯೆ08172-268373/08172-267373 ಗೆ ಸಂಪರ್ಕಿಸಲುಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ತಿಳಿಸಿದ್ದಾರೆ.

# ಜಿ.ಪಂ. ಸಿಇಓ ಭರತ್ ಎಸ್ ಅವರಿಂದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪ್ರಗತಿ ಪರಿಶೀಲನೆ ಸಭೆ

**ಗದಗ** : ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್. ಎಸ್ ಇವರ ಅಧ್ಯಕ್ಷತೆಯಲ್ಲಿ ಮಂಗಳವಾರ ಗದಗ ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ಎಲ್ಲಾ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಇಲಾಖೆಯ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯನ್ನು ಹಮ್ಮಿಕೊಳ್ಳಲಾಗಿತ್ತು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ಅವರು ಮಾತನಾಡಿ ಜಿಲ್ಲೆಯಲ್ಲಿ ಕರ ವಸೂಲಾತಿ ಪ್ರಗತಿ ಕುಂಠಿತವಾಗಿದ್ದು, ಪ್ರತಿ ತಿಂಗಳು ಶೇ.10% ರಷ್ಟು ಗುರಿ ನಿಗದಿಪಡಿಸಿಕೊಂಡು ಪ್ರಗತಿ ಸಾಧಿಸಬೇಕು. ಜಿಲ್ಲೆಯಲ್ಲಿ ಗ್ರಂಥಾಲಯ ಉಪಕರ ವಸೂಲಾತಿ ಪ್ರಗತಿ ಕುಂಠಿತವಾಗಿದ್ದು, ಪ್ರತಿ ತಿಂಗಳು ಶೇ.10%ರಷ್ಟು ಗುರಿ ನಿಗದಿಪಡಿಸಿಕೊಂಡು ಪ್ರಗತಿ ಸಾಧಿಸಬೇಕು. ಖಕಂಂಕ–ಇ–ಗ್ರಾಮಸ್ವರಾಜ್ ತಂತ್ರಾಂಶದಲ್ಲಿ ಅನುಮೋದಿತ ಕ್ರಿಯಾ ಯೋಜನೆಯನ್ನು ಅಳವಡಿಸುವುದು, ಇ–ಸ್ವತ್ತು– ಸುಮಾರು ಗ್ರಾಮ ಪಂಚಾಯತಿಗಳಲ್ಲಿ 30 ದಿನಗಳಿಗಿಂತ ಬಹಳಷ್ಟು ಅರ್ಜಿಗಳು ವಿಲೇವಾರಿಯಾಗದೇ ಬಾಕಿ ಉಳಿಸಿಕೊಂಡಿದ್ದು ಈ ಕುರಿತು ಕ್ರಮ ವಹಿಸಬೇಕೆಂದು ಸೂಚಿಸಿದರು.

15 ನೇ ಹಣಕಾಸು ಯೋಜನೆಯಡಿ ಈಗಾಗಲೇ ಗ್ರಾಮ ಪಂಚಾಯತಿಗಳಿಗೆ ಬಿಡುಗಡೆಯಾದ ಅನುದಾನವನ್ನು ನಿಗದಿತ ಮಟ್ಟದಲ್ಲಿ ವೆಚ್ಚ ಭರಿಸದೇ ಬಹಳಷ್ಟು ಅನುದಾನ ಬಾಕಿ ಉಳಿಸಿಕೊಂಡಿದ್ದು, ಅನುದಾನ ವೆಚ್ಚ ಭರಿಸಬೇಕು. ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಕಡ್ಡಾಯವಾಗಿ ಮಹಿಳಾ ಗ್ರಾಮ ಸಭೆಗಳನ್ನು ಆಯೋಜಿಸಬೇಕು. ಟ್ರೈನಿಂಗ್ ಮ್ಯಾನೇಜ್‌ಮೆಂಟ್ ಪೋರ್ಟಲ್) ಈ ತಂತ್ರಾಂಶದಲ್ಲಿ ಗ್ರಾಮ ಪಂಚಾಯತಿಯ ಎಲ್ಲ ಚುನಾಯಿತ ಪ್ರತಿನಿಧಿಗಳ ಹಾಗೂ



ಸಿಬ್ಬಂಧಿಗಳ ಆಧಾರ ಕಾರ್ಡ ವಿವರಗಳನ್ನು ಅಳವಡಿಸಬೇಕು. ಈಗಾಗಲೇ ಕೆಲವು ಗ್ರಾಮ ಪಂಚಾಯತಿಗಳಲ್ಲಿ ಗ್ರಾಮ ಲೆಕ್ಕಾಧಿಕಾರಿಗಳಿಗೆ ಕಾರ್ಯನಿರ್ವಹಿಸಲು ಸ್ಥಳಾವಕಾಶವಿದ್ದು, ಇನ್ನುಳಿದ ಗ್ರಾಮ ಪಂಚಾಯತ ಕಟ್ಟಡದಲ್ಲಿ ಕಾರ್ಯನಿರ್ವಹಿಸಲು ಸ್ಥಳಾವಕಾಶ ಕಲ್ಪಿಸಬೇಕು ಎಂದರು.

ಸ್ವಚ್ಛ ಭಾರತ ಮಿಷನ್ (ಗ್ರಾ)– ಈ ಯೋಜನೆಯಡಿ ಈಗಾಗಲೇ ವಯಕ್ತಿಕ ಶೌಚಾಲಯ ನಿರ್ಮಾಣ ಮಾಡಲು ಕಾರ್ಯಾದೇಶ ನೀಡಿದ ಫಲಾನುಭವಿಗಳು ತುರ್ತಾಗಿ ಶೌಚಾಲಯ ನಿರ್ಮಾಣ ಕಾಮಗಾರಿಗಳನ್ನು ಪೂರ್ಣಗೊಳಿಸಲು ಅಗತ್ಯ ಕ್ರಮ ವಹಿಸಬೇಕು. ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಗೆ ಸಂಬಂಧಿಸಿದಂತೆ 2025-26 ನೇ ಸಾಲಿನ ಮೇ–2025ರ ಮಾಹೆ ಕಳೆದರೂ ವಾರ್ಷಿಕ ಗುರಿಗೆ ಅನುಗುಣವಾಗಿ ಪ್ರಗತಿ ಸಾಧಿಸದೇ ಕನಿಷ್ಠ ಪ್ರಗತಿ ಸಾಧಿಸಿರುವ ಗ್ರಾಮ ಪಂಚಾಯತಿಗಳ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಈ ಬಗ್ಗೆ ಹೆಚ್ಚಿನ ಗಮನ ಹರಿಸಿ ಕೂಲಿಕಾರರಿಗೆ ಸ್ಥಳೀಯವಾಗಿ ಕೆಲಸ ಒದಗಿಸಿ ಪ್ರಗತಿ ಸಾಧಿಸಬೇಕು. ಮಹಿಳಾ ಭಾಗವಹಿಸುವಿಕೆ ಪ್ರಮಾಣವನ್ನು ಸರಕಾರದಿಂದ ನಿಗದಿಪಡಿಸಿದ ಶೇ.60%ರಷ್ಟು ಗುರಿ ಸಾಧಿಸಲು ಹಾಗೂ ಬೂದು ನೀರು ನಿರ್ವಹಣೆ ಕಾಮಗಾರಿಗಳ ಡಿಪಿಆರ್ ಗಳನ್ನು ತಯಾರಿಸಿ ಸಲ್ಲಿಸಲು ಮತ್ತು ಜಿಲ್ಲೆಯಲ್ಲಿ ದಾಖಲಾಗಿರುವ ಸಾಮಾಜಿಕ ಲೆಕ್ಕ ಪರಿಶೋಧನಾ ಆಕ್ಷಪಣೆ ಮತ್ತು ವಸೂಲಾತಿ ಮಾಡಿ ಇತ್ಯರ್ಥಪಡಿಸಲು ಜಿ.ಪಂ. ಸಿ.ಇಓ ಭರತ್ ಎಸ್ ಸೂಚಿಸಿದರು.

ವಸತಿ ಯೋಜನೆ ಪ್ರಧಾನಮಂತ್ರಿ ಆವಾಸ ಯೋಜನೆಯಡಿ ಮಂಜೂರಾದ ಮನೆಗಳಿಗೆ ತುರ್ತಾಗಿ ಮುಂದಿನ ಕ್ರಮ ವಹಿಸಲು ಸೂಚಿಸಲಾಯಿತು.

ಸಭೆಯಲ್ಲಿ ಜಿ.ಪಂ. ಉಪ ಕಾರ್ಯದರ್ಶಿ ಸಿ.ಆರ್.ಮುಂಡರಗಿ, ಜಿ.ಪಂ. ಯೋಜನಾ ನಿರ್ದೇಶಕರು, ಮುಖ್ಯ ಯೋಜನಾಧಿಕಾರಿ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು, ಗ್ರಾಮ ಪಂಚಾಯಿತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಸಿಬ್ಬಂದಿಗಳು ಹಾಜರಿದ್ದರು.

# ಹಂಗರವಳ್ಳಿ ಶಾಲೆ ರಾಜ್ಯಕ್ಕೆ ಮಾದರಿ ಶಾಲೆ: ಕೀರ್ತನಾ ಪ್ರಶಂಸೆ

**ಚಿಕ್ಕಮಗಳೂರು:** ಹಂಗರವಳ್ಳಿ ಸರ್ಕಾರಿ ಶಾಲೆ ರಾಜ್ಯಕ್ಕೆ ಮಾದರಿಯಾಗಿದೆ. 13 ಮಕ್ಕಳಿದ್ದು ಮುಚ್ಚುವ ಹಂತಕ್ಕೆ ತಲುಪಿದ್ದ ಶಾಲೆಯಲ್ಲಿ ಈಗ 320 ಮಕ್ಕಳು ವ್ಯಾಸಂಗ ಮಾಡುವ ಹಂತಕ್ಕೆ ಬಂದಿರುವುದರಲ್ಲಿ ಟ್ರಸ್ಟಿನ ಪರಿಶ್ರಮ ಹಾಗೂ ಶಿಕ್ಷಕ ವೃಂದದವರ ಕಾರ್ಯಕ್ಷಮತೆ ಅನನ್ಯ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಚ್.ಎಸ್.ಕೀರ್ತನಾ ಶ್ಲಾಘಿಸಿದರು.

ಚಿಕ್ಕಮಗಳೂರು ತಾಲ್ಲೂಕಿನ ಹಂಗರವಳ್ಳಿಯಲ್ಲಿ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠ ಶಾಲೆಯಲ್ಲಿ ಶ್ರೀ ಉದ್ದಂಡೇಶ್ವರ ಶಿಕ್ಷಣ ಸೇವಾ ಟ್ರಸ್ಟಿನ ವತಿಯಿಂದ ನೀಡಲಾದ ಉಚಿತ ಪಠ್ಯಪುಸ್ತಕ, ನೋಟ್‌ಬುಕ್ ಹಾಗೂ ಸಮವಸ್ತ್ರ ವಿತರಣಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಇಚ್ಛಾಶಕ್ತಿ ಇದ್ದರೆ ಏನನ್ನಾದರೂ ಸಾಧಿಸಬಹುದು ಎಂಬುವುದಕ್ಕೆ ಈ ಶಾಲೆಯನ್ನ ದತ್ತು ಪಡೆದು ಯಾವುದೇ ಫಲಾಪೇಕ್ಷೆ ಇಲ್ಲದೆ ಮುನ್ನಡೆಸುತ್ತಿರುವ ಶ್ರೀ ಉದ್ದಂಡೇಶ್ವರ ಶಿಕ್ಷಣ ಸೇವಾ ಟ್ರಸ್ಟ್ ಮೇಲ್ಪಂಕ್ತಿ ಹಾಕಿಕೊಟ್ಟಿದೆ. ಟ್ರಸ್ಟ್‌ನ ಪದಾಧಿಕಾರಿಗಳ ಅರ್ಪಣಾ ಮನೋಭಾವ ಕೂಡ ಪ್ರಶಂಸನೀಯ. ಸರ್ಕಾರದ ವತಿಯಿಂದ ನಾನು ಇವರನ್ನೆಲ್ಲ ಅಭಿನಂದಿಸುವೆ ಎಂದರು.

ಜಿಲ್ಲಾ ಪಂಚಾಯಿತಿಯಿಂದ ಇಂತಹ ಶಾಲೆಗಳನ್ನು ಅಭಿವೃದ್ಧಿಪಡಿಸಲು ಎಲ್ಲಾ ರೀತಿಯ ನೆರವು ನೀಡಲಾಗುವುದು. ಇದೇ ಮಾದರಿಯಲ್ಲಿ ಜಿಲ್ಲೆಯ ಇತರೆ ಶಾಲೆಗಳನ್ನು ಅಭಿವೃದ್ಧಿಪಡಿಸಲು ಸಮುದಾಯ ಮುಂದೆ ಬರಬೇಕು ಎಂದು ಕರೆ ನೀಡಿದರು.

ವಿದ್ಯೆಯೇ ಎಲ್ಲ ಸಾಧನೆಗೂ ದಾರಿ ದೀಪ. ಜಗತ್ತಿನಲ್ಲಿ ವಿದ್ಯೆಗೆ, ಜ್ಞಾನಕ್ಕೆ ಇರುವ ಬೆಲೆ ಬೇರೆ ಯಾವುದಕ್ಕೂ ಇಲ್ಲ. ಆದ್ದರಿಂದ ಮಕ್ಕಳು ಉತ್ತಮ ಶಿಕ್ಷಣ ಪಡೆದು ದೇಶದ ಅಭಿವೃದ್ಧಿಯಲ್ಲಿ ಪಾಲುದಾರರಾಗಬೇಕು. ಮಕ್ಕಳು ತಮ್ಮ ವಿದ್ಯಾರ್ಥಿ ಜೀವನವನ್ನು ವಿದ್ಯಾಭ್ಯಾಸಕ್ಕಾಗಿ ಮುಡುಪಾಗಿಟ್ಟು ನಿರಂತರ ಓದುವಿಕೆಯಿಂದ ತಮ್ಮ ಗುರಿ ಸಾಧಿಸಬೇಕು ಎಂದೂ ಹೇಳಿದರು.

ಕಾರ್ಯಕ್ರಮದಲ್ಲಿ 320 ವಿದ್ಯಾರ್ಥಿಗಳಿಗೆ ಟ್ರಸ್ಟ್ ವತಿಯಿಂದ ನೋಟ್ ಬುಕ್ಸ್, ಸಮವಸ್ತ್ರ, ಪಠ್ಯಪುಸ್ತಕಗಳನ್ನು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೀರ್ತನಾ ವಿತರಣೆ ಮಾಡಿದರು.

ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು, ಟ್ರಸ್ಟ್ ಅಧ್ಯಕ್ಷರು, ಉಪಾಧ್ಯಕ್ಷರು ಪದಾಧಿಕಾರಿಗಳು, ಎಸ್‌ಡಿಎಂಸಿ ಅಧ್ಯಕ್ಷರು, ಉಪಾಧ್ಯಕ್ಷರು, ಶಿಕ್ಷಕ ವೃಂದದವರು ಹಾಗೂ ಪೋಷಕರು ಭಾಗವಹಿಸಿದ್ದರು.

# ರಸಗೊಬ್ಬರ ಕೃತಕ ಅಭಾವ ಸೃಷ್ಟಿಸಿ ದರ ಹೆಚ್ಚಳ ಸಲ್ಲದು: ಹೆಚ್.ಎಲ್.ಸುಜಾತ

**ಚಿಕ್ಕಮಗಳೂರು:** ರಸಗೊಬ್ಬರಗಳನ್ನು ಗೌಪ್ಯವಾಗಿ ಸಂಗ್ರಹಿಸಿ, ಅಭಾವ ಸೃಷ್ಟಿಸುವ ಮೂಲಕ ಹೆಚ್ಚಿನ ದರಕ್ಕೆ ಮಾರಾಟ ಮಾಡಬಾರದು ಎಂದು ರಸಗೊಬ್ಬರ ಮಾರಾಟಗಾರರಿಗೆ ಜಂಟಿ ಕೃಷಿ ನಿರ್ದೇಶಕಿ ಹೆಚ್.ಎಲ್.ಸುಜಾತ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಇಂದು ನಗರದ ಉಪ ಕೃಷಿ ನಿರ್ದೇಶಕರ ಕಚೇರಿ ಸಭಾಂಗಣದಲ್ಲಿ ಕೃಷಿ ಇಲಾಖೆ ವತಿಯಿಂದ ತಾಲ್ಲೂಕು ಕೃಷಿ ಪರಿಕರ ಮಾರಾಟಗಾರರ ಸಭೆಯನ್ನು ಸಸಿಗೆ ನೀರೆರೆಯುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದ ಅವರು, ರಸಗೊಬ್ಬರ ಮತ್ತು ಕೃಷಿ ಪರಿಕರಗಳನ್ನು ಸರ್ಕಾರ ನಿಗದಿಪಡಿಸಿದ ದರದಲ್ಲೇ ಮಾರಾಟ ಮಾಡುವಂತೆ ಸೂಚಿಸಿದರು.

ರೈತರು ಖರೀದಿಸಿದ ಕೃಷಿ ಸಾಮಗ್ರಿಗಳಿಗೆ ಕಡ್ಡಾಯವಾಗಿ ರಶೀದಿ ನೀಡುವುದರ ಜೊತೆಗೆ ರಸೀದಿಯ ಮೇಲೆ ಸಂಬಂಧಪಟ್ಟ ರೈತರ ಸಹಿ ಪಡೆಯುವಂತೆ ತಿಳಿಸಿದ ಅವರು, ಒತ್ತಾಯ ಪೂರ್ವಕವಾಗಿ ಒಂದೇ ಸಂಸ್ಥೆಯ ಬಿತ್ತನೆ ಬೀಜ ಮಾರಾಟ ಮಾಡಲು ಒತ್ತಾಯ ಹೇರದೆ, ರೈತರ ಆಯ್ಕೆಗೆ ಅನುಗುಣವಾಗಿ ಬಿತ್ತನೆ ಬೀಜ ನೀಡಬೇಕು. ಈ ವಿಚಾರದಲ್ಲಿ ನಿಯಮಗಳನ್ನು ಅನುಸರಿಸದಿದ್ದಲ್ಲಿ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

ಅಧ್ಯಕ್ಷತೆ ವಹಿಸಿದ್ದ ಸಹಾಯಕ ಕೃಷಿ ನಿರ್ದೇಶಕಿ ಸಿ.ಸುಜಾತ ಮಾತನಾಡಿ ರೈತರು ಬೆಳೆ ಬೆಳೆದು ಅಭಿವೃದ್ಧಿ ಹೊಂದಿದಲ್ಲಿ ಇಲಾಖೆ ಮತ್ತು ಪರಿಕರ ಮಾರಾಟಗಾರರಿಗೆ ಹೆಚ್ಚು ಖುಷಿಯಾಗಲಿದೆ. ಮಾರಾಟಗಾರರು ದುಡಿಮೆ ಜೊತೆಗೆ ರೈತ ಸ್ನೇಹಿಯಾಗಿ ಕಾರ್ಯನಿರ್ವಹಿಸಿದಾಗ ಅವರ ಬಗ್ಗೆ ಗೌರವ ಮೂಡಲಿದೆ. ಈ ನಿಟ್ಟಿನಲ್ಲಿ ಇಲಾಖೆ ಮೂಲಕ ಮುಂಗಾರು ಹಂಗಾಮಿನಲ್ಲಿ ಪರಿಕರಗಳ ಮಾರಾಟಗಾರರು ಕೈಗೊಳ್ಳಬಹುದಾದ ಕ್ರಮಗಳನ್ನು ಅನುಸರಿಸುವಂತೆ ಅಧಿಕಾರಿಗಳಿಂದ ಮಾಹಿತಿ ಕೊಡಿಸುವ ಪ್ರಯತ್ನ ಮಾಡಲಾಗಿದೆ ಎಂದರು.

ಉಪಕೃಷಿ ನಿರ್ದೇಶಕ ವೆಂಕಟೇಶ್ ಚೌಹಾಣ್ ಮಾತನಾಡಿ ಪರಿಕರಗಳ ಮಾರಾಟಗಾರರು ಕಾನೂನುಗಳನ್ನು ಪಾಲಿಸಿ ರೈತರಿಗೆ ಅನುಕೂಲವಾಗುವಂತೆ ತಮ್ಮ ವ್ಯವಹಾರದಲ್ಲಿ ಸೇವಾ ಬದ್ಧತೆ ಪ್ರದರ್ಶಿಸಬೇಕು ಹಾಗೂ ಪರಿಕರಗಳ ಮಾರಾಟಗಾರರು ಇಲಾಖೆ ನಡುವಿನ ಸಂಪರ್ಕ ಕೊಂಡಿಯಾಗಿ ಕಾರ್ಯನಿರ್ವಹಿಸುತ್ತಿರುವುದು ರೈತರ ಅಭಿವೃದ್ಧಿಗೆ ವರದಾನವಾಗಿದೆ. ವ್ಯಾವಹಾರಿಕ ಹಿತದೃಷ್ಟಿಯೊಂದಿಗೆ ರೈತರ ಪ್ರಗತಿಗೂ ಹೆಚ್ಚು ಗಮನ ನೀಡಿದಾಗ ಮಾಡುವ ಕಾರ್ಯದಲ್ಲಿ ಸಫಲರಾಗಲು ಸಾಧ್ಯ ಎಂದರು.

ಪ್ರತಿವ? ಸರ್ಕಾರದಿಂದ ಜಾರಿಗೊಳ್ಳುವ ನಿಯಾಮಾವಳಿಗಳ ಮಾಹಿತಿ ನೀಡುವ ಮೂಲಕ ತಮ್ಮ ಕಾರ್ಯನಿರ್ವಹಣೆಯಲ್ಲಿ ಮುನ್ನೆಚ್ಚರಿಕೆ ಕ್ರಮ ಅನುಸರಿಸುವಂತೆ ನಿರ್ದೇಶನ ನೀಡಲಾಗುತ್ತದೆ. ಕಳಪೆ ಗುಣಮಟ್ಟದ ಬಿತ್ತನೆ ಬೀಜ, ಕಳೆನಾಶಕ ನೀಡಿ ರೈತರನ್ನು ವಂಚಿಸುತ್ತಿರುವ ಪ್ರಕರಣಗಳು ಸಾಕಷ್ಟಿವೆ. ಇವುಗಳಿಗೆ ಕಡಿವಾಣ ಹಾಕಲು ಪರಿಕರಗಳ ಮಾರಾಟಗಾರರು ಸನ್ನದ್ಧರಾಗಬೇಕು. ಪ್ರತಿಯೊಂದು ಮಾರಾಟಗಳಿಗೆ ಪರವಾನಗಿ ಪಡೆದುಕೊಂಡು ಪಾರದರ್ಶಕತೆಯಿಂದ ವ್ಯವಹರಿಸುವ ಮೂಲಕ ರೈತರಿಗೆ ನ್ಯಾಯ ದೊರಕಿಸಬೇಕು ಎಂದರು.

ಜಾರಿದಳದ ಸಹಾಯಕ ಕೃಷಿ ನಿರ್ದೇಶಕ ತಿಮ್ಮನಗೌಡ ಪಾಟೀಲ್ ಮಾತನಾಡಿ, ಸಮರ್ಪಕ ದಾಖಲೆಗಳನ್ನು ಪರಿಕರಗಳ ಮಾರಾಟಗಾರರು ತಮ್ಮ ಮಳಿಗೆಗಳಲ್ಲಿ ಕಡ್ಡಾಯವಾಗಿ ಪ್ರದರ್ಶಿಸಬೇಕು. ಯೂರಿಯಾ ಗೊಬ್ಬರವನ್ನು ನಿಗದಿತ ದರಕ್ಕಿಂತ ಹೆಚ್ಚಿನ ಬೆಲೆಗೆ ಮಾಡುವುದು ಕಾನೂನು ಬಾಹಿರ. ಕೇಂದ್ರ ಸರ್ಕಾರದಿಂದ ಸಬ್ಸಿಡಿ ದರದಲ್ಲಿ ಸಿಗುವ ಯೂರಿಯಾವನ್ನು ರೈತರಿಗೆ ಮಾತ್ರ ಮಾರಾಟ ಮಾಡಬೇಕು. ಅನ್ಯವ್ಯಕ್ತಿಗಳಿಗೆ ಸಬ್ಸಿಡಿ ಯೂರಿಯಾ ಗೊಬ್ಬರ ಮಾರಾಟ ಮಾಡಿರುವುದು ಕಂಡುಬಂದಲ್ಲಿ ಕಾನೂನು ಕ್ರಮ ಕಯಗೊಳ್ಳಲಾಗುತ್ತದೆ ಎಂದು ಎಚ್ಚರಿಸಿದರು.

ಇಂತಹ ಪ್ರಕರಣಗಳಲ್ಲಿ ಈಗಾಗಲೇ ಮಳಿಗೆಗಳನ್ನು ಸೀಜ್ ಮಾಡಲಾಗಿದೆ. ಮಾರಾಟಗಾರರು ನಿಗದಿತ ಮಳಿಗೆ ಬಿಟ್ಟು ಪ್ರತ್ಯೇಕ ಸ್ಥಳದಲ್ಲಿ ಪರಿಕರಗಳನ್ನು ಮಾರಾಟ ಮಾಡಿದರೆ ಪರವಾನಗಿ ಪಡೆಯುವುದು ಕಡ್ಡಾಯ. ಸರ್ಕಾರದಿಂದ ಅನುಮೋದಿತಗೊಂಡ ಸಿಐಆರ್‌ಬಿ ನೋಂದಣಿಯಾಗಿರುವ ಕೀಟನಾಶಕವನ್ನು ಮಾತ್ರ ಮಾರಾಟ ಮಾಡಬೇಕು ಎಂದರು. ಪ್ರತಿ ತಿಂಗಳು ಮಾರಾಟಗಾರರು ತಮ್ಮ ದಾಸ್ತಾನಿನ ಮಾಹಿತಿಯನ್ನು ಕೃಷಿ ಇಲಾಖೆಗೆ ಸಲ್ಲಿಸಬೇಕು. ಸುರಕ್ಷಿತ ಕೀಟನಾಶಕಗಳ ಬಗ್ಗೆ ರೈತರಲ್ಲಿ ಜಾಗೃತಿ ಮೂಡಿಸಬೇಕು. ಕಳಪೆ ಡಿಎಪಿ ಗೊಬ್ಬರ ಸರಬರಾಜುಗೊಂಡರೆ ಮಾರಾಟ ಮಾಡದೆ ಕೂಡಲೇ ಇಲಾಖೆ ಗಮನಕ್ಕೆ ತರಬೇಕು ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ಕೃಷಿ ಪರಿಕರ ಮಾರಾಟಗಾರರ ಸಂಘದ ಜಿಲ್ಲಾಧ್ಯಕ್ಷ ಯೋಗೀಶ್, ತಾಲ್ಲೂಕು ಕೃಷಿ ಪರಿಕರ ಮಾರಾಟಗಾರರ ಸಂಘದ ಅಧಕ್ಷ ತಿಮ್ಮಯ್ಯ, ಸಹಾಯಕ ಕೃಷಿ ನಿರ್ದೇಶಕರ ಕಚೇರಿ ತಾಂತ್ರಿಕ ಅಧಿಕಾರಿ ಶೈಲಾ ಮಂತಾದವರು ಭಾಗವಹಿಸಿದ್ದರು.

# ಹೋಟೆಲ್ ಮಾಲೀಕರು ಸ್ವಚ್ಚತೆ ಕಾಪಾಡಿಕೋವಿಡ್ ನಿಯಂತ್ರಣಕ್ಕೆ ಸಹಕರಿಸಿ – ಸುಜಾತ

**ಚಿಕ್ಕಮಗಳೂರು:** ಕೋವಿಡ್ ಮಹಾಮಾರಿ ಪುನಃ ಪತ್ತೆಯಾಗಿರುವ ಹಿನ್ನೆಲೆಯಲ್ಲಿ ಹೋಟೆಲ್‌ಗೆಗ್ರಾಹಕರು, ಸಾರ್ವಜನಿಕರು ಬಂದಾಗ ಸ್ವಚ್ಚತೆ ಮತ್ತುಅಂತರಕಾಪಾಡುವ ಮೂಲಕ ಅಗತ್ಯ ಮುಂಜಾಗ್ರತಾಕ್ರಮಕೈಗೊಂಡ ,ಕೋವಿಡ್ ನಿಯಂತ್ರಣಕ್ಕೆ ಸಹಕರಿಸಬೇಕೆಂದು ನಗರಸಭಾಅಧ್ಯಕ್ಷೆ ಸುಜಾತ ಶಿವಕುಮಾರ್ ತಿಳಿಸಿದರು.

ಅವರುಇಂದು ನಗರಸಭೆಆವರಣದಲ್ಲಿ ಕರೆಯಲಾಗಿದ್ದ ಹೋಟೆಲ್ ಮಾಲೀಕರು, ಲಾಡ್ಜ್ ಹಾಗೂ ತಿಂಡಿ ಗಾಡಿಗಳ ಮಾಲೀಕರ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು.

ಹೋಟೆಲ್‌ನಲ್ಲಿ ನೀರು ಸಂಗ್ರಹಗಾರಗಳ ಮುಚ್ಚಳ ಮುಚ್ಚಿರಬೇಕು, ದಿನಕ್ಕೆ ಎರಡು ಬಾರಿ ಫಿನಾಯಲ್ ಹಾಕಿ ಹೋಟೆಲ್ ನೆಲವನ್ನು ಸ್ವಚ್ಚಗೊಳಿಸಬೇಕು ಎಂದು ಈ ಸಭೆಯ ಮೂಲಕ ಜಾಗೃತಿ ಮೂಡಿಸುತ್ತಿರುವುದಾಗಿ ಸೂಚಿಸಿದರು.

ಚಿಕ್ಕಮಗಳೂರು ಜಿಲ್ಲೆ ಪ್ರವಾಸೋದ್ಯಮಕ್ಕೆ ಹೆಸರುವಾಸಿಯಾಗಿದ್ದು, ಬೆಂಗಳೂರು ಮತ್ತು ಮೈಸೂರು ಸೇರಿದಂತೆ ಹೊರ ಜಿಲ್ಲೆಗಳಿಂದ ಅತಿ ಹೆಚ್ಚು ಪ್ರವಾಸಿಗರು ಆಗಮಿಸುತ್ತಿದ್ದಾರೆ, ಇದರಿಂದಾಗಿ ಸಾಂಕ್ರಾಮಿಕ ರೋಗಗಳು ಹರಡುವ ಸಾಧ್ಯತೆಇರುವುದರಿಂದಅಗತ್ಯ ಮುಂಜಾಗ್ರತೆ ವಹಿಸಬೇಕೆಂದು ಹೇಳಿದರು.

ಒಳ್ಳೆಯ ಆಹಾರಆರೋಗ್ಯಕ್ಕೆ ಪೂರಕವಾಗಿದ್ದು, ಈ ನಿಟ್ಟಿನಲ್ಲಿ ಸಾರ್ವಜನಿಕರು ಹಾಗೂ ಗ್ರಾಹಕರಆರೋಗ್ಯವನ್ನುಕಾಪಾಡುವಲ್ಲಿ ಹೋಟೆಲ್ ಮಾಲೀಕರು ಶುಚಿ–ರುಚಿಗೆಆದ್ಯತೆ ನೀಡಬೇಕೆಂದು ಸಲಹೆ ನೀಡಿದರು.

ಪ್ಲಾಸ್ಟಿಕ್ ಬಳಕೆಯನ್ನು ಸಂಪೂರ್ಣವಾಗಿ ನಿಷೇಧಿಸಿದಾಗ ಮಾತ್ರಆರೋಗ್ಯ ಪೂರ್ಣ ಸಮಾಜ ನಿರ್ಮಾಣ ಮಾಡಲು ಸಾಧ್ಯ.ಪ್ರಕೃತಿ ವೀಕ್ಷಣೆಗೆ ಬರುವ ಪ್ರವಾಸಿಗರು ಪ್ಲಾಸ್ಟಿಕ್




ಬಾಟಲಿಯನ್ನು ಬಳಸುವುದರಿಂದ ಪರಿಸರ ಮಾಲಿನ್ಯಉಂಟಾಗಿಕಲುಷಿತ ವಾತಾವರಣಕ್ಕೆಕಾರಣವಾಗುತ್ತದೆಎಂದು ಹೇಳಿದರು.

ನಗರದ ನಾಗರೀಕರು ಹಸಿ ಕಸ, ಒಣ ಕಸ ವಿಂಗಡಿಸಿ ಕಸದಗಾಡಿಗೆ ಹಾಕಿದ ಪರಿಣಾಮ ಕಸ ವಿಲೇವಾರಿಯಿಂದ ನಗರಸಭೆಗೆ 10.50 ಲಕ್ಷರೂಆದಾಯ ಬಂದಿದೆ, ಇದಕ್ಕೆ ಸಾರ್ವಜನಿಕರ ಸಹಬಾಗಿತ್ವಕಾರಣಎಂದರು.

ಪೌರಾಯುಕ್ತ ಬಿ.ಸಿ ಬಸವರಾಜ್ ಮಾತನಾಡಿ ಹೋಟೆಲ್ ಮಾಲೀಕರು ಸ್ವಚ್ಚತೆ ಬಗ್ಗೆ ಗಮನ ಹರಿಸುವಂತೆ ನಗರಸಭೆಯಲ್ಲಿ ಸಭೆ ನಡೆಸಿ ಜಾಗೃತಿ ಮೂಡಿಸಲಾಗುತ್ತದೆ, ಗ್ರಾಹಕರ ಅನುಕೂಲಕ್ಕೆ ತಕ್ಕಂತೆ ಹೋಟೆಲ್‌ನಲ್ಲಿ ಸ್ವಚ್ಚತೆಕಾಪಾಡಿಎಂದು ತಿಳಿಸಿದರು.

ಪ್ಲಾಸ್ಟಿಕ್ ಕವರುಗಳಲ್ಲಿ ಆಹಾರ ಪದಾರ್ಥಗಳನ್ನು ಪಾರ್ಸಲ್‌ಕೊಡುತ್ತಿರುವುದರಿಂದಕ್ಯಾನ್ಸರ್ ಬರುವ ಸಾದ್ಯತೆಇದ್ದು, ತಕ್ಷಣ ಹೋಟೆಲ್ ಮತ್ತು ಲಾಡ್ಜ್‌ಗಳಲ್ಲಿ ಪ್ಲಾಸ್ಟಿಕ್ ಬಾಟೆಲ್‌ಗಳನ್ನು ಸಂಪೂರ್ಣ ನಿಷೇದಿಸಿ ಸಹಕರಿಸಬೇಕೆಂದು ಹೇಳಿದರು.ಲಾಡ್ಜ್, ಹೋಟೆಲ್, ಅಪಾರ್ಟ್‌ಮೆಂಟ್‌ನಲ್ಲಿ ನಗರಸಭೆ ನಿಬಂಧನೆಗಳನ್ನು ಪಾಲನೆ ಮಾಡುತ್ತಿಲ್ಲ, ಜೊತೆಗೆ ಪರವಾನಗಿಯನ್ನು ಪಡೆದುಕೊಂಡಿಲ್ಲ, ಸೂಚನೆ ಪತ್ರಕೊಡಲು ಅವಕಾಶ ಕೊಡದೆಅರ್ಜಿಯನ್ನು ಸಲ್ಲಿಸಿದ 1 ವಾರದಲ್ಲಿ ಪರವಾನಿಗೆಕೊಡುತ್ತೇವೆಎಂದರು.

ಹೋಟೆಲ್‌ನಲ್ಲಿಉತ್ಪತ್ತಿಯಾಗುವತ್ಯಾಜ್ಯವನ್ನು ಹಸಿ ಕಸ, ಒಣಕಸವನ್ನಾಗಿ ವಿಂಗಡಿಸಿ ನೀಡುವ ಮೂಲಕ ನಗರಸಭೆಯೊಂದಿಗೆ ಕೈ ಜೊಡಿಸಬೇಕೆಂದು ಮನವಿ ಮಾಡಿದರು.

ಸ ' ಂ ಚ ಾ ರ ಿ ಠ ಾ ಣ ' ಪೊಲೀಸ್‌ಅಧಿಕಾರಿಧನಂಜಯ ಮಾತನಾಡಿ ನಗರದಲ್ಲಿಎಲ್ಲಾ ರಸ್ತೆಗಳು ಕಿರಿದಾಗಿದ್ದು, ವಾಹನ ನಿಲುಗಡೆಯಿಂದ ವಾಹನಗಳ ಸಂಚಾರಕ್ಕೆತೊಂದರೆಯಾಗುತ್ತಿದೆ, ಐಜಿ ರಸ್ತೆ, ಎಂಜಿರಸ್ತೆಯಲ್ಲಿ ವಾಹನ ನಿಲುಗಡೆ ಮಾಡದೆ ಲಾಡ್ಜ್ ಮತ್ತು ಹೋಟೆಲ್‌ನಲ್ಲಿತಂಗಿರುವವರು ಅಲ್ಲಿಯೇ ಪಾರ್ಕಿಂಗ್ ಮಾಡಿಕೊಳ್ಳಿ ಎಂದು ಸಲಹೆ ನೀಡಿದರು.

ಇತ್ತೀಚೆಗೆ ನಗರದರಸ್ತೆಯಎರಡೂ ಬದಿಗಳಲ್ಲಿ ಪಾರ್ಕಿಂಗ್ ಮಾಡಲು ಅವಕಾಶ ನೀಡಲಾಗಿದೆ, ದ್ವಿ–ಚಕ್ರ, ನಾಲ್ಕು ಚಕ್ರ ವಾಹನಗಳ ನಿಲುಗಡೆಗೆಅಂತರ ನೀಡಲಾಗಿದ್ದು, ನಿಯಮ ಉಲ್ಲಂಘಿಸಿ ಅಡ್ಡಾದಿಡ್ಡಿ ವಾಹನ ನಿಲುಗಡೆ ಮಾಡುವವರ ವಿರುದ್ಧಕಠಿಣಕ್ರಮ ಕೈಗೊಳ್ಳುವುದಾಗಿ ಎಚ್ಚರಿಸಿದರು.ಶಿಕ್ಷಣ, ಪರಿಸರ, ಸಂಚಾರಿ ನಿಯಮಗಳ ಪಾಲನೆ ಬಗ್ಗೆ ಅರಿವು ಮೂಡಿಸುವ ವಿವಿಧರೀತಿಯ ಕಾರ್ಯಕ್ರಮಗಳನ್ನು ಪೊಲೀಸ್ ಇಲಾಖೆ ಆಯೋಜನೆ ಮಾಡುವ ಮೂಲಕ ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರಲ್ಲಿಜಾಗೃತಿ ಮೂಡಿಸುತ್ತಿದೆಎಂದರು.

# ಇಂದು ವಿಶ್ವ ಬಾಲಕಾರ್ಮಿಕ ವಿರೋಧಿ ದಿನದ ಬಗ್ಗೆ ಕಾನೂನು ಅರಿವು

**ಚಿಕ್ಕಮಗಳೂರು:** ವಿಶ್ವ ಬಾಲ ಕಾರ್ಮಿಕ ವಿರೋಧಿ ದಿನದ ಅಂಗವಾಗಿ ಕಾನೂನು ಅರಿವು ಕಾರ್ಯಕ್ರಮವು ಜೂನ್ 12 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಮಲೆನಾಡು ವಿದ್ಯಾಸಂಸ್ಥೆಯ ಶ್ರೀಮತಿ ಸುಂದರಮ್ಮ ಶಂಕರಮೂರ್ತಿ ಸಭಾಂಗಣದಲ್ಲಿ ನಡೆಯಲಿದೆ.

ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ರಾಜೇಶ್ವರಿ ಎನ್.ಹೆಗಡೆ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸೊಸೈಟಿಯ ಅಧ್ಯಕ್ಷರಾದ ಜಿಲ್ಲಾಧಿಕಾರಿ ಮೀನಾ ನಾಗರಾಜ್ ಸಿ.ಎನ್. ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಜಿ.ಪಂ. ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಎಚ್. ಎಸ್.ಕೀರ್ತನಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಕ್ರಮ್ ಅಮಟೆ, ಗೌರವಾನ್ವಿತ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ವಿ.ಹನುಮಂತಪ್ಪ, ಸಹಾಯಕ ಕಾರ್ಮಿಕ ಆಯುಕ್ತ ಹಾಗೂ ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸೊಸೈಟಿಯ ಸದಸ್ಯ ಕಾರ್ಯದರ್ಶಿ ಸುಭಾಷ್ ಎಂ.ಆಲದಕಟ್ಟಿ, ವಕೀಲರ ಸಂಘದ ಅಧ್ಯಕ್ಷ ಡಿ.ಬಿ.ಸುಚೇಂದ್ರ, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷೆ ಕೆ.ಆರ್.ಜಯಶೀಲಾ, ಪೌರಾಯುಕ್ತ ಬಿ.ಸಿ.ಬಸವರಾಜ್, ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಹೆಚ್.ಎಸ್.ಅಶ್ವತ್ಥ್‌ಬಾಬು, ಜಿಲ್ಲಾ ಕಾರ್ಮಿಕ ಅಧಿಕಾರಿ ಬಿ.ಸಿ.ಸುರೇಶ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಜೆ.ಮಂಜೇಗೌಡ, ಇದೇ ಸಂದರ್ಭದಲ್ಲಿ ಗೌರವಾನ್ವಿತ ಹಿರಿಯ ಸಿವಿಲ್ ನ್ಯಾಯಾಧೀಶ ವಿ.ಹನುಮಂತಪ್ಪ ಅವರು ಬಾಲ ಮತ್ತು ಕಿಶೋರಾವಸ್ಥೆ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ–1986 (ತಿದ್ದುಪಡಿ ಕಾಯ್ದೆ–2016) ಈ ಕುರಿತು ಉಪನ್ಯಾಸ ನೀಡಲಿದ್ದಾರೆ.

# ಏಕಗವಾಕ್ಷಿ ಸಮಿತಿ–ಕೈಗಾರಿಕಾ ಸ್ಪಂದನ ಸಭೆ

**ಚಿಕ್ಕಮಗಳೂರು:** ಜಿಲ್ಲಾ ಮಟ್ಟದ ಏಕಗವಾಕ್ಷಿ ಸಮಿತಿ ಸಭೆ ಮತ್ತು ಕೈಗಾರಿಕಾ ಸ್ಪಂದನ ಸಭೆಯು ಜಿಲ್ಲಾಧಿಕಾರಿ ಮೀನಾ ನಾಗರಾಜ್ ಸಿ.ಎನ್. ಅವರ ಅಧ್ಯಕ್ಷತೆಯಲ್ಲಿ ಜೂನ್ 13 ರಂದು ಮಧ್ಯಾಹ್ನ 3 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆಯಲಿದೆ.

ಜಿಲ್ಲೆಯ ಕೈಗಾರಿಕೋದ್ಯಮಿಗಳು ತಮ್ಮ ಮನವಿ, ಅಹವಾಲುಗಳಿದ್ದಲ್ಲಿ ಜೂನ್ 12 ರೊಳಗೆ ಲಿಖಿತ ರೂಪದಲ್ಲಿ ನಗರದ ಜಿಲ್ಲಾ ಕೈಗಾರಿಕಾ ಕೇಂದ್ರದ ಕಚೇರಿಗೆ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗೆ ಜಿಲ್ಲಾ ಕೈಗಾರಿಕಾ ಕೇಂದ್ರ (08262-295821) ವನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು ಎಂದು ಕೇಂದ್ರದ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಶ್ವಕರ್ಮ ಯೋಜನೆಯಡಿ ಫಲಾನುಭವಿಗಳಿಗೆ 18.40 ಕೋಟಿ ರೂ.-ಸಂಸದರು

**ಚಿಕ್ಕಮಗಳೂರು, ಜೂ. 11:** ಜಿಲ್ಲೆಯಲ್ಲಿ ವಿಶ್ವಕರ್ಮ ಯೋಜನೆಯಡಿ 18,40,59,000 ರೂ.ಗಳನ್ನು ಫಲಾನುಭವಿಗಳ ಖಾತೆಗೆ ಜಮಾ ಮಾಡಲಾಗಿದೆ ಎಂದು ಉಡುಪಿ-ಚಿಕ್ಕಮಗಳೂರು ಕ್ಷೇತ್ರದ ಸಂಸದ ಕೋಟ ಶ್ರೀನಿವಾಸ ಪೂಜಾರಿ ತಿಳಿಸಿದರು.

ನಗರಸಭೆ ಸಭಾಂಗಣದಲ್ಲಿ ಇಂದು ಬೆಳಿಗ್ಗೆ ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಪ್ರಧಾನ ಮಂತ್ರಿಯವರ ವಿಶ್ವಕರ್ಮ ಯೋಜನೆಯಡಿ ಫಲಾನುಭವಿಗಳಿಗೆ ಟೂಲ್‌ಕಿಟ್ ವಿತರಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಪ್ರಥಮ ಹಂತದಲ್ಲಿ 1704 ಜನರಿಗೆ ತಲಾ ಒಂದು ಲಕ್ಷ ರೂ.ನಂತೆ ಸಾಲ ವಿತರಿಸಲಾಗಿದೆ. 619 ಜನರಿಗೆ ಟೂಲ್‌ಕಿಟ್‌ಗಳನ್ನು ವಿತರಿಸಲಾಗಿದೆ. ಇನ್ನೂ 5803 ಜನರಿಗೆ ಟೂಲ್‌ಕಿಟ್ ಮತ್ತು ಸಾಲ ವಿತರಣೆ ಮಾಡಬೇಕಾಗಿದೆ. ಅಂಚೆ ಇಲಾಖೆ ಮೂಲಕ ಕೂಡ ಟೂಲ್‌ಕಿಟ್ ವಿತರಣೆಗೆ ಕ್ರಮ ಕೈಗೊಳ್ಳಲಾಗಿದೆ ಎಂದು ಅವರು ತಿಳಿಸಿದರು.

ವೃತ್ತಿಪರ ಕಸುಬುಗಳಿಗೆ ಪೂರಕವಾಗಿ ತರಬೇತಿ ನೀಡಿ ಶೇ.5ರ ಬಡ್ಡಿ ದರದಲ್ಲಿ ತಲಾ ಒಂದು ಲಕ್ಷ ರೂ. ಸಾಲದ ವ್ಯವಸ್ಥೆ ಕಲ್ಪಿಸಿ, ಆರ್ಥಿಕ ಶಕ್ತಿಯೊಂದಿಗೆ 15 ಸಾವಿರ ರೂ. ಮೌಲ್ಯದ ಅಗತ್ಯ ಸಲಕರಣೆಗಳನ್ನು ಒದಗಿಸಿ ಉತ್ತೇಜಿಸುವ ಮೂಲಕ ಸ್ವಂತ ಉದ್ಯೋಗದ ಮೇಲೆ ಬದುಕು ಕಟ್ಟಿಕೊಳ್ಳಲು ಅವಕಾಶ ಕಲ್ಪಿಸಬೇಕೆನ್ನುವ ಉದ್ದೇಶದಿಂದ ಪ್ರಧಾನ ಮಂತ್ರಿಯವರು ವಿಶ್ವಕರ್ಮ ಯೋಜನೆಯನ್ನು ಘೋಷಣೆ ಮಾಡಿದ್ದಾರೆ. ಕಮ್ಮಾರಿಕೆ, ಚಮ್ಮಾರಿಕೆ, ಕುಂಬಾರಿಕೆ, ಮೀನುಗಾರಿಕೆ ಮತ್ತು ಗಾರೆ ಕೆಲಸ. ವಿಶ್ವಕರ್ಮ ಸಮುದಾಯದವರು ನಿರ್ವಹಿಸುವ ಬಡಗಿ ಕೆಲಸವೂ ಸೇರಿದಂತೆ 18 ಕಸುಬುಗಳು ಈ ಯೋಜನೆಯಲ್ಲಿ ಸೇರಿವೆ. ಈಗಾಗಲೇ ಈ ಯೋಜನೆಗೆ ಸಂಬಂಧಿಸಿದಂತೆ ಬ್ಯಾಂಕ್‌ಗಳಿಗೆ 13 ಸಾವಿರ ಕೋಟಿ ರೂ.ಗಳ ಭದ್ರತೆಯನ್ನು ಒದಗಿಸಲಾಗಿದೆ ಎಂದು ತಿಳಿಸಿದರು.

ಮೊದಲಿಗೆ ಬ್ಯಾಂಕ್‌ಗಳು ಸಾಲ ವಿತರಿಸಲು ಸಿಬಿಲ್ ಸಮಸ್ಯೆಯನ್ನು ಮುಂದಿಟ್ಟಾಗ, ಮಧ್ಯೆ ಪ್ರವೇಶಿಸಿದ



ರಿಸರ್ವ್ ಬ್ಯಾಂಕ್ ಸಿಬಿಲ್‌ಗೂ ವಿಶ್ವಕರ್ಮ ಯೋಜನೆಗೂ ಸಿಬಿಲ್‌ಗೂ ಸಂಬಂಧವಿಲ್ಲವೆಂದು ಘೋಷಿಸಿದ ಹಿನ್ನೆಲೆಯಲ್ಲಿ ಬ್ಯಾಂಕ್‌ಗಳು ಸಾಲ ಒದಗಿಸುತ್ತಿವೆ ಎಂದು ತಿಳಿಸಿದರು.

ಹಿಂದೆ ಗ್ರಾಮ ಗ್ರಾಮಗಳಲ್ಲಿ ಕುಂಬಾರಿಕೆ ಕುಲಕಸುಬಾಗಿತ್ತು. ಆದರೆ ಇಂದು ಅಡುಗೆಗೆ ಬಳಕೆಯಾಗುವ ಮಡಿಕೆಗಳಿಗೆ ಬದಲಾಗಿ ಅಲಂಕಾರಿಕ ಮಡಿಕೆಗಳನ್ನು ತಯಾರಿಸಲಾಗುತ್ತಿದೆ. ಅದು ರಾಜ್ಯ, ರಾಷ್ಟ್ರ ಮಾತ್ರವಲ್ಲದೆ ವಿದೇಶಗಳಿಗೂ ರಫ್ತಾಗುವ ಹಂತದಲ್ಲಿದೆ. ಕ್ಷೌರಿಕ ವೃತ್ತಿಯಲ್ಲಿ ವಯಸ್ಸಾಗಿರುವವರು ಆಧುನಿಕತೆಗೆ ಒಗ್ಗಿಕೊಳ್ಳುವುದಕ್ಕೆ ತರಬೇತಿ ನೀಡಲಾಗುವುದು. ಮೀನುಗಾರಿಕೆ ಹಾಗೂ ಗಾರೆ ಕೆಲಸಗಾರರಿಗೆ ಕೂಡ ತರಬೇತಿ ನೀಡಲಾಗುವುದು. ಈ ಯೋಜನೆಯ ಸೌಲಭ್ಯವನ್ನು ವೃತ್ತಿಪರ ಕಸುಬುದಾರರು ಸದುಪಯೋಗಪಡಿಸಿಕೊಳ್ಳಬೇಕು ಎಂದರು.

ಸಮಾರಂಭದಲ್ಲಿ ಶಾಸಕರಾದ ಹೆಚ್.ಡಿ.ತಮ್ಮಯ್ಯ, ವಿಧಾನ ಪರಿಷತ್ ಸದಸ್ಯರಾದ ಎಸ್.ಎಲ್.ಭೋಜೇಗೌಡ, ಸಿ.ಟಿ.ರವಿ, ಉಪಾಧ್ಯಕ್ಷೆ ಅನು ಮಧುಕರ್, ಸದಸ್ಯರು, ಹೆಚ್.ಸಿ.ಕಲ್ಮರುಡಪ್ಪ, ಪೌರಾಯುಕ್ತ ಬಿ.ಸಿ.ಬಸವರಾಜ್, ಅಂಚೆ ಇಲಾಖೆ, ಕೈಗಾರಿಕಾ ಇಲಾಖೆ, ಕೌಶಲ್ಯಾಭಿವೃದ್ಧಿ ಇಲಾಖೆಯ ಅಧಿಕಾರಿಗಳು ಕಾರ್ಯಕ್ರಮದಲ್ಲಿದ್ದರು.

11ಸಿಕೆಎಂ1: ನಗರಸಭೆ ಸಭಾಂಗಣದಲ್ಲಿ ಇಂದು ಬೆಳಿಗ್ಗೆ ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಪ್ರಧಾನ ಮಂತ್ರಿಯವರ ವಿಶ್ವಕರ್ಮ ಯೋಜನೆಯಡಿ ಫಲಾನುಭವಿಗಳಿಗೆ ಸಂಸದ ಕೋಟ ಶ್ರೀನಿವಾಸ ಪೂಜಾರಿ ಟೂಲ್‌ಕಿಟ್ ವಿತರಿಸಿದರು.

## ಜೂ.12 ರಂದು ವಿಶ್ವ ಬಾಲಕಾರ್ಮಿಕ ವಿರೋಧಿ ದಿನದ ಬಗ್ಗೆ ಕಾನೂನು ಅರಿವು

ಚಿಕ್ಕಮಗಳೂರು, ಜೂ. 10: ವಿಶ್ವ ಬಾಲ ಕಾರ್ಮಿಕ ವಿರೋಧಿ ದಿನದ ಅಂಗವಾಗಿ ಕಾನೂನು ಅರಿವು ಕಾರ್ಯಕ್ರಮವು ಜೂನ್ 12 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಮಲೆನಾಡು ವಿದ್ಯಾಸಂಸ್ಥೆಯ ಶ್ರೀಮತಿ ಸುಂದರಮ್ಮ ಶಂಕರಮೂರ್ತಿ ಸಭಾಂಗಣದಲ್ಲಿ ನಡೆಯಲಿದೆ.

ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ರಾಜೇಶ್ವರಿ ಎನ್.ಹೆಗಡೆ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸೊಸೈಟಿಯ ಅಧ್ಯಕ್ಷರಾದ ಜಿಲ್ಲಾಧಿಕಾರಿ ಮೀನಾ ನಾಗರಾಜ್ ಸಿ.ಎನ್. ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಜಿ.ಪಂ. ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಎಚ್.ಎಸ್.ಕೀರ್ತನಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿಕ್ರಮ್ ಅಮಟೆ, ಗೌರವಾನ್ವಿತ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ವಿ.ಹನುಮಂತಪ್ಪ, ಸಹಾಯಕ ಕಾರ್ಮಿಕ ಆಯುಕ್ತ ಹಾಗೂ ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸೊಸೈಟಿಯ ಸದಸ್ಯ ಕಾರ್ಯದರ್ಶಿ ಸುಭಾಷ್ ಎಂ.ಆಲದಕಟ್ಟಿ, ವಕೀಲರ ಸಂಘದ ಅಧ್ಯಕ್ಷ ಡಿ.ಬಿ.ಸುಜೇಂದ್ರ, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷೆ ಕೆ.ಆರ್.ಜಯಶೀಲಾ, ಪೌರಾಯುಕ್ತ ಬಿ.ಸಿ.ಬಸವರಾಜ್, ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ಜಿ. ಕೆ.ಪುಟ್ಟರಾಜು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ಮಹಾಂತೇಶ್ ಭಜಂತ್ರಿ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕಿ ಬಿ. ಮಾಲತಿ, ಪಾಲ್ಗೊಳ್ಳುವರು.

# ಕಟ್ಟೆ ಮೇಲೆ ಕುಳಿತ ಅಪರಿಚಿತ ಹಿರಿಯರ ಜೊತೆ ಮಕ್ಕಳ ಭಾಂದವ್ಯ

**ಚಿತ್ರದುರ್ಗ :** ಮಕ್ಕಳಿಗೆ ಮನೆಯಲ್ಲಿ ಅಜ್ಜ ಅಜ್ಜಿಯರು, ಅಕ್ಕ-ತಂಗಿಯರು, ಅಣ್ಣತಮ್ಮಂದಿರು, ಚಿಕ್ಕಪ್ಪ ಚಿಕ್ಕಪ್ಪಂದಿರು, ಒಟ್ಟು ಕುಟುಂಬದ ಸದಸ್ಯರು ಸಿಗಲಾರದೆ ಮಕ್ಕಳು ಬೀದಿಬದಿಯಲ್ಲಿ ಕುಳಿತಂತ ವಯಸ್ಸಾದವರನ್ನೇ, ಅಜ್ಜ ಅಜ್ಜಿಯರನ್ನಾಗಿ ಮಾಡಿಕೊಂಡು, ಅವರ ಜೊತೆ ಕುಳಿತು, ಸಂಭಾಷಣೆ ಮಾಡಿ, ಜೀವನ ನಿರ್ವಹಿಸುತ್ತಿರುವ ದೃಶ್ಯವನ್ನು ನಾವು ಈಗ ಸಮಾಜದಲ್ಲಿ , ಮತ್ತೆ ನೋಡುವ ಪರಿಸ್ಥಿತಿ ಬಂದಿದೆ, ಮಕ್ಕಳನ್ನ ಹಿರಿಯರಿಂದ ದೂರ ಮಾಡುವುದು, ಒಂಟಿ ಮನೆಗಳನ್ನು ಮಾಡಿಕೊಳ್ಳುವುದು, ಒಂಟಿಯಾಗಿ ವಾಸ ಮಾಡಿಕೊಳ್ಳುವುದು, ಇದು ಯಾವುದೂ ಸಹ ಪ್ರಕೃತಿ ನಿಯಮ ಅಲ್ಲ ಎಂಬುದನ್ನ, ಮಕ್ಕಳೇ ಹಿರಿಯರಲ್ಲಿ ಜಾಗೃತಿ ಮೂಡಿಸುತ್ತಿರುವುದು ಆಶ್ಚರ್ಯ ತರುತ್ತದೆ ಎಂದು ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಡಾ. ಎಚ್.ಕೆ.ಎಸ್. ಸ್ವಾಮಿಯವರು ಅವರು ತಿಳಿಸಿದರು .

ಅವರು ತಳಬಾಳು ನಗರದಲ್ಲಿ ಶಾಕುಂತಲ ಬಿಲ್ಡಿಂಗಿನ ಕಟ್ಟೆ ಮೇಲೆ ದಿನನಿತ್ಯ ಕುಳಿತು ಸಮಯ ಕಳೆಯುತ್ತಿರುವ ಹಿರಿಯರ ಜೊತೆ, ಅಕ್ಕ ಪಕ್ಕದ ಮನೆಯ ಮಕ್ಕಳು ಬಂದು, ಅವರ ಜೊತೆ ಮಾತುಕತೆಯನ್ನು ಹಾಡಿ, ಹಾಡುತ್ತಾ, ಆಟವಾಡುತ್ತಾ ಕುಳಿತಿರುವ ದೃಶ್ಯವನ್ನು ನೋಡಿ ಜನರಲ್ಲಿ ಜಾಗೃತಿ ಮೂಡಿಸಿದರು.

ನಾವು ಎಷ್ಟೇ ದೂರ ಹೋದರು ಸಹ, ಮಕ್ಕಳ



ಹೃದಯದಲ್ಲಿ ಇನ್ನೂ ಪ್ರೀತಿ, ಪ್ರೇಮಗಳು ನಲಿದಾಡುತ್ತಿವೆ, ಒಬ್ಬರನ್ನ ಒಬ್ಬರು ಸಹಿಸಿಕೊಂಡು ಬದುಕಬೇಕು ಎಂಬ ಸಂದೇಶವನ್ನು, ಮುಂದಿನ ಜನಾಂಗಕ್ಕೆ ಕಳಿಸುತ್ತಿರುವುದು ಮಕ್ಕಳೇ ಆಗಿದ್ದಾರೆ. ಹಿರಿಯರು ಬರೀ ಹಣ ಗಳಿಕೆಯಲ್ಲಿ ಜೀವನವನ್ನು ದೂಡುತ್ತಿದ್ದು, ಕುಟುಂಬದ ಸದಸ್ಯರನ್ನು ಬಿಟ್ಟು ದೂರ ದೂರ ಹೋಗಿ, ಜೀವನ ಮಾಡಿ, ಹಣ ಸಂಪಾದನೆ ಮುಖ್ಯ ಗುರಿಯಾಗಿಟ್ಟುಕೊಂಡು, ಬದುಕು ಸಾಗಿಸುತ್ತಿರುವುದು ಪ್ರಕೃತಿ ನಿಯಮಕ್ಕೆ ವಿರುದ್ಧವಾಗಿದೆ ಎಂದರು.

ಇನ್ನಾದರೂ ಜನರು ತಮ್ಮ ಕುಟುಂಬದ ಸದಸ್ಯರುಗಳ ಜೊತೆ ಒಂದಾಗಿ, ಬದುಕುವುದನ್ನು ರೂಢಿ ಮಾಡಿಕೊಂಡು, ಸಮಾಜವನ್ನು ಭದ್ರ ಪಡಿಸಬೇಕಾಗಿದೆ. ಮನುಷ್ಯ ಸಂಘ ಜೀವಿಯಾಗಿದ್ದು, ಆತನನ್ನ ಒಂ-ಟಿಯಾಗಿ ಬೆಳೆಸುವುದು ಕಷ್ಟಕರವಾಗಿದೆ. ಮಕ್ಕಳಿಗೆ ಹಿರಿಯರ ಜೊತೆ ಸಂಭಾಷಣೆ ಮಾಡಿ ಸಮಯ ಕಳೆಯುವಷ್ಟು, ತಂದೆ ತಾಯಿಗಳು ನೀಡುತ್ತಿಲ್ಲ, ಹಾಗಾಗಿ ರಸ್ತೆ ಬದಿಯಲ್ಲಿ ಕುಳಿತ ಹಿರಿಯರ ಜೊತೆ, ಮಕ್ಕಳು ಹೋಗಿ ತಮ್ಮ ಭಾವನೆಗಳನ್ನು ಹಂಚಿಕೊಂಡು, ಅವರು ಹೇಳುವ ಕಥೆಗಳನ್ನ, ಆಟಗಳನ್ನು, ಅನುಭವಗಳನ್ನ, ಯೋಚನೆಗಳನ್ನು, ಮಾಹಿತಿಯನ್ನ ತಿಳಿದುಕೊಂಡು, ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳುತ್ತಿರುವುದು ಉತ್ತಮವಾದ ಲಕ್ಷಣ. ಗಾಂಧೀಜಿಯವರ ಕಾಲದಲ್ಲೂ ಸಹ ಗಾಂಧೀಜಿಯವರು ಸಮಾಜವನ್ನೇ ಕುಟುಂಬ ಮಾಡಿಕೊಳ್ಳಿ, ಕುಟುಂಬವನ್ನು ವಿಸ್ತರಿಸಿಕೊಳ್ಳಿ, ಬೇರೆಯವರನ್ನು ಸಹ ನಿಮ್ಮ ಬಾಂಧವ್ಯರಂತೆ ಪ್ರೀತಿಸಿ, ಸಮಾಜವನ್ನು ಸುಸ್ಥಿತಿಯಲ್ಲಿ ಇಡಿ.

ಬಡಿದಾಡಿದ್ದು, ಜಗಳವಾಡುವುದು, ಘರ್ಷಣೆ ಮಾಡಿಕೊಳ್ಳುವುದು, ಹಿಂಸೆ ಮಾಡುವುದನ್ನು ತೊರೆದು, ಮಾನವ ಪ್ರೀತಿಯಿಂದ ಬದುಕುವ ಪ್ರಪಂಚವನ್ನಾಗಿ ಸಿದ್ದರು. ಎಲ್ಲರೂ ಒಗ್ಗಟ್ಟಾಗಿ ಬದುಕಿ, ಹಿಂದೂ ಇರಲಿ, ಮುಸ್ಲಿಂ ಇರಲಿ, ಕ್ರಿಶ್ಚಿಯನ್ ಇರಲಿ, ಪಾರ್ಸಿಯಿರಲಿ, ಎಲ್ಲರೂ ಸಹೋದರರಂತೆ ಬದುಕಬೇಕು ಎಂಬುವ ಸಂದೇಶವನ್ನು ಸ್ವತಂತ್ರ ಸಂಗ್ರಾಮದಲ್ಲಿ ತೋರಿಸಿಕೊಟ್ಟಿದ್ದರು ಎಂದರು.

ಅದೇ ರೀತಿ ಈಗಲೂ ಸಹ ನಾವು ಜನರಲ್ಲಿ ಸ್ವಾರ್ಥವನ್ನು ತೊರೆದು, ಒಗಟ್ಟಾಗಿ ಬದುಕಿ, ಒಬ್ಬರಿಗೊಬ್ಬರು ಸಹಕಾರ ನೀಡಿ ನಿಸ್ವಾರ್ಥತೆಯಿಂದ ದೇಶ ಸೇವೆ ಮಾಡಿ ಎಂದು ಕರೆ ನೀಡಬೇಕಾಗಿದೆ, ತುಂಬಾ ಓದಿದ ಯುವ ಜನಾಂಗ ದೇಶ ಬಿಟ್ಟು ಹೊರ ಹೋಗಿ, ತಂದೆ ತಾಯಿಗಳನ್ನ ತೊರೆದು ದೂರ ಹೋಗಿರುವುದರಿಂದ, ತುಂಬಿತುಳುಕುತ್ತಿದ್ದ ಕುಟುಂಬಗಳು ಈಗ ಖಾಲಿ ಖಾಲಿಯಾಗಿ, ಮನೆಗಳಲ್ಲಿ ಒಬ್ಬರೇ ಹಿರಿಯರು, ತಂದೆಯು ತಾಯಿಯರು ಬದುಕುವಂತ ಪರಿಸ್ಥಿತಿ ನಿರ್ಮಾಣವಾಗಿದೆ. ಇದನ್ನ ನಿವಾರಿಸುವ ನಿಟ್ಟಿನಲ್ಲಿ ಜನರು ಪ್ರಯತ್ನ ಮಾಡಬೇಕು, ಗ್ರಾಮದಲ್ಲಿರುವಷ್ಟು ಒಗ್ಗಟ್ಟು ಮತ್ತು ಕುಟುಂಬ ಸಹಕಾರ, ನಗರದಲ್ಲಿ ಕಾಣೆಯಾಗಿದೆ. ನಗರದಲ್ಲಿ ದೊಡ್ಡ ದೊಡ್ಡ ಒಂಟಿ ಮನೆಗಳನ್ನು ನೋಡಿದರೆ, ಯಾರಿಗಾದರೂ ಹೊಟ್ಟೆ ಉರಿಯುತ್ತದೆ, ಅಷ್ಟು ದೊಡ್ಡ ಮನೆಗಳಲ್ಲಿ ಸಹ ಜನಸಂಖ್ಯೆ ಇಲ್ಲದೆ ಖಾಲಿ ಹೊಡೆಯುತ್ತಿದ್ದು, ಮಕ್ಕಳಲ್ಲ ದೂರ ದೂರದ ಊರಿಗೆ ಹೋಗಿ, ನಗರಗಳಲ್ಲಿ ಜೀವನ ಮಾಡುತ್ತಿರುವುದರಿಂದ, ಸಣ್ಣ ನಗರದಲ್ಲಿರುವ ಮನೆಗಳು ಖಾಲಿಯಾಗುತ್ತಿವೆ. ಎಷ್ಟೋ ಕಟ್ಟಿದ ಮನೆಗಳು ಖಾಲಿಯಾಗಿ, ಬದುಕಲು ಜನರಿಲ್ಲದಂತಾಗಿದೆ, ಇನ್ನೊಂದಿಷ್ಟು ಜನ, ಮನೆ ಇಲ್ಲದೆ ಸ್ಲಂ ಗಳಲ್ಲಿ ವಾಸವಾಗಿದ್ದು, ತಮ್ಮ ಜೀವನವನ್ನು ರೂಪಿಸಿಕೊಳ್ಳಲು, ಪ್ರಯತ್ನಿಸುತ್ತಿದ್ದಾರೆ. ಈ ಅಸಮಾನತೆಯನ್ನು ನಿವಾರಿಸಲು ಮತ್ತೆ ಗ್ರಾಮೀಣ ಜನರ ಉದ್ಯೋಗಗಳಿಗೆ ಪ್ರೋತ್ಸಾಹ ನೀಡಿ, ಜನರನ್ನ ದೂರ ದೂರ ವಲಸೆ ಹೋಗುವುದನ್ನು ತಡೆಯಬೇಕಾಗಿದೆ ಎಂದು ಪತ್ರಿಕಾ ಪ್ರಕಟಣೆ ಮುಖಾಂತರ ವಿನಂತಿಸಿಕೊಂಡಿದ್ದಾರೆ.

# ಕಾಫಿನಾಡು ಜಿಲ್ಲೆಯಲ್ಲಿ ಮುಂಗಾರು ಮಳೆ ಬಿರುಸು-ಅಗತ್ಯ ಮುಂಜಾಗ್ರತಾ ಕ್ರಮ : ಎಸ್ಪಿ

**ಚಿಕ್ಕಮಗಳೂರು:** ಜಿಲ್ಲೆಯ ಮಲೆನಾಡು ಹಾಗೂ ಪಶ್ಚಿಮಘಟ್ಟ ಪ್ರದೇಶದಲ್ಲಿ ಮುಂಗಾರು ಬಿರುಸುಗೊಂಡಿದ್ದು, ಭಾರೀ ಮಳೆಯಾಗುತ್ತಿರುವ ಹಿನ್ನಲೆಯಲ್ಲಿ ಜಿಲ್ಲಾ ಪೊಲೀಸ್ ಇಲಾಖೆ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳಿಗೆ ಮುಂದಾಗಿದ್ದು, ಪ್ರಮುಖವಾಗಿ ಪ್ರವಾಸಿಗರು ಇಲಾಖೆ ಸೂಚನೆಗಳನ್ನು ತಪ್ಪದೇ ಪಾಲಿಸಬೇಕು ಎಂದು ಎಸ್ಪಿ ಡಾ. ವಿಕ್ರಮ ಅಮಟೆ ಸೂಚಿಸಿದ್ದಾರೆ.

ವಿಶೇಷವಾಗಿ ಪ್ರವಾಸಿ ತಾಣಗಳು ಹಾಗೂ ಜಲಪಾತಗಳ ಬಳಿ ವಿಪರೀತ ಮಳೆ ಬೀಳುತ್ತಿದ್ದು ಮಳೆಯ ಸಮಯದಲ್ಲಿ, ಜಲಪಾತಗಳು ಅಪಾಯಕಾರಿಯಾಗುವ ಸಾಧ್ಯತೆ ಇರುವುದರಿಂದ ಪ್ರವಾಸಿಗರು, ಸಂದರ್ಶಕರು ತೀವ್ರ ಎಚ್ಚರಿಕೆ ವಹಿಸಬೇಕು ಎಂದು ತಿಳಿಸಿದ್ದಾರೆ.

ವೇಗವಾಗಿ ಹರಿಯುವ ನೀರು, ಜಾರುವ ಮೇಲ್ಮೈಗಳು ಮತ್ತು ಮಂಜು ಕವಿದ ವಾತಾವರಣದಿಂದ ಅಪಘಾತಗಳು ಸಂಭವಿಸಿ ಸಾವುನೋವುಗಳಿಗೆ ಕಾರಣವಾಗಬಹುದು. ಜಾರುವ ಭೂಪ್ರದೇಶ, ಪಾಚಿ ಗಟ್ಟಿರುವ ಸ್ಥಳಗಳು ಹಾಗೂ ಒದ್ದೆಯಾದ ಮೇಲ್ಮೈಗಳು ಜಾರುವಿಕೆ ಮತ್ತು ಬೀಳುವಿಕೆಗೆ ಕಾರಣವಾಗಬಹುದು ಇಂತಹ ಕಡೆಗಳಲ್ಲಿ ಎಚ್ಚರದಿಂದಿರಬೇಕು ಎಂದು ತಿಳಿಸಿದ್ದಾರೆ.

**ಪ್ರವಾಸ ಮುಂದೂಡಿ :** ಪ್ರವಾಸಿಗರು ತೀವ್ರ ಮಳೆ ಬೀಳುವ ಪ್ರೇಕ್ಷಣೀಯ, ಜಲಪಾತಗಳು ಅಥವಾ ಇತರೆ ಸ್ಥಳಗಳಿಗೆ ಈ ಸಮಯದಲ್ಲಿ ಭೇಟಿ ನೀಡದಿರುವುದು ಒಳ್ಳೆಯದು ಎಂದು ಎಸ್ಪಿ ಸಲಹೆ ಮಾಡಿದ್ದಾರೆ.

ಚೂಪಾದ ಬಂಡೆ ಕಲ್ಲು, ಪಾಚಿಗಟ್ಟಿರುವ ಜಾರು ಮೇಲ್ಮೈ ಇರುವ ಸ್ಥಳಗಳಲ್ಲಿ ಮತ್ತು ಭಾರಿ ಮಳೆಯ ಸಮಯದಲ್ಲಿ ಜಲಪಾತಗಳ ಬಳಿ ನಡೆಯುವುದನ್ನು ಅಥವಾ ನೀರಿಗೆ ಇಳಿಯುವುದನ್ನು ತಪ್ಪಿಸಬೇಕು. ನೀರಿನ ಅಂಚಿನಿಂದ ಸುರಕ್ಷಿತ ಅಂತರವನ್ನು ಕಾಪಾಡಿಕೊಳ್ಳಬೇಕು. ಮಳೆಗಾಲಕ್ಕೆ ಹೊಂದಿಕೊಳ್ಳುವ ಬಟ್ಟೆದಿರಿಸುಗಳು ಮತ್ತು ಸೂಕ್ತ ಪಾದರಕ್ಷೆಗಳನ್ನು ಧರಿಸಬೇಕು.

**ಸೆಲ್ಫಿ, ಫೋಟೋ ಬೇಡ:** ನದಿಪಾತ್ರಗಳ, ಜಲಪಾತಗಳ ಬಳಿ ಅತೀ ಸಮೀಪದಿಂದ ಸೆಲ್ಫಿ ಕ್ಲಿಕ್ಕಿಸುವುದು, ಫೋಟೋ, ವಿಡಿಯೋ ತೆಗೆದುಕೊಳ್ಳುವುದನ್ನು ಮಾಡಬಾರದು. ನೀರಿನ ಒಳಗೆ ಇಳಿದು ಹುಚ್ಚಾಟವಾಡಬಾರದು. ಯಾವುದೇ ದುಸ್ಸಾಹಸಕ್ಕೆ ಪ್ರಯತ್ನಿಸಬಾರದು. ಸ್ಥಳೀಯ ವ್ಯಾಪ್ತಿಯ ಅಧಿಕಾರಿಗಳು ಮತ್ತು ಮಾರ್ಗದರ್ಶಿಗಳ ಸೂಚನೆಗಳನ್ನು ತಪ್ಪದೆ ಅನುಸರಿಸಬೇಕು ಎಂದಿದ್ದಾರೆ.

ಪ್ರವಾಸೋದ್ಯಮ, ಅರಣ್ಯ ಹಾಗೂ ಜಿಲ್ಲಾಡಳಿತ ವತಿಯಿಂದ ನೀಡಿರುವ ಸೂಚನೆಗಳು ಮತ್ತು ಎಚ್ಚರಿಕೆಗಳನ್ನು ಚಾಚುತಪ್ಪದೆ ಪಾಲಿಸಬೇಕು. ಹಳೆಯ ವೀಡಿಯೊಗಳು ಅಥವಾ ಫೋಟೋಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಶೇರ್‌ಮಾಡಿ ಹಂಚಿಕೊಳ್ಳಬಾರದು. ಬ್ಯಾರಿಕೇಡ್‌ಗಳನ್ನು ದಾಟಲು ಪ್ರಯತ್ನಿಸಬಾರದು ಮತ್ತು ಸಾಹಸ ಚಟುವಟಿಕೆಗಳನ್ನು ಮಾಡಬಾರದು. ನಿಧಾನವಾಗಿ ಮತ್ತು ರಕ್ಷಣಾತ್ಮಕವಾಗಿ ಎಚ್ಚರಿಕೆಯಿಂದ ವಾಹನಗಳನ್ನು ಚಾಲನೆ ಮಾಡಬೇಕು.

# ಮಳೆ ಆರ್ಭಟದ ನಡುವೆ ಕಾಡಾನೆ ದಾಂಧಲೆ

**ಬೇಲೂರು:** ತಾಲೂಕಿನ ಕೊಗೋಡು ಗ್ರಾಮದ ಯೋಗೇಂದ್ರ ಅವರ ಕಾಫಿ ಮತ್ತು ಮೆಣಸು ತೋಟ ಕಾಡಾನೆ ದಾಳಿಗೆ ಹಾನಿಯಾಗಿರುವ ಘಟನೆ ನಡೆದಿದೆ.

ಕಾಡಾನೆ ಹಾವಳಿಯಿಂದ ಕಾಫಿ ಮತ್ತು ಮೆಣಸು ಆನೆಗಳ ದಾಳಿಯಿಂದ ನಾಶವಾಗಿದ್ದು ಇದರಿಂದ ಸಾಕಷ್ಟು ನಷ್ಟವಾಗಿದ್ದು ಕಾಫಿತೋಟ ಬೆಳೆಗಾರರು ನಷ್ಟ ಅನುಭವಿಸುವಂತಾಗಿದೆ.

ಈ ಬಗ್ಗೆ ಮಾತನಾಡಿದ ಕೋಗೋಡು ಗ್ರಾಮದ ಯೊಗೇಶ್, ಮಲೆನಾಡು ಪ್ರದೇಶವಾದ ಕೊಗೋಡು ಗ್ರಾಮದಲ್ಲಿ ಇಂದು ಮುಂಜಾನೆ ಆನೆಗಳ ದಾಳಿಯಿಂದ ನಮ್ಮ ತೋಟದಲ್ಲಿ ಬೆಳೆದಿದ್ದ ಮೆಣಸು, ಕಾಫಿ, ಬಾಳೆಗಿಡಗಳನ್ನು ತುಳಿದು ನಾಶಮಾಡಿದೆ. ಇದರಿಂದ ರೈತರು ಬೆಳೆಗಾರರು ಕಂಗಾಲಾಗಿದ್ದಾರೆ ಎಂದರು. ತಮ್ಮ ಬೆಳೆಗಳನ್ನು ಕಳೆದುಕೊಂಡಿದ್ದಾರೆ. ಆರ್ಥಿಕವಾಗಿ ಸಾಕಷ್ಟು ನಷ್ಟವಾಗಿದೆ. ನಮ್ಮ ತೋಟದಲ್ಲಿ ಸಾಕಷ್ಟು ಬೆಳೆ ನಾಶವಾಗಿದೆ. ಕೃಷಿಯನ್ನೇ ನಂಬಿಕೊಂಡು ನಾವು ಜೀವನ ನಡೆಸುತ್ತಿದ್ದೇವೆ.



# ಹೋಟೆಲ್ ಮಾಲೀಕರು ಸ್ವಚ್ಛತೆ ಕಾಪಾಡಿ ಕೋವಿಡ್ ನಿಯಂತ್ರಣಕ್ಕೆ ಸಹಕರಿಸಿ : ಸುಜಾತ

**ಚಿಕ್ಕಮಗಳೂರು**-ಕೋವಿಡ್ ಮಹಾಮಾರಿ ಪುನಃ ಪತ್ತೆಯಾಗಿರುವ ಹಿನ್ನೆಲೆಯಲ್ಲಿ ಹೋಟೆಲ್‌ಗೆ ಗ್ರಾಹಕರು, ಸಾರ್ವಜನಿಕರು ಬಂದಾಗ ಸ್ವಚ್ಛತೆ ಮತ್ತು ಅಂತರ ಕಾಪಾಡುವ ಮೂಲಕ ಅಗತ್ಯ ಮುಂಜಾಗ್ರತಾ ಕ್ರಮ ಕೈಗೊಂಡು ಕೋವಿಡ್ ನಿಯಂತ್ರಣಕ್ಕೆ ಸಹಕರಿಸಬೇಕೆಂದು ನಗರಸಭಾ ಅಧ್ಯಕ್ಷೆ ಸುಜಾತ ಶಿವಕುಮಾರ್ ತಿಳಿಸಿದರು.

ಅವರು ಇಂದು ನಗರಸಭೆ ಆವರಣದಲ್ಲಿ ಕರೆಯಲಾಗಿದ್ದ ಹೋಟೆಲ್ ಮಾಲೀಕರು, ಲಾಡ್ಜ್ ಹಾಗೂ ತಿಂಡಿ ಗಾಡಿಗಳ ಮಾಲೀಕರ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು.

ಹೋಟೆಲ್‌ನಲ್ಲಿ ನೀರು ಸಂಗ್ರಹಗಾರಗಳ ಮುಚ್ಚಳ ಮುಚ್ಚಿರಬೇಕು, ದಿನಕ್ಕೆ ಎರಡು ಬಾರಿ ಫಿನಾಯಲ್ ಹಾಕಿ ಹೋಟೆಲ್ ನೆಲವನ್ನು ಸ್ವಚ್ಛಗೊಳಿಸಬೇಕು ಎಂದು ಈ ಸಭೆಯ ಮೂಲಕ ಜಾಗೃತಿ ಮೂಡಿಸುತ್ತಿರುವುದಾಗಿ ಸೂಚಿಸಿದರು.

ಚಿಕ್ಕಮಗಳೂರು ಜಿಲ್ಲೆ ಪ್ರವಾಸೋದ್ಯಮಕ್ಕೆ ಹೆಸರುವಾಸಿಯಾಗಿದ್ದು, ಬೆಂಗಳೂರು ಮತ್ತು




ಮೈಸೂರು ಸೇರಿದಂತೆ ಹೊರ ಜಿಲ್ಲೆಗಳಿಂದ ಅತಿ ಹೆಚ್ಚು ಪ್ರವಾಸಿಗರು ಆಗಮಿಸುತ್ತಿದ್ದಾರೆ, ಇದರಿಂದಾಗಿ ಸಾಂಕ್ರಾಮಿಕ ರೋಗಗಳು ಹರಡುವ ಸಾಧ್ಯತೆ ಇರುವುದರಿಂದ ಅಗತ್ಯ ಮುಂಜಾಗ್ರತೆ ವಹಿಸಬೇಕೆಂದು ಹೇಳಿದರು.

ಒಳ್ಳೆಯ ಆಹಾರ ಆರೋಗ್ಯಕ್ಕೆ ಪೂರಕವಾಗಿದ್ದು, ಈ ನಿಟ್ಟಿನಲ್ಲಿ ಸಾರ್ವಜನಿಕರು ಹಾಗೂ ಗ್ರಾಹಕರ ಆರೋಗ್ಯವನ್ನು ಕಾಪಾಡುವಲ್ಲಿ ಹೋಟೆಲ್ ಮಾಲೀಕರು ಶುಚಿ-ರುಚಿಗೆ ಆದ್ಯತೆ ನೀಡಬೇಕೆಂದು ಸಲಹೆ ನೀಡಿ-ದರು.

ಪ್ಲಾಸ್ಟಿಕ್ ಬಳಕೆಯನ್ನು ಸಂಪೂರ್ಣವಾಗಿ ನಿಷೇಧಿಸಿದಾಗ ಮಾತ್ರ ಆರೋಗ್ಯ ಪೂರ್ಣ ಸಮಾಜ ನಿರ್ಮಾಣ ಮಾಡಲು ಸಾಧ್ಯ. ಪ್ರಕೃತಿ ವೀಕ್ಷಣೆಗೆ ಬರುವ ಪ್ರವಾಸಿಗರು ಪ್ಲಾಸ್ಟಿಕ್ ಬಾಟಲಿಯನ್ನು ಬಳಸುವುದರಿಂದ ಪರಿಸರ ಮಾಲಿನ್ಯ ಉಂಟಾಗಿ ಕಲುಷಿತ ವಾತಾವರಣಕ್ಕೆ ಕಾರಣವಾಗುತ್ತದೆ ಎಂದು ಹೇಳಿದರು.

ನಗರದ ನಾಗರೀಕರು ಹಸಿ ಕಸ, ಒಣ ಕಸ ವಿಂಗಡಿಸಿ ಕಸದ ಗಾಡಿಗೆ ಹಾಕಿದ ಪರಿಣಾಮ ಕಸ ವಿಲೇವಾರಿಯಿಂದ ನಗರಸಭೆಗೆ 10.50 ಲಕ್ಷ ರೂ ಆದಾಯ ಬಂದಿದೆ, ಇದಕ್ಕೆ ಸಾರ್ವಜನಿಕರ ಸಹಭಾಗಿತ್ವ ಕಾರಣ ಎಂದರು.

ಸಂಚಾರಿ ಠಾಣೆ ಪೊಲೀಸ್ ಅಧಿಕಾರಿ ಧನಂಜಯ ಮಾತನಾಡಿ ನಗರದಲ್ಲಿ ಎಲ್ಲಾ ರಸ್ತೆಗಳು ಕಿರಿದಾಗಿದ್ದು, ವಾಹನ ನಿಲುಗಡೆಯಿಂದ ವಾಹನಗಳ ಸಂಚಾರ-ಕ್ಕೆ ತೊಂದರೆಯಾಗುತ್ತಿದೆ, ಐಜಿ ರಸ್ತೆ, ಎಂಜಿ ರಸ್ತೆಯಲ್ಲಿ ವಾಹನ ನಿಲುಗಡೆ ಮಾಡದೆ ಲಾಡ್ಜ್ ಮತ್ತು ಹೋಟೆಲ್‌ನಲ್ಲಿ ತಂಗಿರುವವರು ಅಲ್ಲಿಯೇ ಪಾರ್ಕಿಂಗ್ ಮಾಡಿಕೊಳ್ಳಿ ಎಂದು ಸಲಹೆ ನೀಡಿದರು.

ಇತ್ತೀಚೆಗೆ ನಗರದ ರಸ್ತೆಯ ಎರಡೂ ಬದಿಗಳಲ್ಲಿ ಪಾರ್ಕಿಂಗ್ ಮಾಡಲು ಅವಕಾಶ ನೀಡಲಾಗಿದೆ, ದ್ವಿ-ಚಕ್ರ, ನಾಲ್ಕು ಚಕ್ರ ವಾಹನಗಳ ನಿಲುಗಡೆಗೆ ಅಂತರ ನೀಡಲಾಗಿದ್ದು, ನಿಯಮ ಉಲ್ಲಂಘಿಸಿ ಅಡ್ಡಾದಿಡ್ಡಿ ವಾಹನ ನಿಲುಗಡೆ ಮಾಡುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದಾಗಿ ಎಚ್ಚರಿಸಿದರು.

ಶಿಕ್ಷಣ, ಪರಿಸರ, ಸಂಚಾರಿ ನಿಯಮಗಳ ಪಾಲನೆ ಬಗ್ಗೆ ಅರಿವು ಮೂಡಿಸುವ ವಿವಿಧ ರೀತಿಯ ಕಾರ್ಯಕ್ರಮಗಳನ್ನು ಪೊಲೀಸ್ ಇಲಾಖೆ ಆಯೋಜನೆ ಮಾಡುವ ಮೂಲಕ ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುತ್ತಿದೆ ಎಂದರು.

ಸಭೆಯಲ್ಲಿ ನಗರಸಭೆ ಉಪಾಧ್ಯಕ್ಷೆ ಅನುಮಧುಕರ್, ಇಂಜಿನಿಯರ್ ಲೋಕೇಶ್, ಆರೋಗ್ಯ ನಿರೀಕ್ಷಕರಾದ ವೆಂಕಟೇಶ್, ಈಶ್ವರ್, ನಾಗಪ್ಪ, ರಂಗಪ್ಪ, ವ್ಯವಸ್ಥಾಪಕರಾದ ರವಿ, ಸ್ಯಾನಿಟೇಜಿ ಸೂಪರ್‌ವೈಸರ್‌ಗಳಾದ ಅಣ್ಣಯ್ಯ, ಶ್ರೀನಿವಾಸ್, ವಿವೇಕ್, ಸತೀಶ್, ಹೋಟೆಲ್ ಮಾಲೀಕರು ಮತ್ತಿತರರು ಭಾಗವಹಿಸಿದ್ದರು.

## ಆಸ್ಟ್ರಿಯಾದ ಶಾಲೆಯಲ್ಲಿ ಭೀಕರ ಗುಂಡಿನ ದಾಳಿ : ವಿದ್ಯಾರ್ಥಿಗಳು, ಸಿಬ್ಬಂದಿ ಸೇರಿ 10 ಮಂದಿ ಸಾವು

**ಹೊಸದಿಲ್ಲಿ:** ಆಸ್ಟ್ರಿಯಾದ ಗ್ರಾಜ್‌ನಲ್ಲಿರುವ ಶಾಲೆಯೊಂದರಲ್ಲಿ ಮಂಗಳವಾರ ಗುಂಡಿನ ದಾಳಿ ನಡೆದಿದೆ. ಘಟನೆಯಲ್ಲಿ 10 ಮಂದಿ ಸಾವನ್ನಪ್ಪಿದ್ದಾರೆ. ಇನ್ನು ಶೂಟರ್ ಇದೇ ಶಾಲೆಯ ವಿದ್ಯಾರ್ಥಿಯಾಗಿದ್ದು ಆತ ಕೂಡ ದಾಳಿಯ ನಂತರ ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಗ್ರಾಜ್‌ನ ಬೋರ್ಗ್ ಡ್ರೈಯರ್ ಸ್ಚುಟ್ಜೆನ್‌ಗಾಸ್ಸೆ ಎಂಬ ಪ್ರೌಢಶಾಲೆಯಲ್ಲಿ ಈ ಗುಂಡಿನ ದಾಳಿ ನಡೆದಿದೆ. ಈ ದುರಂತದಲ್ಲಿ ವಿದ್ಯಾರ್ಥಿಗಳು ಮತ್ತು ಸಿಬ್ಬಂದಿ ಇಬ್ಬರೂ ಸಾವನ್ನಪ್ಪಿದ್ದಾರೆ. ದಾಳಿಯ ನಂತರ ಆತ ಆತ್ಮಹತ್ಯೆ ಮಾಡಿಕೊಂಡ ಶೂಟರ್‌ನ ಮೃತದೇಹ ಶಾಲೆಯ ವಾಶ್‌ರೂಂನಲ್ಲಿ ಪತ್ತೆಯಾಗಿದೆ. ಗುಂಡಿನ ಸದ್ದು ಕೇಳಿಬಂದಿದೆ ಎಂದು ಬೆಳಿಗ್ಗೆ 10 ಗಂಟೆಗೆ ಪೊಲೀಸರಿಗೆ ಕರೆ ಬಂದಿತು. ತಕ್ಷಣ ಪೊಲೀಸರು ಸ್ಥಳಕ್ಕೆ ಧಾವಿಸಿದರು. ಶಾಲೆಯನ್ನು ಖಾಲಿ ಮಾಡಿಸಲಾಗಿದೆ. ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಯನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸಲಾಗಿದೆ. ಸ್ಥಳದಲ್ಲಿ ಯಾವುದೇ ಅಪಾಯವಿಲ್ಲ ಎಂದು ಪೊಲೀಸರು ಖಚಿತಪಡಿಸಿದ್ದಾರೆ. ಜತೆಗೆ ಆ ಪ್ರದೇಶವನ್ನು ಸುರಕ್ಷಿತ ಎಂದು ಘೋಷಿಸಿದ್ದಾರೆ.

ಸದ್ಯ ಪೊಲೀಸರು ಶಾಲೆಯ ಸುತ್ತಮುತ್ತಲಿನ ಪ್ರದೇಶವನ್ನು ಪರಿಶೀಲಿಸುತ್ತಿದ್ದಾರೆ. ಹೆಚ್ಚಿನ ತನಿಖೆ ನಡೆಯುತ್ತಿದ್ದು, ಈ ಘಟನೆಗೆ ನಿಖರ ಕಾರಣ ಪತ್ತೆಯಾಗಿಲ್ಲ. ಇನ್ನು ಘಟನೆಯ ಬಳಿಕ ಪೋಷಕರು, ಸ್ಥಳೀಯರು ಆಕ್ರೋಶಗೊಂಡಿದ್ದಾರೆ.

# ಬಿಎಂಸಿಆರ್‌ಸಿ ಯಲ್ಲಿ ಅಣಕು ಪ್ರದರ್ಶನ; ಅಗ್ನಿ ಅವಘಡ ತಡೆಗಟ್ಟುವಿಕೆ ಕುರಿತು ಜಾಗೃತಿ

**ಬಳ್ಳಾರಿ :** ಅಗ್ನಿ ಅವಘಡ ತಡೆಗಟ್ಟುವಿಕೆ ವೇಳೆ ಅನುಸರಿಸಬೇಕಾದ ಮುನ್ನೆಚ್ಚರಿಕೆ ಕ್ರಮಗಳು ಹಾಗೂ ಜಾಗೃತಿ ಮೂಡಿಸುವ ಕುರಿತು ನಗರದ ಬಳ್ಳಾರಿ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಕೇಂದ್ರದ ಆವರಣದಲ್ಲಿ ಜಿಲ್ಲಾ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆ ವತಿಯಿಂದ ಮಂಗಳವಾರ ಅಣಕು ಪ್ರದರ್ಶನ ನಡೆಯಿತು.

ಜಿಲ್ಲಾಡಳಿತ, ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ, ಬಿಮ್ಸ್ ಮತ್ತು ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆ ವತಿಯಿಂದ ಆಸ್ಪತ್ರೆಯಲ್ಲಿ ಅಗ್ನಿ ಅವಘಡ ತಡೆಗಟ್ಟುವಿಕೆಯಲ್ಲಿ ಅನುಸರಿಸಬೇಕಾದ ಮುನ್ನೆಚ್ಚರಿಕೆ ಕ್ರಮಗಳು ಮತ್ತು ಜವಾಬ್ದಾರಿಗಳು ಹಾಗೂ ಜಾಗೃತಿ ಮೂಡಿಸುವ ಕುರಿತು ಅಣಕು ಪ್ರದರ್ಶನದಲ್ಲಿ ವೈದ್ಯರು, ಸಿಬ್ಬಂದಿ ಮತ್ತು ಸಾರ್ವಜನಿಕರಿಗೆ ಮನವರಿಕೆ ಮಾಡಲಾಯಿತು.

ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್ ಅವರು ಭಾಗವಹಿಸಿ ಮಾತನಾಡಿ, ಬಳ್ಳಾರಿ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಕೇಂದ್ರದಲ್ಲಿ ತುರ್ತು ಪರಿಸ್ಥಿತಿ ಸಂದರ್ಭ ಬಂದಾಗ




ಆಸ್ಪತ್ರೆಯ ವೈದ್ಯಾಧಿಕಾರಿಗಳು, ವೈದ್ಯರು, ಶುಶ್ರೂಷಕರು, ಸಿಬ್ಬಂದಿ ಸೇರಿದಂತೆ ಸಾರ್ವಜನಿಕರು ಒಂದೆಡೆ ಸೇರಲು ಧ್ವನಿವರ್ಧಕ ಅಳವಡಿಸಬೇಕು ಎಂದು ಬಿಮ್ಸ್ ಆಡಳಿತಾಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಬರುವ ಸಾರ್ವಜನಿಕರಿಗೆ ಎಲ್ಲಾ ಮಾಹಿತಿಯನ್ನು ಒದಗಿಸುವ ಕಾರ್ಯವಾಗಬೇಕು. ಇದಕ್ಕೆ ಪರ್ಯಾಯವಾಗಿ ಧ್ವನಿವರ್ಧಕಗಳ ಬಳಸಬೇಕು. ಆಸ್ಪತ್ರೆಯಲ್ಲಿ ಯಾವುದೇ ರೀತಿಯ ತತ್‌ಕ್ಷಣ ಬೆಂಕಿಗೆ ನಾಂದಿಯಾಗುವಂತಹ ವಸ್ತುಗಳ ಮೇಲೆ ನಿಗಾವಹಿಸಬೇಕು. ತುರ್ತು ಸಂದರ್ಭದಲ್ಲಿ ಅತ್ಯಂತ ಎಚ್ಚರದಿಂದಿರಬೇಕು ಎಂದು ಹೇಳಿದರು.

ಜಿಲ್ಲಾ ಅಗ್ನಿಶಾಮಕ ಅಧಿಕಾರಿ ಹನುಮನಗೌಡ ಪೊಲೀಸ್ ಪಾಟೀಲ್ ಮಾತನಾಡಿ, ಆಸ್ಪತ್ರೆಗಳಲ್ಲಿ ಅಗ್ನಿಅವಘಡಸಂಭವಿಸಿದಲ್ಲಿಜಾಗರೂಕರಾಗಿರಬೇಕು. ಬೆಂಕಿ ನಂದಿಸುವ ಸಾಧನಗಳನ್ನು ಸುವ್ಯವಸ್ಥೆಯಲ್ಲಿ ಇಟ್ಟುಕೊಳ್ಳಬೇಕು. ಅಗ್ನಿಶಾಮಕ ದಳದವರು 24 ಗಂಟೆಯೂ ಸೇವೆ ನೀಡುತ್ತಾರೆ. ಜನರೂ ಜಾಗೃತರಾಗಿರಬೇಕು ಎಂದು ತಿಳಿಸಿದರು.

ಅಪಘಾತ ಸ್ಥಳದಲ್ಲಿ ನೀರಿನ ಸೌಕರ್ಯವಿಲ್ಲದಿದ್ದರೆ ಬೆಂಕಿಯನ್ನಾರಿಸುವುದು ಕಷ್ಟ. ಇಂಥ ಸನ್ನಿವೇಶಗಳಲ್ಲಿ ಆಧುನಿಕ ರೀತಿಯಲ್ಲಿ ತಯಾರಿಸಲಾಗಿರುವ ಬೆಂಕಿ ಆರಿಸುವ ಸಾಧನಗಳನ್ನು (ಫೈರ್ ಎಕ್ಸ್‌ಟಿಂಗ್ವಿಷರ್ಸ್) ಉಪಯೋಗಿಸಲಾಗುತ್ತದೆ. ಹಾಗಾಗಿ ಸಾರ್ವಜನಿಕರು ಇವುಗಳ ಸಾಮಾನ್ಯ ಮಾಹಿತಿಯೂ ಹೊಂದಬೇಕು ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ವಿವಿಧ ಬೆಂಕಿ ಆರಿಸುವ ಸಾಧನಗಳನ್ನು (ಫೈರ್ ಎಕ್ಸ್‌ಟಿಂಗ್ವಿಷರ್ಸ್) ಬಳಸಿ ಬೆಂಕಿ ನಂದಿಸುವ ಕಾರ್ಯದ ಅಣಕು ಪ್ರದರ್ಶಿಸಲಾಯಿತು.

ಬಳಿಕ ಅಗ್ನಿಶಾಮಕ ಅಧಿಕಾರಿಗಳ ತಂಡ ಮತ್ತು ಬಿಮ್ಸ್‌ನ ವೈದ್ಯಕೀಯ ಅಧೀಕ್ಷಕರಾದ ಡಾ.ಇಂಧುಮತಿ ಅವರ ನೇತೃತ್ವದಲ್ಲಿ ಬಿಮ್ಸ್ ಆಸ್ಪತ್ರೆಯ ಸಿಬ್ಬಂದಿಗಳ ತಂಡ ರಚಿಸಿ, ಕುತೂಹಲಕಾರಿಯಾಗಿ ಅಣಕು ಪ್ರದರ್ಶನ ನಡೆಸಲಾಯಿತು.

ಅಣಕು ಪ್ರದರ್ಶನದಲ್ಲಿ ಆಕಸ್ಮಿಕ ಅಗ್ನಿ ಅವಘಡ ಸಂಭವಿಸಿದಲ್ಲಿ ಬಳಸಬಹುದಾದ ಬೆಂಕಿ ನಂದಿಸುವ ಸಾಧನಗಳು, ಅಗ್ನಿ ಸಂಭವಿಸಿದ ಸ್ಥಳದಿಂದ ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಗೊಳಿಸುವುದು, ಪ್ರಥಮ ಚಿಕಿತ್ಸೆ ಹಾಗೂ ಇತರೆ ಕ್ರಮಗಳ ಕುರಿತು ಪರಿಪೂರ್ಣ ಮಾಹಿತಿ ನೀಡಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ರೋಗವಾಹಕ ಆಶ್ರೀತ ರೋಗಗಳ ನಿಯಂತ್ರಣಾಧಿಕಾರಿ ಡಾ.ಆರ್.ಅಬ್ದುಲ್ಲಾ, ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಪರಿಣಿತರಾದ ಪರಮೇಶ್ ಸೇರಿದಂತೆ ಬಳ್ಳಾರಿ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಕೇಂದ್ರದ ಇತರೆ ವೈದ್ಯಾಧಿಕಾರಿಗಳು, ಶುಶ್ರೂಷಕರು, ಸಿಬ್ಬಂದಿ ವರ್ಗದವರು ಹಾಗೂ ಇತರರು ಭಾಗವಹಿಸಿದ್ದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**